ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 19 | PAGE- ಪುಟ 8 | ಶುಕ್ರವಾರ 21.02.2025 | RS.ಬೆಲೆ 2/-

**WANTED**

Staff required for office works and Site Works.
Qualifications: Degree/ B.tech for office and Civil engineer for site works.
OFFICE NAME: SRI VENKATESHWARA GOLDEN CITY ADDRESS:
1st floor in Gadha complex,
Manik Nagar cross,
Humnabad - M No.7794016767

# ಮುಂಗಾರು ಪೂರ್ವ ಸಾಮಾನ್ಯಕ್ಕಿಂತ ಹೆಚ್ಚು ಮಳೆ ಸಾಧ್ಯತೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.20:ರಾಜ್ಯದಲ್ಲಿ ಮುಂಗಾರು ಪೂರ್ವದಲ್ಲಿ ಸಾಮಾನ್ಯಕ್ಕಿಂತ ಹೆಚ್ಚು ಮಳೆಯಾಗುವ ನಿರೀಕ್ಷೆಯಿದ್ದು, ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಉತ್ತಮ ಮಳೆಯಾಗುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ಈ ಫೆಬ್ರವರಿಯಲ್ಲಿ ತಾಪಮಾನವು ಸಾಮಾನ್ಯಕ್ಕಿಂತ 2.5 ಡಿಗ್ರಿ ಸೆಲ್ಸಿಯಸ್ ಹೆಚ್ಚಿದೆ. ಆದರೆ ಮುಂಗಾರು ಪೂರ್ವದಲ್ಲಿ ಸರಾಸರಿಗಿಂತ ಹೆಚ್ಚಿನ ಮಳೆಯಾಗುವ ನಿರೀಕ್ಷೆಯಿದೆ ಎಂದು ಅವರು ಹೇಳಿದ್ದಾರೆ.

ಇಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರ



ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ 2025ನೇ ಸಾಲಿನ ಹಿಂಗಾರು –ಮುಂಗಾರು ಮಳೆ ಸ್ಥಿತಿ, ಕೃಷಿ, ಕುಡಿಯುವ ನೀರು, ಹವಾಮಾನ ಹಾಗೂ ಅಣೆಕಟ್ಟೆಗಳಲ್ಲಿನ ನೀರಿನ ಮಟ್ಟದ ಕುರಿತು ಚರ್ಚಿಸಲಾಯಿತು.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕೃಷಿ ಸಚಿವ ಎನ್ ಚೆಲುವರಾಯಸ್ವಾಮಿ ಈ ಸಭೆಯಲ್ಲಿ ಭಾಗವಹಿಸಿದ್ದರು.

"ಪೂರ್ವ ಮಾನ್ಸೂನ್ ಋತುವಿನಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ನಿರೀಕ್ಷೆಯಿದೆ. ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಉತ್ತಮ ಮಳೆಯಾಗುತ್ತದೆ. ಫೆಬ್ರವರಿ ಮತ್ತು ಮಾರ್ಚ್ ಕೊನೆಯ ವಾರದಲ್ಲಿ ಮಳೆ ಹೆಚ್ಚಾಗುವ ಸಾಧ್ಯತೆಯೂ ಇದೆ. ಆದಾಗ್ಯೂ, ಹಿಂಗಾರಿನಲ್ಲಿ ಮಳೆ ಸರಾಸರಿಗಿಂತ ಕಡಿಮೆಯಾಗಿದೆ ಮತ್ತು ಅಕ್ಟೋಬರ್ ನಿಂದ ಡಿಸೆಂಬರ್ ವರೆಗೆ ಮಳೆ ಕಡಿಮೆಯಾಗುವ ನಿರೀಕ್ಷೆಯಿದೆ" ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

ಫೆಬ್ರವರಿಯಲ್ಲಿ ಈಗಾಗಲೇ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ದಾಖಲಾಗಿದ್ದು, ಸರಾಸರಿಗಿಂತ 2.5 ಡಿಗ್ರಿ ಸೆಲ್ಸಿಯಸ್ ಹೆಚ್ಚಳವಾಗಿದೆ. ಆದಾಗ್ಯೂ, ತಿಂಗಳ ಕೊನೆಯ ವಾರದಲ್ಲಿ ತಾಪಮಾನ ಕಡಿಮೆಯಾಗುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ವರದಿ ನೀಡಿದರು.

ನಂತರ, ರಾಜ್ಯಾದ್ಯಂತ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ನೋಡಿಕೊಳ್ಳುವಂತೆ ಮತ್ತು

(2ನೇ ಪುಟ ನೋಡಿ)

## ಸಚಿವ ರಹಿಂ ಖಾನ್ ವಿರುದ್ಧ ಸ್ವಪಕ್ಷದವರಿಂದಲೇ ಅಸಮಾಧಾನ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಫೆ.20: ಪೌರಾಡಳಿತ ಸಚಿವರಾದ ರಹಿಂ ಖಾನ್ ರವರು ಹುಮನಾಬಾದ್ ಕ್ಷೇತ್ರಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದಾರೆ ಇದು ಸರಿಯಾದ ಬೆಳವಣಿಗೆ ಅಲ್ಲ ಎಂದು ಪುರಸಭೆಯ ಅಧ್ಯಕ್ಷೆ ಪಾರ್ವತಿ ಶೇರಿಕರ, ಉಪಾಧ್ಯಕ್ಷ ಮುಕ್ರಂ, ಚಿಟಗುಪ್ಪಾ ಪುರಸಭೆಯ ಮುಸ್ತಾಫಾ ಪಟೇಲ್ ಸದಸ್ಯ ಅಫ್ಸರ್ ಮಿಯಾ ಹಾಗೂ ಇತರರು ಗುರುವಾರ ಜಂಟಿ ಪತ್ರಿಕಾಗೋಷ್ಠಿ ನಡೆಸಿ ಸಚಿವರ ವಿರುದ್ಧ ಅಸಮಧಾನ ವ್ಯಕ್ತಪಡಿಸಿದ್ದಾರೆ. ಹುಮನಾಬಾದ್ ಕ್ಷೇತ್ರದ ಮೂರು ಪುರಸಭೆಗೆಳಿಗೆ ಮಾಜಿ ಸಚಿವ ರಾಜಶೇಖರ



ಪಾಟೀಲ ರವರು ಎಸ್.ಎಫ್.ಸಿ. ವಿಶೇಷ ಅನುದಾನದಡಿಯಲ್ಲಿ. ತಲಾ 1 ಕೋಟಿ ಒಟ್ಟು 3 ಕೋಟಿ ಅನುದಾನ ಮಂಜೂರು ಮಾಡಿಸಿರುತ್ತಾರೆ. ಆ ಅನುದಾನವನ್ನು ಪೌರಾಡಳಿತ ಸಚಿವರಾದ ರಹಿಂ ಖಾನ್ ರವರು ತಮ್ಮ ಅಧಿಕಾರ ಚಲಾಯಿಸಿ ಅದನ್ನು ಭಾಲ್ಕಿ ಪುರಸಭೆ. ಹಾಗೂ ಬೀದರ್ ನಗರಸಭೆಗೆ ವರ್ಗಾವಣೆ ಮಾಡಿಸಿಕೊಂಡಿದ್ದಾರೆ. ಇದು ಸರಿಯಲ್ಲ ತಕ್ಷಣ ನಮ್ಮ ಅನುದಾನ ನಮಗೆ ನೀಡಬೇಕು ಎಂದು ಒತ್ತಾಯಿಸಿದರು. ಹುಮನಾಬಾದ್ ಕ್ಷೇತ್ರದ ಮೂರು ಪುರಸಭೆಗಳು ಕಾಂಗ್ರೆಸ್ ಪಕ್ಷದ ತೆಕ್ಕೆಗೆ ಸೇರಿವೆ. ನಾವೆಲ್ಲರೂ ಕಾಂಗ್ರೆಸ್ ಪಕ್ಷದ ಸದಸ್ಯರಿದ್ದೆವೆ ಮುಂದಿನ ನವೆಂಬರ್ ನಲ್ಲಿ ಪುರಸಭೆ ಚುನಾವಣೆ ಬರಲಿವೆ ಹಾಗಿದ್ದ ಮೇಲೆ. ಇವರು ಅನುದಾನ ವಾಪಸ್ ಪಡೆದರೆ ನಾವು ವಾರ್ಡಗಳಲ್ಲಿ ಹೇಗೆ ಕೆಲಸ ಮಾಡಲು ಸಾಧ್ಯ ಎಂದು ಅವರು ಪ್ರಶ್ನಿಸಿದ್ದಾರೆ.

ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಕೂಡ ಗಮನ ಹರಿಸಬೇಕು. ಎಂದು ಅವರು ಮನವಿ ಮಾಡಿದ್ದಾರೆ.

## ದೆಹಲಿ ಮುಖ್ಯಮಂತ್ರಿಯಾಗಿ ರೇಖಾ ಗುಪ್ತಾ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಫೆ.20:ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ರೇಖಾ ಗುಪ್ತಾ ಪ್ರಮಾಣವಚನ ಸ್ವೀಕರಿಸಿದ್ದಾರೆ. ಅವರೊಂದಿಗೆ ಆರು ಶಾಸಕರು ಇಂದು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಪರ್ವೇಶ್ ವರ್ಮಾ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಇದರಲ್ಲಿ ಪರ್ವೇಶ್ ವರ್ಮಾ, ಮಂಜಿಂದರ್ ಸಿಂಗ್ ಸಿರ್ಸಾ, ರವೀಂದ್ರ ಇಂದ್ರರಾಜ್, ಕಪಿಲ್ ಮಿಶ್ರಾ, ರ್ವಾ ಅವರು ನವದೆಹಲಿ ಕ್ಷೇತ್ರದಿಂದ ಅರವಿಂದ್ ಕೇಜ್ರಿವಾಲ್ ಅವರನ್ನು ಸೋಲಿಸಿದ್ದಾರೆ. ಕಪಿಲ್ ಮಿಶ್ರಾ ಕರವಾಲ್ ನಗರದಿಂದ ಶಾಸಕರಾಗಿದ್ದಾರೆ. ಮಂಜಿಂದರ್ ಸಿಂಗ್ ಸಿರ್ಸಾ ರಾಜೌರಿ ಗಾರ್ಡನ್



ಕ್ಷೇತ್ರದ ಶಾಸಕರು. ಆಶಿಶ್ ಸೂದ್ ಜನಕ್‌ಪುರಿಯ ಶಾಸಕರು. ಪಂಕಜ್ ಸಿಂಗ್ ವಿಕಾಸಪುರಿಯ ಶಾಸಕರು. ರವೀಂದ್ರ ಇಂದ್ರರಾಜ್ ಬವಾನದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಪರ್ವೇಶ್ ವರ್ಮಾ ಜಾಟ್ ಸಮುದಾಯಕ್ಕೆ ಸೇರಿದವರು. ಸಿರ್ಸಾ ಬಿಜೆಪಿಯ ದೊಡ್ಡ ಸಿಖ್ ಮುಖ ಎಂದು ಪ್ರಸಿದ್ಧವಾಗಿದೆ. ರವೀಂದ್ರ ಇಂದ್ರರಾಜ್ ಬಿಜೆಪಿಯ ದಲಿತ ಮುಖ. ಕಪಿಲ್ ಮಿಶ್ರಾ ಬ್ರಾಹ್ಮಣ ಮುಖವಾಗಿದ್ದು, ಆಮ್ ಆದ್ಮಿ ಪಕ್ಷದಿಂದ ಬಿಜೆಪಿಗೆ ಸೇರಿದ್ದರು. ಆಶಿಶ್ ಸೂದ್ ಪಕ್ಷದ ಹಿರಿಯ ನಾಯಕ ಮತ್ತು ಪಂಜಾಬಿ ಮುಖ. ಪ್ರಸ್ತುತ ಅವರು ಗೋವಾದ ಉಸ್ತುವಾರಿ ಮತ್ತು ಜಮ್ಮು ಮತ್ತು ಕಾಶ್ಮೀರದ ಸಹ–ಉಸ್ತುವಾರಿಯಾಗಿದ್ದಾರೆ. ಪಂಕಜ್ ಸಿಂಗ್ ಪೂರ್ವ ಪ್ರದೇಶದ ಮುಖ. ಇಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ಪ್ರಮಾಣವಚನ ಸ್ವೀಕಾರ ಸಮಾರಂಭ ನಡೆದಿದೆ. ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಏಕನಾಥ್ ಶಿಂದೆ, ಚಂದ್ರಬಾಬು ನಾಯ್ಡು, ರಾಜನಾಥ್ ಸಿಂಗ್ ಸೇರಿ ಹಲವರು ಪಾಲ್ಗೊಂಡಿದ್ದರು.

## ವೇಗವಾಗಿ 200 ವಿಕೇಟ್ ಪಡೆದ ಜಗತ್ತಿನ ಮೊದಲ ಬೌಲರ್ ಶಮಿ




ಮಲ್ಲಮ್ಮ ನುಡಿ ವಾರ್ತೆ

ದುಬೈ:ಫೆ.20:ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಟೂರ್ನಿಯ ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಭಾರತದ ವೇಗಿ ಮಹಮದ್ ಶಮಿ ಇತಿಹಾಸ ನಿರ್ಮಿಸಿದ್ದು, ವೇಗವಾಗಿ 200 ವಿಕೆಟ್ ಪಡೆದ ಜಗತ್ತಿನ ಮೊದಲ ಬೌಲರ್ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ.

ದುಬೈನ ದುಬೈ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಶಮಿ ಈ ದಾಖಲೆ ನಿರ್ಮಾಣ ಮಾಡಿದ್ದು, ಆ ಮೂಲಕ ಆಸ್ಟ್ರೇಲಿಯಾ ಮಿಚೆಲ್ ಸ್ಟಾರ್ಕ್ ಹೆಸರಿನಲ್ಲಿದ್ದ ಈ ದಾಖಲೆಯನ್ನು ತಮ್ಮ ಹೆಸರಿಗೆ ಬರೆದುಕೊಂಡಿದ್ದಾರೆ.

ಗುರುವಾರ ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಕರಾರುವಕ್ಕಾದ ಬೌಲಿಂದ್ ದಾಳಿ ನಡೆಸಿದ ಶಮಿ, 10 ಓವರ್ ಎಸೆದು 5.30 ಎಕಾನಮಿಯಲ್ಲಿ 53 ರನ್ ನೀಡಿ 5 ವಿಕೆಟ್ ಪಡೆದರು. ಆ ಮೂಲಕ ಭಾರತದ ಪರ ಗರಿಷ್ಠ ವಿಕೆಟ್ ಪಡೆದ ಬೌಲರ್ ಎನಿಸಿಕೊಂಡರು.

ಇನ್ನು ಈ ಪಂದ್ಯದ ಮೂಲಕ ಶಮಿ ಏಕದಿನ ಕ್ರಿಕೆಟ್ ನಲ್ಲಿ ವೇಗದ 200 ವಿಕೆಟ್ ಪಡೆದ ಜಗತ್ತಿನ ಬೌಲರ್ ಗಳ ಪಟ್ಟಿಯಲ್ಲಿ ಜಂಟಿ ಅಗ್ರಸ್ಥಾನಕ್ಕೇರಿದ್ದಾರೆ. ಈ ಪಟ್ಟಿಯಲ್ಲಿ

(2ನೇ ಪುಟ ನೋಡಿ)

## ಉದ್ಯೋಗ ಖಾತ್ರಿ ಅನುದಾನ ದುರ್ಬಳಕೆ


## ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ನಾಗರತ್ನ, ಕೃಷಿ ಅಧಿಕಾರಿ ಸಿದ್ದಪ್ಪ ಸಸ್ಪೆಂಡ್

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ:ಫೆ.20:ತಾಲೂಕಿನ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ.ಎಡಿ. ನಾಗರತ್ನ ಎಚ ಹುಲಕೋಟಿ ಹಾಗೂ ಕೃಷಿ ಅಧಿಕಾರಿ ಸಿದ್ದಪ್ಪ ಬಾಚಿಹಾಳ ಅವರನ್ನು ಉದ್ಯೋಗ ಖಾತ್ರಿ ಅನುದಾನ ದುರ್ಬಳಕೆ ಹಿನ್ನಲೆಯಲ್ಲಿ ರಾಯಚೂರು ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಶಿಫಾರಸ್ಸು ಮೇರೆಗೆ ಕರ್ನಾಟಕ ಸರಕಾರದ ಕೃಷಿ ಇಲಾಖೆ ಕಾರ್ಯದರ್ಶಿಗಳು ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

ಲಿಂಗಸುಗೂರ ತಾಲೂಕಿನ ಆನೆಹೊಸೂರ ಹಾಗೂ ಇತರೆ ಗ್ರಾಮ ಪಂಚಾಯತಿಯಲ್ಲಿ





2024–25 ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೃಷಿ ಇಲಾಖೆಯ ಮುಖೇನ ಅನುಷ್ಠಾನಗೊಂಡ ಕಾಮಗಾರಿಗಳಲ್ಲಿ 2.75.7307 ಕೋಟಿ ರೂಗಳ ಅವ್ಯವಹಾರಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಜರಗಿಸಲು ಕಾರ್ಯನಿರ್ವಾಹಕ ಅಧಿಕಾರಿ ತಾಲೂಕು ಪಂಚಾಯತ ಲಿಂಗಸುಗೂರ ಅವರು ಕೋರಿದ ಹಿನ್ನಲೆಯಲ್ಲಿ ರಾಯಚೂರು ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಮಟ್ಟದ ವಿವಿಧ ಇಲಾಖೆ 7 ತನಿಖಾ ಅಧಿಕಾರಿಗಳ ತಂಡ ವರದಿ ಹಿನ್ನಲೆಯಲ್ಲಿ ಉದ್ಯೋಗ ಖಾತ್ರಿ ಬದು ನಿರ್ಮಾಣ

(2ನೇ ಪುಟ ನೋಡಿ)

## ಹಣಕಾಸು ಸಂಸ್ಥೆಗಳು ಭಾರತೀಯ ರಿಸರ್ವ್ ಬ್ಯಾಂಕ್‌ಗಳ ನಿಯಮಗಳನ್ನು ಚಾಚೂ ತಪ್ಪದೆ ಪಾಲಿಸಬೇಕು:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.20 ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ, ಫೈನಾನ್ಸಗಳು, ಲೇವಾದೇವಿ ವ್ಯಾಪಾರಸ್ಥರು, ಮೈಕ್ರೋ ಫೈನಾನ್ಸ್ ಹಣಕಾಸು ಸಂಸ್ಥೆಗಳು ಭಾರತೀಯ ರಿಸರ್ವ್ ಬ್ಯಾಂಕ್‌ಗಳು ನೀಡುವ ಮಾರ್ಗದರ್ಶನಗಳು ಹಾಗೂ ನಿಯಮಗಳನ್ನು ಚಾಚೂ ತಪ್ಪದೆ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಾ, ಮೈಕ್ರೋ ಫೈನಾನ್ಸಗಳು ಸಾಲ ಕೊಡುವ ಮುನ್ನ ಸಾಲಗಾರರ ಕುಟುಂಬದ ಆದಾಯ ಸೇರಿದಂತೆ ಮತ್ತಿತರ ಪೂರ್ವಾಪರಿಗಳನ್ನು ಪರಿಶೀಲನೆಯನ್ನು ಮಾಡಿ, ಅವರ ಆದಾಯದ ಶೇ.



50 ರಷ್ಟು ಮಾತ್ರ ಸಾಲ ನೀಡಬೇಕು, ಆದರೆ, ಅವರು ಸಾಲ ತೆದುಕೊಳ್ಳುವ ಸಾಮರ್ಥ್ಯ ನೋಡದೇ ಸಾಲವನ್ನು ನೀಡಿರುವ ಬಗ್ಗೆ ಕಂಡುಬರುತ್ತಿದೆ. ಇವುಗಳಿಗೆ ಆಸ್ಪದ ನೀಡಬಾರದು. ಸಾಲ ನೀಡುವವರು ಹಾಗೂ ತೆಗೆದುಕೊಳ್ಳುವವರು ಇಬ್ಬರೂ ಸಹ ಆರ್ಥಿಕ ಶಿಸ್ತನ್ನು ಪಾಲಿಸಬೇಕು ಎಂದರು.

ಆರ್.ಬಿ.ಐ ಮಾರ್ಗಸೂಚಿಯ ಪ್ರಕಾರ ಮೈಕ್ರೋ ಫೈನಾನ್ಸಗಳು ರೂ. 3 ಲಕ್ಷದವರೆಗೆ ಮಾತ್ರ ಸಾಲ ನೀಡಲು ಅವಕಾಶವಿದೆ. ಸಾಲ ಮರುಪಾವತಿಯನ್ನು ಕಾನೂನಿನ ಅನ್ವಯ ಕ್ರಮಗಳನ್ನು ಕೈಗೊಳ್ಳಬೇಕು, ಕಾನೂನನ್ನು ಉಲ್ಲಂಘಿಸಿ, ದೌರ್ಜನ್ಯ, ಕೆಟ್ಟ ಪದಗಳಲ್ಲಿ ಬೈಯುವುದು, ದಬ್ಬಾಳಿಕೆ ಕಿರುಕುಳ ನೀಡುವುದು ಮಾಡಿದ್ದಲ್ಲಿ ಅಂತಹವರ ವಿರುದ್ಧ ಪೋಲೀಸ್‌ನವರು ಪ್ರಕರಣ ದಾಖಲಿಸಿಕೊಳ್ಳಲು ಅವಕಾಶವಿದೆ ಎಂದರು.

ಜಿಲ್ಲೆಯಲ್ಲಿ ಸುಮಾರು ರೂ. 1193 ಕೋಟಿ ಸಾಲ 1.79 ಸಾವಿರ ಜನರಿಗೆ ಸಾಲ ವಿತರಣೆ ಮಾಡಲಾಗಿದೆ. ಸಾಲ ವಸೂಲಾತಿಗಾಗಿ ಫೈನಾನ್ಸ್ ಕಂಪನಿಗಳು ಬೆಳಿಗ್ಗೆ 9 ಕ್ಕೂ ಮುನ್ನ ಸಂಜೆ 5ರ ನಂತರ ಸಾಲಗಾರರ ಮನೆಗೆ ಹೋಗಬಾರದು ಹಾಗೂ ಯವುದೇ ರೀತಿಯ ದೌರ್ಜನ್ಯಗಳನ್ನು ನಡೆಸಬಾರದು. ಒಂದೊಮ್ಮೆ ಉಲ್ಲಂಘಿಸಿದ್ದಲ್ಲಿ ಅಂತವರ ಮೇಲೆ ಕಾನೂನಿನ ಅಡಿಯಲ್ಲಿ ಕ್ರಮ ಕೈಕೊಳ್ಳಲಾಗುವುದೆಂದರು.

ಇ–ಖಾತಾ ಅಭಿಯಾನ: ಬೀದರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ–ಖಾತಾ ನೀಡುವ ಅಭಿಯಾನಕ್ಕೆ ಈಗಾಗಲೇ ಚಾಲನೆ ನೀಡಿದ್ದು, ಈ ಅಭಿಯಾನವನ್ನು ಮುಂದಿನ 3 ತಿಂಗಳ ಒಳಗಾಗಿ ಪೂರ್ಣಗೊಳಿಸಲು ಸಾರ್ವಜನಿಕರಿಗೆ ಅಗತ್ಯ ಮಾಹಿತಿ ನೀಡಿ, ನಿಗದಿತ ಕಾಲವಾಧಿಯಲ್ಲಿ ಕ್ರಮ ಕೈಗೊಳ್ಳುವಂತೆ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರಿಗೆ ಸೂಚಿಸಲಾಗಿದೆ ಎಂದರು.

ಸಾರ್ವಜನಿಕರಿಗೆ ತಮ್ಮ ಸ್ವತ್ತಿನ ಮಾಹಿತಿಯಲ್ಲಿ ತಿದ್ದು ಪಡಿಗಳಿದ್ದಲ್ಲಿ ಅಗತ್ಯ ದಾಖಲೆಗಳನ್ನು ನಗರ ಸ್ಥಳೀಯ ಸಂಸ್ಥೆಗೆ ಸಲ್ಲಿಸಿ ತಿದ್ದುಪಡಿ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ. ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಅನಧಿಕೃತ ಸ್ವತ್ತುಗಳಿಗೆ ಸಹ

(2ನೇ ಪುಟ ನೋಡಿ)

## ಮೂಡಾ ಪ್ರಕರಣ : ನ್ಯಾಯಾಲಯಕ್ಕೆ 11,200 ಪುಟಗಳ ವರದಿ ಸಲ್ಲಿಕೆ




ಬೆಂಗಳೂರು,ಫೆ.20:ರಾಜ್ಯ ರಾಜಕಾರಣದಲ್ಲಿ ಭಾರೀ ಬಿರುಗಾಳಿಯನ್ನೇ ಎಬ್ಬಿಸಿದ್ದ ಮೈಸೂರು ನಗಾರಭಿವೃದ್ಧಿ ಪ್ರಾಧಿಕಾರ (ಮೂಡಾ)ದಲ್ಲಿ ಆಕ್ರಮ ನಿವೇಶನ ಪಡೆದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅವರ ಕುಟುಂಬಸ್ಥರಿಗೆ ಲೋಕಾಯುಕ್ತ ಕ್ಲೀನ್ ಚಿಟ್ ನೀಡಿದೆ.

ಪ್ರಕರಣದ ತನಿಖೆ ನಡೆಸಿದ್ದ ಮೈಸೂರು ಲೋಕಾಯುಕ್ತ ಎಸ್.ಪಿ ಉದೇಶ್ ಅವರು, ಇಂದು ಮುಚ್ಚಿದಲಕೋಟೆಯಲ್ಲಿ ಸುಮಾರು 11,200 ಪುಟಗಳ ವರಿದಿಯನ್ನು ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರಿದ್ದ ಪೀಠಕ್ಕೆ ಸಲ್ಲಿಸಿದ್ದಾರೆ.

ನ್ಯಾಯಾಲಯವು ಮುಂದಿನ ವಿಚಾರಣೆಯನ್ನು ಸೋಮವಾರ (ಫೆ.24)ಕ್ಕೆ ಮುಂದೂಡಿದೆ. 50 ಜನರ ಹೇಳಿಕೆಗಳನ್ನು ದಾಖಲು ಮಾಡಿದ ಪೊಲೀಸರು 27

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಪಾಲಿಸಬೇಕು:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಖಾತಾ ನೀಡುವ ಸಂಬಂಧ ಕಾಯ್ದೆ ಮತ್ತು ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ಇದರಿಂದ ಅನಧಿಕೃತ ಸ್ವತ್ತುಗಳ ಮಾಲೀಕರು ತಮ್ಮ ಸ್ವತ್ತಿನ ಕಂದಾಯವನ್ನು ಪಾವತಿಸಿ, ಇ-ಖಾತಾ ಪಡೆಯಬಹುದಾಗಿದೆ. ಇದರಿಂದ ಬಹಳ ದಿನಗಳಿಂದ ಇದ್ದ ಅನಧಿಕೃತ ಸ್ವತ್ತುಗಳ ಖಾತಾ ಸಮಸ್ಯೆಗೆ ಪರಿಹಾರ ಕಲ್ಪಿಸಲಾಗಿದೆಂದರು.

ಸೆಪ್ಟೆಂಬರ 10, 2024 ರ ಕ್ಕಿಂತ ಮುಂಚಿನ ಆಸ್ತಿಗಳಿಗೆ ಸದರಿ ಕಾಯ್ದೆಯು ಅನ್ವಯವಾಗುತ್ತದೆ. ಸದರಿ ಅಭಿಯಾನವು ಒಂದು ಬಾರಿ ಪರಿಹಾರ ಕ್ರಮವಾಗಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ಸದರಿ ಅಭಿಯಾನದ ಸದುಪಯೋಗ ಪಡೆದುಕೊಳ್ಳಲು ಸಾರ್ವಜನಿಕರಿಗೆ ಈ ಸೌಲಭ್ಯದ ಮಾಹಿತಿ ತಲುಪುವಂತೆ ವ್ಯಾಪಕ ಪ್ರಚಾರ ಮಾಡಲಾಗುತ್ತದೆ. ಬೀದರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಆಸ್ತಿ ಲಭ್ಯ ಮಾಹಿತಿಯನ್ನು ಜಾಲತಾಣ http://aasthikanaja.karnatakasmartcity.in/kmf24 ರಲ್ಲಿ ಪ್ರಕಟಿಸಲಾಗಿದೆ. ಸಾರ್ವಜನಿಕರು ಈ ಜಾಲತಾಣಕ್ಕೆ ಭೇಟಿ ನೀಡಿ, ತಮ್ಮ ಸ್ವತ್ತಿನ ಮಾಹಿತಿಯು ಸರಿಯಾಗಿರುವ ಕುರಿತು ಪರಿಶೀಲಿಸಬಹುದಾಗಿದೆ ಎಂದರು.

ಸ್ವತ್ತಿನ ಮಾಲೀಕರು ತಮ್ಮ ನಗರ ಸ್ಥಳೀಯ ಸಂಸ್ಥೆಗೆ ಭೇಟಿ ನೀಡಿ, ವಾರ್ಡವಾರು ಆಯೋಜಿಸಲಾಗುವ ಮೇಳಗಳಲ್ಲಿ ಅಗತ್ಯ ದಾಖಲೆಗಳನ್ನು ಸಲ್ಲಿಸಿ, 07 ದಿನಗಳ ಒಳಗಾಗಿ ಇ-ಖಾತಾ ಪಡೆಯಬಹುದಾಗಿದೆ. ಈ ಕುರಿತು ಹೆಚ್ಚಿನ ಮಾಹಿತಿ ಪಡೆಯಲು ಹಾಗೂ ಸಾರ್ವಜನಿಕರ ಸಹಾಯಕ್ಕಾಗಿ ಬೀದರ ಜಿಲ್ಲೆಯ ಎಲ್ಲ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಹಾಯವಾಣಿಗಳನ್ನು ಸ್ಥಾಪಿಸಲಾಗಿದೆ. ಇ-ಖಾತಾ ನೀಡಲು ಅಭಿಯಾನ ಕೈಗೊಂಡು ನಿಗದಿತ ಕಾರ್ಯವಿಧಾನವನ್ನು ಅನುಸರಿಸಲಾಗುತ್ತಿದೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ-ಖಾತಾ ನೀಡಲು ಬಾಕಿಯಿರುವ ಆಸ್ತಿಗಳ ಗುರುತಿಸುವುದು. ಇ-ಖಾತಾ ಪಡೆಯಲು ಗುರುತಿಸಲಾದ ಆಸ್ತಿಗಳ ಮಾಲೀಕರು ಇ-ಖಾತಾ ಪಡೆಯಲು ಬೇಕಾದ ದಾಖಲೆಗಳನ್ನು ಸಲ್ಲಿಸಲು ಮಾಹಿತಿ ನೀಡಲಾಗುತ್ತದೆ ಎಂದರು.

ಇ-ಖಾತಾ ಅಭಿಯಾನದ ಕುರಿತು ಪ್ರಚಾರ ಮಾಡಲು ನಗರ ಸ್ಥಳೀಯ ಸಂಸ್ಥೆಗಳ ವಾಹನದಲ್ಲಿ ಮುದ್ರಿತ ಧ್ವನಿ (ಆಡಿಯೊ) ಪ್ರಚುರಪಡಿಸಲು, ಲಭ್ಯವಿರುವ ಮೊಬೈಲ್ ಸಂಖ್ಯೆಗಳಿಗೆ ಎಸ್‌ಎಂಎಸ್ ಮೂಲಕ ಮಾಹಿತಿ ನೀಡುವುದು ಮತ್ತು ಇ-ಖಾತಾ ಪಡೆಯಲು ಅವಶ್ಯವಿರುವ ದಾಖಲೆಗಳ ಪಟ್ಟಿಯನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರಚುರಪಡಿಸಲು ಸೂಚಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಎ-ರಿಜಿಸ್ಟರ್‌ನಲ್ಲಿ ದಾಖಲಿರುವ ಆಸ್ತಿಗಳಿಗೆ ಇ-ಖಾತಾ ಪಡೆಯಲು ನೀಡಬೇಕಾದ ದಾಖಲೆಗಳು: ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ನೋಂದಾಯಿತ ಮಾರಾಟ ಪತ್ರಗಳು, ದಾನಪತ್ರ, ವಿಭಾಗ ಪತ್ರಗಳು, ಸರ್ಕಾರ ಅಥವಾ ಸರ್ಕಾರದ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕು ಪತ್ರ ಇತ್ಯಾದಿಗಳ ಪೈಕಿ ಒಂದು ಪ್ರಮಾಣ ಪತ್ರವನ್ನು, ಮಂಜೂರಾತಿ ಪತ್ರಗಳು, ಕಂದಾಯ ಇಲಾಖೆಯಿಂದ 94 ಸಿಸಿ ಅಡಿ ನೀಡಲಾದ ಹಕ್ಕು ಪತ್ರ ಮತ್ತು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾದ ದೃಢೀಕೃತ ಪ್ರತಿ ಮತ್ತು ನಿವೇಶನಗಳ ಬಿಡುಗಡೆ ಪತ್ರ ಹಾಗೂ ಪ್ರಸಕ್ತ ಸಾಲಿನವರೆಗಿನ ಋಣಭಾರ ಪ್ರಮಾಣ ಪತ್ರ, ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಸೀದಿ, ಮಾಲೀಕರ ಫೋಟೋ ಮತ್ತು ಸ್ವತ್ತೀನ ಫೋಟೋ ಮತ್ತು ಮಾಲೀಕರ ಗುರುತಿನ ದಾಖಲೆ ಪ್ರತಿ ಸಲ್ಲಿಸಬೇಕು.

ಬಿ- ರಿಜಿಸ್ಟರ್‌ನಲ್ಲಿ ದಾಖಲಿರುವ ಆಸ್ತಿಗಳಿಗೆ ಇ-ಖಾತಾ ಪಡೆಯಲು ನೀಡಬೇಕಾದ ದಾಖಲೆಗಳು: ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತಪಡಿಸುವ ಸಪ್ಟೆಂಬರ 10, 2024 ರ ಪೂರ್ವದಲ್ಲಿ ನೋಂದಾಯಿತ ಮಾರಾಟ ಪತ್ರಗಳು, ದಾನಪತ್ರ, ವಿಭಾಗ ಪತ್ರಗಳು, ಹಕ್ಕು ಖುಲಾಸೆ ಪತ್ರಗಳು ಹಾಗೂ ಪ್ರಸಕ್ತ ಸಾಲಿನ ವರೆಗೆ ಋಣಭಾರ ಪ್ರಮಾಣ ಪತ್ರ, ಚಾಲ್ತಿ ಸಾಲಿನ ಆಸ್ತಿ ತೆರಿಗೆ ಪಾವತಿ ರಸೀದಿ, ಮಾಲೀಕರ ಫೋಟೋ ಮತ್ತು ಸ್ವತ್ತಿನ ಫೋಟೋ, ಮಾಲೀಕರ ಗುರುತಿನ ದಾಖಲೆ ಪ್ರತಿಗಳನ್ನು ಸಲ್ಲಿಸಬೇಕು. ವ್ಯವಸ್ಥಿತವಾಗಿ ಮತ್ತು ಸಂಘಟಿತ ರೀತಿಯಲ್ಲಿ ಮೇಳಗಳ ಆಯೋಜನೆ: ಇ-ಖಾತಾ ಅಭಿಯಾನದ ಅಂಗವಾಗಿ ನಗರದ ವಾರ್ಡ್ ಅಥವಾ ಬೀದಿಗಳನ್ನು, ಅಪಾರ್ಟ್ಮೆಂಟ್, ಲೇಔಟ್‌ನ್ನು ಗುರುತಿಸಿ, ಆ ಭಾಗದಲ್ಲಿನ ಸಕ್ರಿಯ ನಾಗರೀಕ ಗುಂಪುಗಳು ಅಥವಾ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಸಕ್ರಿಯ ವ್ಯಕ್ತಿಗಳ ಸಹಾಯವನ್ನು ಪಡೆದುಕೊಂಡು, ಇ-ಖಾತಾ ಇಲ್ಲದಿರುವ ಸ್ವತ್ತುಗಳ ಪಟ್ಟಿಯನ್ನು ಅಗತ್ಯ ಸ್ಥಳಗಳಲ್ಲಿ ಪ್ರಚುರಪಡಿಸಲಾಗುವುದೆಂದರು.

ನಾಗರೀಕರಿಗೆ ಅನುಕೂಲವಾಗುವ ಸ್ಥಳಗಳಲ್ಲಿ ಇ-ಖಾತಾ ಮೇಳವನ್ನು ಆಯೋಜಿಸಿ, ಇ-ಖಾತಾ ಪಡೆಯಲು ನಾಗರೀಕರು ಸಲ್ಲಿಸಬೇಕಾದ ಮಾಹಿತಿ, ದಾಖಲೆಗಳ ವಿವರವನ್ನು ತಿಳಿಸಲಾಗುವುದು. ಅಧಿಕೃತ ಸ್ವತ್ತಿನ ಮಾಲೀಕರು ಸಲ್ಲಿಸಬೇಕಾದ ದಾಖಲೆಗಳು, ಮತ್ತು ಅನಧಿಕೃತ ಸ್ವತ್ತಾಗಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳ ಮಾಹಿತಿಯ ವಿವರವನ್ನು ನಾಗರೀಕರಿಗೆ ಮೇಳದಲ್ಲಿ ನೀಡಲಾಗುವುದು ಎಂದು ಹೇಳಿದರು.

ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಸೂಕ್ತ ಕ್ರಮ: ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಮಾತನಾಡಿ, ಮುಂಬರುವ ಬೇಸಿಗೆಯಲ್ಲಿ ಜಿಲ್ಲೆಯ 46 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾಗಿದ್ದು, ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈಗಾಗಲೇ ಎಲ್ಲಾ ಗ್ರಾಮ ಪಂಚಾಯತ ಪಿಡಿಓ ಹಾಗೂ ತಾಲ್ಲೂಕ ಪಂಚಾಯತ ಅಧಿಕಾರಿಗಳ ಸಭೆ ಜರುಗಿಸಿ ಪೂರ್ವ ಸಿದ್ಧತೆ ಕೈಗೊಳ್ಳುವಂತೆ ಸೂಕ್ತ ನಿರ್ದೇಶನ ನೀಡಲಾಗಿದೆಯೆಂದರು. ಕಳೆದ ವರ್ಷ 90 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಂಟಾಗಿತ್ತು. 18 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಹಾಗೂ 72 ಬೋರವೆಲ್‌ಗಳ ಮೂಲಕ ನೀರು ಸರಬರಾಜು ಮಾಡಲಾಗಿತ್ತು ಎಂದರು. ಬಹುತೇಕ ಈ ಗ್ರಾಮಗಳು ಔರಾದ, ಭಾಲ್ಕಿ ಹಾಗೂ ಕಮಲನಗರ ತಾಲ್ಲೂಕುಗಳ ವ್ಯಾಪ್ತಿಗೊಳಪಡುತ್ತವೆ ಎಂದರು.ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಮಾರ್ಚ.21 ರಿಂದ ಏಪ್ರಿಲ್ 4 ರವರೆಗೆ ಜರುಗಲಿದ್ದು, ಪಾರದರ್ಶಕ ಪರೀಕ್ಷೆ ನಡೆಸಲು ಎಲ್ಲ ಕೇಂದ್ರಗಳಲ್ಲಿ ಸಿಸಿ ಟಿವಿ ವ್ಯವಸ್ಥೆ ಮಾಡಲಾಗಿದ್ದು ವೆಬ್ ಕಾಸ್ಟಿಂಗ್ ಸಹ ನಡೆಯಲಿದೆ. ಕಳೆದ ವರ್ಷ 62% ಫಲಿತಾಂಶ ಹಾಗೂ 30ನೇ ರ್‍ಯಾಂಕ್ ಬಂದಿತ್ತು. ಈ ಬಾರಿ ಫಲಿತಾಂಶ ಹಾಗೂ ರ್‍ಯಾಂಕ್ ಹೆಚ್ಚಳಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. 20 ಅಂಶಗಳ ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲಾಗಿದ್ದು ವಿದ್ಯಾರ್ಥಿಗಳಿಗೆ ಸದುಪಯೋಗವಾಗಿದೆ. ಬೆಳಿಗ್ಗೆ ಹಾಗೂ ಸಂಜೆ ವಿಶೇಷ ತರಗತಿ, ಘಟಕ ಪರೀಕ್ಷೆಗಳನ್ನು ಹಮ್ಮಿಕೊಳ್ಳಲಾಗಿದೆ. ಪ್ರಸಕ್ತ ಸಾಲಿನ ಪಠ್ಯಕ್ರಮವು ಡಿಸೆಂಬರ್ ಒಳಗೆ ಪೂರ್ಣಗೊಳಿಸಲಾಗಿದ್ದು, 2 ಬಾರಿ ಪುನರಾವಲೋಕನ ನಡೆಸಲಾಗಿದೆ. ಇತರೆ ಕಲಿಕಾಶ್ರಯ ಪುಸ್ತಕ ನೀಡಲಾಗಿದೆ. ಡಯಟ್‌ನಿಂದ ಫೋನ್ ಮೂಲಕ ಮಾರ್ಗದರ್ಶನ ಮಾಡಲಾಗುತ್ತಿದೆ ಎಂದರು.ಈ ಪತ್ರಿಕಾಗೋಷ್ಠಿಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಚಂದ್ರಕಾಂತ ಪೂಜಾರ, ಬೀದರ ನಗರಾಭಿವೃದ್ಧಿ ಕೋಶದ ಮೋತಿಲಾಲ ಲಮಾಣಿ, ಸಹಕಾರ ಸಂಘಗಳ ಉಪನಿಬಂಧಕರಾದ ಮಂಜುಳಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಜ್ಞಾನ ವೃದ್ಧಿಗೆ ವಸ್ತು ಪ್ರದರ್ಶನ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.20:ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಬೆಳೆಸಲು ಹಾಗೂ ಜ್ಞಾನ ವೃದ್ಧಿಸಲು ವಿಜ್ಞಾನ ವಸ್ತು ಪ್ರದರ್ಶನ ಸಹಕಾರಿಯಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಡಾ.ಕಾಶಿನಾಥ ಕಣಜೆ ಹೇಳಿದರು. ತಾಲೂಕಿನ ಸಿದ್ದೇಶ್ವರ ಗ್ರಾಮದ ಬಸವ ಭಾರತಿ ವಿದ್ಯಾಪೀಠ ಶಾಲೆಯಲ್ಲಿ ಆಯೋಜಿಸಿದ್ದ ವಸ್ತುಪ್ರದರ್ಶನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ವಿದ್ಯಾರ್ಥಿ ಜೀವನವು ಭವಿಷ್ಯದ ಪ್ರಮುಖ ಘಟ್ಟವಾಗಿದೆ. ಆದ್ದರಿಂದ ಪ್ರತಿಯೊಂದು ವಿಷಯದ ಬಗೆಗೆ ಅರಿತುಕೊಳ್ಳಬೇಕು. ಈ ಮೂಲಕ ಜ್ಞಾನಮಟ್ಟವನ್ನು ಹೆಚ್ಚಿಸಿಕೊಳ್ಳಬೇಕು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಸಮೂಹ ಸಂಪನ್ಮೂಲ ವ್ಯಕ್ತಿ ಭುವನೇಶ್ವರ ಬಿರಾದಾರ್, ಮುಖ್ಯಗುರು ರಾಹುಲ ಮೇತ್ರೆ, ಸಹಶಿಕ್ಷಕ ಚಂದ್ರಕಾಂತ ಪಾಟೀಲ್, ಪಾಲಕ ಪ್ರತಿನಿಧಿಗಳಾದ ಹುಲೆಪ್ಪ ಮಾನಕಾರ, ಮಲ್ಲಿಕಾರ್ಜುನ ಬಿರಾದಾರ್ ಸೇರಿದಂತೆ ಹಲವರು ಇದ್ದರು.

## 11,200 ಪುಟಗಳ ವರದಿ ಸಲ್ಲಿಕೆ

ಸಂಪುಟ, 11,200 ಪುಟಗಳ ತನಿಖಾ ವರದಿಯನ್ನು ಬಿ ರಿಪೋರ್ಟ್ ಎಂದೇ ಉಲ್ಲೇಖಿಸಿದ್ದಾರೆ.ನಿವೇಶನ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರವಿಲ್ಲ ಎಂಬುದು ತನಿಖೆಯಲ್ಲಿ ಕಂಡುಬಂದಿದೆ. ಅಲ್ಲದೆ, ಆರೋಪಕ್ಕೆ ಪೂರಕವಾಗಿ ಸಾಕ್ಷ್ಯಾಧಾರ ಕೊರತೆ ಹಿನ್ನೆಲೆಯಲ್ಲಿ ಬಿ-ರಿಪೋರ್ಟ್‌ಲ್ಲಿಕೆ ಮಾಡಿದ್ದಾರೆ.ಈ ಕುರಿತು ದೂರುದಾರ ಸ್ನೇಹಮಯಿ ಕೃಷ್ಣಾ ಅವರಿಗೆ ನೋಟಿಸ್ ಜಾರಿಗೊಳಿಸಿರುವ ಲೋಕಾಯುಕ್ತ, ಅದರಲ್ಲಿ ಸಿಎಂ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಅವರ ಸಹೋದರ ಮಲ್ಲಿಕಾರ್ಜನಯ್ಯ ಸ್ವಾಮಿ ಹಾಗೂ ಸಿದ್ದರಾಮಯ್ಯನವರ ಪುತ್ರ ಯತೀಂದ್ರ ಅವರ ಬಗೆಗಿನ ಆರೋಪಗಳನ್ನು ಸಾಬೀತುಪಡಿಸುವ ಯಾವುದೇ ಸಾಕ್ಷ್ಯಾಧಾರಗಳು ಲಭ್ಯವಾಗಿಲ್ಲ ಎಂದಿದೆ.

## ಸಾಮಾನ್ಯಕ್ಕಿಂತ ಹೆಚ್ಚು ಮಳೆ ಸಾಧ್ಯತೆ

ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವಂತೆ ಕಂದಾಯ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ವೇಳೆ ಪ್ರಮುಖ ಜಲಾಶಯಗಳಲ್ಲಿ ಪ್ರಸ್ತುತ ನೀರಿನ ಸಂಗ್ರಹವನ್ನು ಸಂಪುಟ ಉಪಸಮಿತಿ ಪರಿಶೀಲಿಸಿತು.

"ಕರ್ನಾಟಕದ 14 ಪ್ರಮುಖ ಜಲಾಶಯಗಳು ಪ್ರಸ್ತುತ 535.21 ಟಿಎಂಸಿ ನೀರನ್ನು ಹೊಂದಿದ್ದು, ಇದು ಸರಾಸರಿ ಸಂಗ್ರಹದ ಶೇಕಡಾ 60 ರಷ್ಟಿದೆ.

ಕಳೆದ ವರ್ಷ, ಇದೇ ಸಮಯದಲ್ಲಿ, ನೀರಿನ ಸಂಗ್ರಹವು 332.52 ಟಿಎಂಸಿ ಇತ್ತು" ಎಂದು ಕಂದಾಯ ಸಚಿವರ ಕಚೇರಿಯ ಪ್ರಕಟಣೆ ತಿಳಿಸಿದೆ.

ಕೆಲವು ಜಲಾಶಯಗಳಲ್ಲಿನ ನೀರಿನ ಮಟ್ಟ ಕಡಿಮೆಯಾಗಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಸಚಿವರು, ನೀರಾವರಿ ಅಗತ್ಯತೆಗಳು ಮತ್ತು ಭವಿಷ್ಯದ ಕುಡಿಯುವ ನೀರಿನ ಅಗತ್ಯಗಳನ್ನು ಪರಿಗಣಿಸಿ ಲಭ್ಯವಿರುವ ನೀರನ್ನು ಎಚ್ಚರಿಕೆಯಿಂದ ನಿರ್ವಹಿಸುವ ಅಗತ್ಯವನ್ನು ಒತ್ತಿ ಹೇಳಿದರು.

ಕೆಲವೊಂದು ಜಲಾಶಯಗಳಲ್ಲಿ ನೀರಿನ ಮಟ್ಟ ತೃಪ್ತಿಕರವಾಗಿ ಇಲ್ಲದೆ ಇರುವ ಬಗ್ಗೆ ಅತಂಕ ವ್ಯಕ್ತಪಡಿಸಿದ ಸಚಿವರು, ಜಲಾನಯನ ಪ್ರದೇಶಗಳಲ್ಲಿನ ಬೆಳಗಳಿಗೆ ಅವಶ್ಯವಿರುವ ನೀರಿನ ಪ್ರಮಾಣ ಇತ್ಯಾದಿ ವಿಷಯಗಳನ್ನು ಗಮನದಲ್ಲಿರಿಸಿಕೊಂಡು ಮುಂಬರುವ ದಿನಗಳಲ್ಲಿ ಜಲಾಶಯಗಳ ನೀರಿನ ಮಟ್ಟ ಯಾವ ಮಟ್ಟ ತಲುಪಲಿದೆ, ಅದರಿಂದಾಗಿ ಕುಡಿಯುವ ನೀರಿಗಾಗಿ ಲಭ್ಯವಾಗಲಿರುವ ನೀರಿನ ಪ್ರಮಾಣವೆಷ್ಟು? ಈ ಕುರಿತು ಮುಂದಿನ ಸಭೆಗಳಲ್ಲಿ ಸ್ಪಷ್ಟ ಮಾಹಿತಿ ನೀಡುವಂತೆ ಜಲಸಂಪ್ಮೂಲ ಇಲಾಖೆಗೆ ಸೂಚಿಸಿದರು. ಕುಡಿಯುವ ನೀರಿಗೆ ಅವಶ್ಯವಿರುವ ನೀರನ್ನು ಕಾಯ್ದಿರಿಸಿದ ನಂತರವೇ ನೀರಾವರಿಗಾಗಿ ನೀರನ್ನು ಬಿಡುಗಡೆಗೊಳಿಸುವ ಕುರಿತು ಸಂಬಂಧಿತ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

ಪ್ರಸ್ತುತ ರಾಜ್ಯದ 5 ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ಚಿತ್ರದುರ್ಗ, ತುಮಕೂರು, ಬೆಂಗಳೂರು ನಗರ ಮತ್ತು ರಾಮನಗರ ಜಿಲ್ಲೆಗಳ 13 ತಾಲ್ಲೂಕುಗಳ ವ್ಯಾಪ್ತಿಯ 66 ಗ್ರಾಮಗಳಿಗೆ ದೀರ್ಘಕಾಲೀನ ಸಮಸ್ಯೆ ಹಾಗೂ ನೀರಿನ ಗುಣಮಟ್ಟದ ಸಮಸ್ಯೆಯಿಂದಾಗಿ ಬಾಡಿಗೆ ಟ್ಯಾಂಕರ್ ಮತ್ತು ಬೋರ್ವೆಲ್ಗಳ ಮುಖಾಂತರ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಅದೇ ರೀತಿ ನಗರ ವ್ಯಾಪ್ತಿಗೆ ಸಂಬಂಧಿಸಿದಂತೆ 2 ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ಬೆಂಗಳೂರು ನಗರ ಮತ್ತು ಕೋಲಾರ ಜಿಲ್ಲೆಗಳ 5 ನಗರ ಸ್ಥಳೀಯ ಸಂಸ್ಥೆಗಳ 56 ವಾರ್ಡ್ಗಳಿಗೆ ಟ್ಯಾಂಕರ್ ಮತ್ತು ಬೋರ್ವೆಲ್ಗಳ ಮುಖಾಂತರ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮುಂಬರುವ ದಿನಗಳಲ್ಲಿ ಸಮಸ್ಯೆ ಉಂಟಾಗಬಹುದಾದ ಗ್ರಾಮಗಳ ಪಟ್ಟಿಯನ್ನು ಗುರಿತಿಸಲು ಸಭೆಯಲ್ಲಿ ಸೂಚನೆ ನೀಡಲಾಯಿತು.

## ನಾಗರತ್ನ, ಕೃಷಿ ಅಧಿಕಾರಿ ಸಿದ್ದಪ್ಪ ಸಸ್ಪೆಂಡ್

ಕಾಮಗಾರಿ ಅವ್ಯವಹಾರ ಅನುದಾನ ದುರ್ಬಳಕೆಗೆ ಕಾರಣವಾಗಿದೆ. ಎಡಿ ನಾಗರತ್ನ ಹಾಗೂ ಕೃಷಿ ಅಧಿಕಾರಿ ಸಿದ್ದಪ್ಪ ವಿರುದ್ಧ ರಾಯಚೂರು ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸರಕಾರದ ಕೃಷಿ ಇಲಾಖೆ ಕಾರ್ಯದರ್ಶಿಗಳಿಗೆ ಶಿಸ್ತು ಕ್ರಮಕ್ಕೆ ವರದಿ ಸಲ್ಲಿಸಿದ್ದಾರೆ. ಅದರಂತೆ ಉದ್ಯೋಗ ಖಾತ್ರಿ ಅನುದಾನ ದುರ್ಬಳಕೆ ದೃಢಪಟ್ಟಿದ್ದು, ಕೃಷಿ ಇಲಾಖೆ ಆಯುಕ್ತರು ಬೆಂಗಳೂರು ಇವರು ಕೃಷಿ ಸಹಾಯಕ ನಿರ್ದೇಶಕಿ ನಾಗರತ್ನ ಹಾಗೂ ಕೃಷಿ ಅಧಿಕಾರಿ ಸಿದ್ದಪ್ಪ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿರುವರು. ರಾಯಚೂರು ಹಾಗೂ ಕೊಪ್ಪಳ ವಿಧಾನಸಭಾ ಕ್ಷೇತ್ರದ ವಿಧಾನ ಪರಿಷತ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪುರ ಕೃಷಿ ಆಯುಕ್ತರಿಗೆ ಪತ್ರ ಬರೆದು ಲಿಂಗಸುಗೂರಿನ ಕೃಷಿ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸೇ ಮಾಡಿದರು.

## ಜಗತ್ತಿನ ಮೊದಲ ಬೌಲರ್ ಶಮಿ

102 ಪಂದ್ಯಗಳಲ್ಲಿ 200 ವಿಕೆಟ್ ಪಡೆದ ಆಸ್ಟ್ರೇಲಿಯಾದ ಮಿಚೆಲ್ ಸ್ಟಾರ್ಕ್ ಅಗ್ರಸ್ಥಾನಿಯಾಗಿದ್ದು, ತಲಾ 104 ಪಂದ್ಯಗಳಲ್ಲಿ 200 ವಿಕೆಟ್ ಪಡೆದ ಮಹಮದ್ ಶಮಿ ಹಾಗೂ ಪಾಕಿಸ್ತಾನದ ಸಕ್ಲೈನ್ ಮುಷ್ತಾಕ್ ಜಂಟಿ 2ನೇ ಸ್ಥಾನದಲ್ಲಿದ್ದಾರೆ. 107 ಪಂದ್ಯಗಳಲ್ಲಿ ಈ ಸಾಧನೆ ಮಾಡಿರುವ ಟ್ರೆಂಟ್ ಬೌಲ್ಟ್ 3, 112 ಪಂದ್ಯಗಳಲ್ಲಿ 200 ವಿಕೆಟ್ ಪಡೆದ ಮಾಜಿ ಆಸಿಸ್ ವೇಗಿ ಬ್ರೆಟ್ ಲೀ 4ನೇ ಸ್ಥಾನದಲ್ಲಿದ್ದಾರೆ.

ವೇಗದ 200 ವಿಕೆಟ್ (ಎಸೆತಗಳ ಲೆಕ್ಕಾಚಾರ)

ಇನ್ನು ಎಸೆತೆಗಳ ಲೆಕ್ಕಾಚಾರದಲ್ಲಿ ವೇಗವಾಗಿ 200 ವಿಕೆಟ್ ಪಡೆದ ಬೌಲರ್ ಗಳ ಪಟ್ಟಿಯಲ್ಲಿ ಶಮಿ ಅಗ್ರಸ್ಥಾನಿಯಾಗಿದ್ದು, ಶಮಿ ಕೇವಲ 5126 ಎಸೆತಗಳಲ್ಲಿ ಈ ಸಾಧನೆ ಮಾಡಿದ್ದಾರೆ. ಆಸ್ಟ್ರೇಲಿಯಾದ ಮಿಚೆಲ್ ಸ್ಟಾರ್ಕ್ 5240 ಎಸೆತಗಳಲ್ಲಿ ಈ ಸಾಧನೆ ಮಾಡಿದ್ದು, ಅವರು 2ನೇ ಸ್ಥಾನಕ್ಕೆ ಕುಸಿದಿದ್ದಾರೆ. ಪಾಕಿಸ್ತಾನದ ಮಾಜಿ ಬೌಲರ್ ಸಕ್ಲೈನ್ ಮುಷ್ತಾಕ್ 5451 ಎಸೆತಗಳಲ್ಲಿ 200 ವಿಕೆಟ್ ಕಬಳಿಸಿ 3ನೇ ಸ್ಥಾನಕ್ಕೆ ಜಾರಿದ್ದಾರೆ.

ಭಾರತದ ಪರ ಅತೀ ಹೆಚ್ಚು ವಿಕೆಟ್

ಇನ್ನು ಐಸಿಸಿ ಏಕದಿನ ವಿಶ್ವಕಪ್ ಹಾಗೂ ಚಾಂಪಿಯನ್ಸ್ ಟ್ರೋಫಿ ಟೂರ್ನಿಗಳಲ್ಲಿ ಅತೀ ಹೆಚ್ಚು ವಿಕೆಟ್ ಪಡೆದ ಭಾರತೀಯ ಬೌಲರ್ ಗಳ ಪಟ್ಟಿಯಲ್ಲಿ ಶಮಿ ಅಗ್ರಸ್ಥಾನಕ್ಕೇರಿದ್ದಾರೆ. ಇಂದಿನ ಪಂದ್ಯದ 5 ವಿಕೆಟ್ ಗಳ ಸಹಿತ ಶಮಿ ತಮ್ಮ ವಿಕೆಟ್ ಗಳಿಕೆಯನ್ನು 60ಕ್ಕೆ ಏರಿಕೆ ಮಾಡಿಕೊಂಡಿದ್ದು ಆ ಮೂಲಕ ಐಸಿಸಿ ಏಕದಿನ ವಿಶ್ವಕಪ್ ಹಾಗೂ ಚಾಂಪಿಯನ್ಸ್ ಟ್ರೋಫಿ ಟೂರ್ನಿಗಳಲ್ಲಿ ಅತೀ ಹೆಚ್ಚು ವಿಕೆಟ್ ಪಡೆದ ಭಾರತೀಯ ಬೌಲರ್ ಎನಿಸಿಕೊಂಡಿದ್ದಾರೆ. 59 ವಿಕೆಟ್ ಪಡೆದಿರುವ ಮಾಜಿ ವೇಗಿ ಜಹೀರ್ ಖಾನ್ ಈ ಪಟ್ಟಿಯಲ್ಲಿ 2ನೇ ಸ್ಥಾನದಲ್ಲಿದ್ದಾರೆ.

### ಕಲಬುರಗಿ ನಗರದಲ್ಲಿ ಕಟ್ಟಡದ ಎತ್ತರ ಮಿತಿ 15 ಮೀಟರ್‌ಗೆ

## ಹೆಚ್ಚಳ: ಬಹುದಿನದ ಬೇಡಿಕೆಗೆ ಸರ್ಕಾರದ ಅಸ್ತು



ಕಲಬುರಗಿ,ಫೆ.20:ಕಲಬುರಗಿ ನಗರದಲ್ಲಿ ಜನವಸತಿ ಕಟ್ಟಡದ ಎತ್ತರ ಮಿತಿ 11.5 ಮೀಟರ್‌ದಿಂದ 15.0 ಮೀಟರ್ ವರೆಗೆ ಹೆಚ್ಚಿಸಲು ಪ್ರಾಧಿಕಾರದ ಪ್ರಸ್ತಾವನೆಗೆ ರಾಜ್ಯ ಸರ್ಕಾರ ಅಸ್ತು ಎಂದು ಸರ್ಕಾರಿ ಆದೇಶ ಹೊರಡಿಸಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್ ಮತ್ತು ಆಯುಕ್ತ ಗಂಗಾಧರ ಮಾಳಗಿ ಅವರು ಜಂಟಿಯಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಲಬುರಗಿ ನಗರವು ದಿನದಿಂದ ದಿನಕ್ಕೆ ವ್ಯಾಪಕವಾಗಿ ಅಭಿವೃದ್ಧಿ ಹೊಂದುತ್ತಿರುವುದರಿಂದ ಆರ್ಥಿಕ ಬೆಳವಣಿಗೆಗಳ ಹಿತದೃಷ್ಟಿಯಿಂದ ಮತ್ತು ಕ್ರೆಡೈ ಸಂಸ್ಥೆಯ ಕೋರಿಕೆಯಂತೆ ಇಲ್ಲಿ ಬಹುಮಹಡಿಗಳ ಕಟ್ಟಡ ಅವಶ್ಯಕತೆ ಮನಗಂಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್ ಅವರು ತೀವ್ರ ಆಸಕ್ತಿ ವಹಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13-ಇ ರಡಿಯಲ್ಲಿ ವಲಯ ನಿಯಮಾವಳಿಗಳಿಗೆ ತಿದ್ದುಪಡಿ ತರಲು ಪ್ರಾಧಿಕಾರದ ಸಭೆಯಲ್ಲಿ ಅನುಮೋದನೆ ಪಡೆದು ನಗರದಲ್ಲಿ ಕಟ್ಟಡ ನಿರ್ಮಾಣದ ಎತ್ತರ 11.5 ರಿಂದ 15.0 ಮೀಟರ್ ಹೆಚ್ಚಳಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು. ಪ್ರಾಧಿಕಾರದ ಪ್ರಸ್ತಾವನೆ ಪುರಸ್ಕರಿಸಿದ ಸರ್ಕಾರ ಕಳೆದ ಫೆಬ್ರವರಿ 18 ರಂದು ಕಟ್ಟಡದ ಎತ್ತರ ಮಿತಿ 11.5 ಮೀಟರ್ ದಿಂದ 15.0 ಮೀಟರ್ ಹೆಚ್ಚಳಕ್ಕೆ ಅನುಮೋದನೆ ನೀಡಿದ್ದು, ಇದರಿಂದ ನಗರ ನಿವಾಸಿಗಳ ಬಹುದಿನಗಳ ಬೇಡಿಕೆಗೆ ರಾಜ್ಯ ಸರ್ಕಾರ ಸ್ಪಂದಿಸಿದಂತಾಗಿದೆ.

ಕಟ್ಟಡ ಎತ್ತರ ಹೆಚ್ಚಳದಿಂದ ಆರ್ಥಿಕಾಭಿವೃದ್ಧಿ: ಕಲಬುರಗಿ ನಗರದ ಜನಸಂಖ್ಯೆಯ ಸಾಂದ್ರತೆಯು ಹೆಚ್ಚಾಗುತ್ತಿರುವುದರಿಂದ ಭೂಮಿ ಕೊರತೆಯನ್ನು ಬಹುಮಹಡಿಗಳ ಕಟ್ಟಡಗಳು ತಕ್ಕಮಟ್ಟಿಗೆ ಸಮಸ್ಯೆ ನೀಗಿಸಲಿವೆ. ಜನವಸತಿ ಪ್ರದೇಶದ ಕಟ್ಟಡ ಎತ್ತರ ಮಿತಿ ಹೆಚ್ಚಳವು ನಗರದ ಆರ್ಥಿಕ ಅಭಿವೃದ್ಧಿ ಚೇತರಿಕೆಗೂ ಕಾರಣವಾಗಲಿದೆ. ಬಹುಮಹಡಿಗಳ ಕಟ್ಟಡವು ಸೀಮಿತ ಸ್ಥಳದ ಬಳಕೆಯನ್ನು ಹೆಚ್ಚಿಸುವುದಲ್ಲದೆ ಒಂದೇ ಕಟ್ಟಡದಲ್ಲಿ ಹೆಚ್ಚಿನ ಜನರ ವಾಸ ಮತ್ತು ವ್ಯವಹಾರಗಳಿಗೆ ಅವಕಾಶ ಕಲ್ಪಿಸುತ್ತದೆ ಎಂದಿರುವ ಮಜರ್ ಆಲಂ ಖಾನ್ ಅವರು, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ವಿಶೇಷ ಕಾಳಜಿಯ ಪರಿಣಾಮ ನಗರದ ಬಹುದಿನದ ಬೇಡಿಕೆಗೆ ಸರ್ಕಾರ ಸ್ಪಂದಿಸಿರುವುದಕ್ಕೆ ಅವರು ಸಂತಸ ವ್ಯಕ್ತಪಡಿಸಿದ್ದಾರೆ.

## ನಾಳೆಯಿಂದ ಮುಧೋಳದಲ್ಲಿ 3 ದಿನ ರನ್ನನ ಗತವೈಭವದ ಸಂಭ್ರಮ

## 22 ರಂದು ರನ್ನವೈಭವಕ್ಕೆ ಪ್ರವಾಸೋದ್ಯಮ ಸಚಿವರಿಂದ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಫೆ. 20 : ಜಿಲ್ಲೆಯ ಮುಧೋಳದಲ್ಲಿ ಫೆಬ್ರವರಿ 22 ರಿಂದ 24 ವರೆಗೆ ನಡೆಯಲಿರುವ ರನ್ನವೈಭವಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದ್ದು, ಸಂಜೆ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಚಾಲನೆ ನೀಡಲಿದ್ದಾರೆ.

ಉತ್ಸವದ ಅಂಗವಾಗಿ ಫೆಬ್ರವರಿ 22 ರಂದು ಬೆಳಿಗ್ಗೆ 10 ಗಂಟೆಗೆ ರನ್ನ ಬೆಳಗಲಿಯ ಬಂದಲಕ್ಷ್ಮೀ ದೇವಸ್ಥಾನದಿಂದ ಕವಿ ಚಕ್ರವರ್ತಿ ರನ್ನ ವೇದಿಕೆಯವರೆಗೆ ನಡೆಯಲಿರುವ ಜಾನಪದ ವಾಹಿನಿ ಕಲಾತಂಡಗಳ ಮೆರವಣಿಗೆಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಚಾಲನೆ ನೀಡಲಿದ್ದಾರೆ. ಮೆರವಣಿಗೆಯಲ್ಲಿ ಜನಪದ ಕೋಲಾಟ, ಡೊಳ್ಳಿನ ವಾದ್ಯ, ಶಹನಾಯಿ, ಸಂಬಾಳ, ಝಾಂಜ್ ಮೇಳ, ಪುರವಂತಿಕೆ, ವೀರಗಾಸೆ, ಪೂಜಾ ಕುಣಿತ ಸೇರಿದಂತೆ 30 ವಿವಿಧ ಕಲಾತಂಡಗಳು



ಭಾಗವಹಿಸಲಿವೆ.

ಸಂಜೆ ರನ್ನ ಬೆಳಗಲಿಯ ಕವಿಚಕ್ರವರ್ತಿ ರನ್ನವೇದಿಕೆಯಲ್ಲಿ ನಡೆಯಲಿರುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ವಹಿಸಲಿದ್ದು, ವಿಶೇಷ ಆಹ್ವಾನಿತರಾಗಿ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹಾದೇವಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಚಿವ ಪ್ರೀಯಾಂಕ ಖರ್ಗೆ, ಜವಳಿ, ಸಕ್ಕರೆ ಮತ್ತು ಕೃಷಿ ಸಚಿವ ಶಿವಾನಂದ ಪಾಟೀಲ, ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ, ಅಥಣಿ ಶಾಸಕ ಲಕ್ಷ್ಮಣ ಸವದಿ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು,



ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.ರನ್ನಕಾವ್ಯದರ್ಶನ ವಿಚಾರ ಸಂಕಿರಣ ರನ್ನವೈಭವದ ಅಂಗವಾಗಿ ಫೆಬ್ರವರಿ 22 ರಂದು ಬೆಳಿಗ್ಗೆ 11 ಗಂಟೆಗೆ ಮುಧೋಳ ರನ್ನಭವನದ ಅಜೀತಸೇನಾಚಾರ್ಯವೇದಿಕೆಯಲ್ಲಿ ನಡೆಯಲಿರುವ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಮುಧೋಳನ ಹಿರಿಯ ವೈದ್ಯ ಮತ್ತು ಸಾಹಿತಿ ಡಾ.ಶಿವಾನಂದ ಕುಟಸದ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯದ ನಿರ್ದೇಶಕ ಡಾ.ಮಾಧವ ಪೆರಾಜೆ ವಹಿಸಲಿದ್ದು, ಹಿರಿಯ ಪ್ರಾದ್ಯಾಕಪ ಡಾ.ವೀರೇಶ ಬಡಿಗೇರ ಆಶಯ ನುಡಿ ಹೇಳಲಿದ್ದಾರೆ. ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಗೋಷ್ಠಿ-1ರಲ್ಲಿ ರನ್ನಕಾವ್ಯಧಾರ ಎಂಬ ವಿಷಯದ ಮೇಲೆ ಕನ್ನಡ ಸಾಹಿತ್ಯ ಅಕಾಡೆಮಿಯ ಸದಸ್ಯ ಡಾ.ಮೈತ್ರೇಯಿಣಿ ಗದಿಗೆಪ್ಪ ಗೌಡರ ಮಹಾಕವಿ ರನ್ನನ ಕಾವ್ಯದಲ್ಲಿ ಸ್ತ್ರೀವಾದಿ ನಿಲುವು ಕುರಿತು, ಸಾಹಿತಿ ಡಾ.ಮೈನುದ್ದೀನ ರೇವಡಿಗಾರ ಗದಾಯುದ್ದದಲ್ಲಿ ರನ್ನನ ಸ್ವಾಗತ ಕುರಿತು ಮಾತನಾಡಲಿದ್ದಾರೆ. ಗೋಷ್ಠಿ-2ರಲ್ಲಿ ರನ್ನನ ಗಾಯುದ್ದದಲ್ಲಿಯುದ್ದ ವಿರೋಧಿ ನೀತಿ ಕುರಿತು ಅಮೀನಗಡ ಸಂ.ಸಂ.ಪ.ಪೂ ಕಾಲೇಜಿನ ಉಪ ಪ್ರಾಚಾರ್ಯ ಆರ್.ಜಿ.ಸನ್ನಿ, ರನ್ನನ ಗದಾಯುದ್ದದ ಸಂಗತಿ ಕುರಿತು ಮೈಸೂರು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಹಿರಿಯ ಸಂಶೋಧಕ ಡಾ.ಚಲಪತಿ ಆರ್ ಮಂಡನೆ ಮಾಡಲಿದ್ದಾರೆ. ಗುರುಕಿರಣ ತಂಡದಿಂದ ಚಿತ್ರ ಸಂಗೀತ ಸುಧೆ ಫೆ.22 ರಂದು ಸಂಜೆ ನಡೆಯಲಿರುವ ಕವಿಚಕ್ರವರ್ತಿ ರನ್ನವೇದಿಯಲ್ಲಿ ರಾತ್ರಿ 9 ರಇಂದ 11 ಗಂಟೆವರೆಗೆ ಸಂಗೀತ ಮಾಂತ್ರಿಕ ಗುರುಕಿರಣ ಹಾಗೂ ತಂಡದವರಿಂದ ಚಿತ್ರ ಸಂಗೀತ ಸುಧೆ ಕಾರ್ಯಕ್ರಮ ಜರುಗಲಿದೆ. ಇದರ ಜೊತೆಗೆ ಸಂಜೆ 4 ರಿಂದ ರಾತ್ರಿ 9 ಗಂಟೆವರೆಗೆ ಯಮನಪ್ಪ ಪೂಜೇರಿಯಿಂದ ಚೌಡಕಿ ಪದ, ಕುಮಾರ ಬಡಿಗೇರಿಂದ ಶಾಸ್ತ್ರೀಯ ಸಂಗೀತ, ಕೃಷ್ಣಪ್ಪ ಹೂಲಗೇರಿಯಿಂದ ಡೊಳ್ಳಿನ ಪದಗಳು, ಡಾ.ವೆಂಕಪ್ಪ ಸುಗತೇಕರಿಂದ ಗೊಂದಳಿ ಪದ, ನಟರಾಜ ಸಂಗೀತ ನೃತ್ಯ ನಿಕೇತನದಿಂದ ಸಮೂಹ ನೃತ್ಯ, ಕಾಂಚನಾ ಘಾರಗೆಯಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಈರಪ್ಪ ಅಥಣಿಯಿಂದ ಭಜನಾಪದ ಕಾರ್ಯಕ್ರಮ ನಡೆಯಲಿದೆ.

ರಾಚಯ್ಯ ಮುಧೋಳ ಜೋಗತಿ ಮತ್ತು ದೀಪ ನೃತ್ಯ, ನಟರಂಗ ಕಲ್ಚಲರ ಅಕಾಡೆಮಿಯಿಂದ ಲಂಬಾಣಿ ನೃತ್ಯ, ಪ್ರೀಯಾಂಕ ಸರಶೆಟ್ಟಿ ಭರತನಾಟ್ಯ, ಯಶವಂತ ವಾಜಂತ್ರಿಯಿಂದ ಹಾಸ್ಯ ಸಂಜೆ, ಉತ್ತರ ಕನ್ನಡ ಅಮೇಜಿಂಗ್ ಸಿದ್ದಿ ಬಾಯ್ಸ್‌ದಿಂದ ಸಿದ್ದ ಡಮಾಮಿ ನೃತ್ಯ, ಗುರುರಾಜ ಹೊಸಕೋಟಿಯಿಂದ ಜಾನಪದ ಸಂಗೀತ ಕಾರ್ಯಕ್ರಮ ಜರುಗಲಿವೆ.

# ಕೆಂಭಾವಿಯ ಪುರಸಭೆಯಲ್ಲಿ ಸರ್ವಜ್ಞ ಜಯಂತಿ ಆಚರಿಸಲಾಯಿತು



ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದಲ್ಲಿ ಸರ್ವಜ್ಞ ಜಯಂತಿ ಆಚರಣೆ ಅಂಗವಾಗಿ ಕೆಂಭಾವಿ ಕುಂಬಾರ್ ಸಮುದಾಯದ ಮುಖಂಡರು ಎಲ್ಲರೂ ಕೆಂಭಾವಿ ಪುರಸಭೆಯಲ್ಲಿ ಸರ್ವಜ್ಞ ಜಯಂತಿ ಅಂಗವಾಗಿ ಸರ್ವಜ್ಞ ಭಾವಚಿತ್ರಕ್ಕೆ ಮಾಲಾರ್ಪಣೆ ಹಾಗೂ ಪುಷ್ಪ ಪುಷ್ಪಾರ್ಚನೆ ಮಾಡಲಾಯಿತು ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷರಾದ ರೈಮನ್ ಪಟೇಲ್ ಸರ್ವಜ್ಞ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಪುರಸಭೆಯಲ್ಲಿ ಸರ್ವಜ್ಞ ಜಯಂತಿಯನ್ನು ಆಚರಣೆ ಮಾಡಲಾಯಿತು ಈ ಸಂದರ್ಭದಲ್ಲಿ ಕುಂಬಾರ್ ಮುಖಂಡರುಗಳಾದ. ಯಮನಪ್ಪ ಕುಂಬಾರ್. ಗುರುಬಸಪ್ಪ ಕುಂಬಾರ್ ಮಾಜಿ ಪುರಸಭೆ ಸದಸ್ಯರು. ರಾಜಶೇಖರ್ ಎಸ್ ಕುಂಬಾರ್ . ರಮೇಶ್ ಟಕ್ಕಳಕಿ. ರವಿ ಜಲ್ ಪುರ್. ಬಸಪ್ಪ ಬನ್ನಟ್ಟಿ. ಭೀಮಣ್ಣ ಟಕ್ಕಳಿಕೆ. ಭೀಮ ಕುಂಬಾರ್. ರಾಚಪ್ಪ. ಎಸ್ ಕುಂಬಾರ್. ಮಹೇಶ್ ಸಾಹುಕಾರ್. ಪುರಸಭೆಯ ಸದಸ್ಯರಾದ ರಮೇಶ್ ಕೊಡಗನೂರ್. ಶಿವಪ್ಪ ಜಿ ಕಂಬಾರ್. ಮುಜಾಯಿದ್ ಮುಲ್ಲಾ. ಕರವಸಲಿ ಗಾರರಾದ. ಭೀಮಣ್ಣ ಕಟ್ಟಿಮನಿ. ವಲಿಸಾಬ್. ಕಾಶಿನಾಥ್. ಇನ್ನು ಅನೇಕ ಜನ ಈ ಒಂದು ಸಂದರ್ಭದಲ್ಲಿ ಭಾಗಿಯಾಗಿದ್ದರು.

# ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಜಿಲ್ಲಾಧಿಕಾರಿಗಳ ಭೇಟಿ: ಮನವಿ ಪತ್ರ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರನ್ನು ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಬೀದರ್ ಜಿಲ್ಲಾ ಘಟಕದ ಅಧ್ಯಕ್ಷರ ನೇತೃತ್ವದಲ್ಲಿ ಭೇಟಿ ಮಾಡಲಾಯಿತು.

ಜಿಲ್ಲಾಧಿಕಾರಿಗಳ ಪತ್ರಿಕಾಗೋಷ್ಠಿ ನಂತರ ಅಲ್ಲಿ ಹಾಜರಿದ್ದ ನಮ್ಮ ಸಂಘದ ಸದಸ್ಯರ ಜೊತೆ ಜಿಲ್ಲಾಧಿಕಾರಿಗಳ ಚೆಂಬರ್‌ನಲ್ಲಿ ಭೇಟಿ ಮಾಡಿ ಪತ್ರಕರ್ತರಿಗೆ ಒಂದಡೆ ಕಾಲೋನಿ ಮತ್ತು ಮುದ್ರಾಣಾಲಯ ನಿರ್ಮಾಣಕ್ಕಾಗಿ ಭೂಮಿ ಮಂಜೂರು ಮಾಡುವಂತೆ ಮನವಿ ಮಾಡಲಾಯಿತು. ಪತ್ರಿಕಾ ಭವನದಲ್ಲಿ " ಮಿಟ್ ದಿ ಪ್ರೆಸ್" ಮಾಡಲು ಜಿಲ್ಲಾಧಿಕಾರಿಯವರಿಗೆ ಅಹ್ವಾನ ನೀಡಲಾಯಿತು. ಪ್ರಶಸ್ತಿ ಪ್ರಧಾನ ಸಮಿತಿ ಹಾಗೂ ಜಿಲ್ಲಾಡಳಿತದ ಇತರ ಸಮಿತಿಗಳಲ್ಲಿ ಸಂಘದ ಅಧ್ಯಕ್ಷರ ಹೆಸರು ಸೇರ್ಪಡೆಗೊಳಿಸಲು ಮನವಿ ಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಯವರು ಮಾತನಾಡಿ ಭೂಮಿ ನೀಡುವ ಬಗ್ಗೆ ಸಮಗ್ರವಾಗಿ ಪರಿಶೀಲಿಸಿ ನಿಯಮನುಸಾರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. " ಮಿಟ್ ದಿ ಪ್ರೆಸ್" ಮಾಡಲು ಸಹ ಒಪ್ಪಿಕೊಂಡಿದ್ದು, ಮುಂದಿನ ತಿಂಗಳಿನ ನಂತರ ಸಮಯ ನೋಡಿಕೊಂಡು ದಿನಾಂಕ ತಿಳಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ವಿಜಯಕುಮಾರ ಪಾಟೀಲ, ಹಿರಿಯ ಪತ್ರಕರ್ತರಾದ ಸೈಯದ್ ಹಸನ್ ಖಾದ್ರಿ, ರಾಮಚಂದ್ರ ಭೋಸ್ಲೆ, ಅಬ್ದುಲ್ ಖದೀರ, ಪ್ರದೀಪ ಬಿರಾದಾರ, ಬಸವರಾಜ ಪವಾರ, ಸುನೀಲ ಕುಲಕರ್ಣಿ, ಶರತಕುಮಾರ ಘಂಟೆ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಕಡೆಗೂ ಜೀವ ತೆಗೆದ ವಾಸವದತ್ತಾ ರೈಲ್ವೆ ಹಳಿ:ಶಿವುಕುಮಾರ ಅಪ್ಪಾಜಿ ಆಕ್ರೋಶ



ಮಲ್ಲಮ್ಮ ನುಡಿ ವಾರ್ತೆ

ಸೇಡಂ ನಿವಾಸಿ ಮುಕ್ತಾರ ಎಂಬಾತ ಹೃದಯಾಘಾತದಿಂದ ಸೇಡಂ ಸರಕಾರಿ ಅಸ್ಪತ್ರೆಗೆ ತೆರಳಿದ್ದಾನೆ. ಹೆಚ್ಚಿನ ಮತ್ತು ತುರ್ತು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಲು ವೈದ್ಯರು ಸೂಚಿಸಿದ್ದು, ಅದರಂತೆ ಅಂಬುಲೆನ್ಸ್ ನಲ್ಲಿ ತೆರಳುವಾಗ ಮುಕ್ತಾರ ಎಂಬಾತ ಸಾವನ್ನಪ್ಪಿದ್ದಾನೆ.

ಕಲಬುರಗಿಗೆ ತೆರಳುವಾಗ ಸೇಡಂ ಪಟ್ಟಣದ ಹೃದಯಭಾಗದಲ್ಲಿರುವ ವಾಸವದತ್ತಾ ಸಿಮೆಂಟ್ ಕಾರ್ಖಾನೆಗೆ ಸಂಪರ್ಕ ಕಲ್ಪಿಸುವ ರೈಲು ಹಳಿಯಲ್ಲಿ ಗೂಡ್ಸ್ ರೈಲು ಸಂಚರಿಸಿದೆ. ಇದರಿಂದ ವಿಳಂಬವಾದ ಕಾರಣ ಮುಕ್ತಾರ ಆರೋಗ್ಯದಲ್ಲಿ ಮತ್ತಷ್ಟು ಸಮಸ್ಯೆ ಎದುರಾಗಿದ್ದು, ಆಘಾತ-ಕ್ಕೆ ಒಳಗಾಗಿ ಸಾವನ್ನಪ್ಪಿದ್ದಾನೆ ಎನ್ನಲಾಗಿದೆ. ಸರಿಯಾದ ಸಮಯಕ್ಕೆ ಆಸ್ಪತ್ರೆಗೆ ಸಾಗಿಸಿದ್ದಲ್ಲಿ ವ್ಯಕ್ತಿ ಬದುಕುತ್ತಿದ್ದ ಎನ್ನಲಾಗಿದ್ದು, ಸೇಡಂನ ವಾಸವದತ್ತಾ ಸಿಮೆಂಟ್ ಕಾರ್ಖಾನೆಯ ಎದುರು ಜನ ಜಮಾಯಿಸಿದ್ದಾರೆ. ಪ್ರಕ್ಷುಬ್ಧ ವಾತಾವರಣ ನಿರ್ಮಾಣಬಮವಾಗಿದೆ.

ಕಾರ್ಖಾನೆ ಹಾಗೂ ರೈಲ್ವೆ ಇಲಾಖೆ ವಿರುದ್ಧ ಜನ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಅನೇಕ ತಿಂಗಳುಗಳಿಂದ ವಾಸವದತ್ತಾ ರೈಲು ಹಳಿ ಸ್ಥಳಾಂತರಿಸಬೇಕು ಅಥವಾ ರೈಲು ಸಂಚಾರ ಸಮಯ ಬದಲಾಯಿಸುವಂತೆ ಒತ್ತಾಯಿಸಿ ಸೇಡಂ ಜನಹಿತ ರಕ್ಷಣಾ ಸಮಿತಿ ಹೋರಾಟ ನಡೆಸಿತ್ತು. ಜಿಲ್ಲಾಧಿಕಾರಿ ಫೌಜಿಯ ತರನ್ನುಮ್ ಸಹ ರೈಲು ಸಂಚಾರ ಸಮಯ ಬದಲಿಸುವ ಭರವಸೆ ನೀಡಿದ್ದರು.

# 'ಮೇರಾ ಪಶು ಮೇರಾ ಪರಿವಾರ್' ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್ : ಮುಂಬೈ ಮೂಲದ ಬ್ಯಾಂಕಿಂಗ್ ಯೇತರ ಹಣಕಾಸು ಸೇವೆಗಳ ಕಂಪನಿಯಾದ "ಎಸ್‌ಎಂಎಫ್ ಜಿ ಇಂಡಿಯಾ ಕ್ರೆಡಿಟ್", ಭಾರತದ ವಿವಿಧೆಡೆ 6 ಸ್ಥಳಗಳಲ್ಲಿ 517 ಪ್ರತಿನಿಧಿಗಳು ಭಾಗವಹಿಸಿದ್ದ "ಬೃಹತ್ ಜಾನುವಾರು ಕಲ್ಯಾಣ ಆರೈಕೆ ಜಾಗೃತಿ ಶಿಕ್ಷಣ ಕಾರ್ಯಕ್ರಮ ನಡೆಸಿ, ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸುವ ಮೂಲಕ ಇತಿಹಾಸ ನಿರ್ಮಿಸಿದೆ. ಕಂಪನಿಯು 7ನೇ ಆವೃತ್ತಿಯ ಪಶು ವಿಕಾಸ ದಿನ(ಪಿವಿಡಿ)ದ ಅಂಗವಾಗಿ ದೇಶಾದ್ಯಂತ ವಿವಿಧ ಸ್ಥಳಗಳಲ್ಲಿ ಆಯೋಜಿಸಿದ್ದ ಒಂದು ದಿನದ ಜಾನುವಾರು ಆರೈಕೆ ಶಿಬಿರವಾದ ಭಾಗವಾಗಿ ಈ ಹೊಸ ಮೈಲಿಗಲ್ಲು ಸಾಧಿಸಿದೆ. ಈ ಶಿಬಿರಗಳನ್ನು 16 ರಾಜ್ಯಗಳ 500 ಸ್ಥಳಗಳಲ್ಲಿ ಏಕಕಾಲದಲ್ಲಿ ನಡೆಸಲಾಯಿತು, ಸುಮಾರು 1,90,000 ಫಲಾನುಭವಿಗಳಿಗೆ (1,50,000 ಜಾನುವಾರು ಮತ್ತು 40,000 ಹೈನುಗಾರರು) ಈ ಕಾರ್ಯಕ್ರಮದ ಪ್ರಯೋಜನ ದೊರೆಯಿತು.

ಭಾರತದಲ್ಲಿ, ಗ್ರಾಮೀಣ ಜನಸಂಖ್ಯೆಯ ಸುಮಾರು 65-70%ರಷ್ಟು ಜನ ತಮ್ಮ ಜೀವನೋಪಾಯಕ್ಕಾಗಿ ಕೃಷಿ ಅಥವಾ ಹೈನುಗಾರಿಕೆ ಚಟುವಟಿಕೆಗಳ ಮೇಲೆ ಅವಲಂಬಿತರಾಗಿದ್ದಾರೆ. ಈ ಅವಿನಾಭಾವ ಬಂಧವನ್ನು ಗುರುತಿಸಿದ "ಎಸ್‌ಎಂಎಫ್ ಜಿ ಇಂಡಿಯಾ ಕ್ರೆಡಿಟ್" ಕಂಪನಿ ಪಶು ವಿಕಾಸ ದಿನವನ್ನು "ಮೇರಾ ಪಶು ಮೇರಾ ಪರಿವಾರ್" ಎಂಬ ವಿಷಯದಡಿ ಆಚರಿಸಿತು, ವಾರ್ಷಿಕ ಪಿವಿಡಿ ಕಾರ್ಯಕ್ರಮದಲ್ಲಿ 6,000ಕ್ಕಿಂತ ಹೆಚ್ಚಿನ ಉದ್ಯೋಗಿಗಳು ಭಾಗವಹಿಸಿದ್ದರು.

"ಎಸ್‌ಎಂಎಫ್ ಜಿ ಇಂಡಿಯಾ ಕ್ರೆಡಿಟ್" ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ವ್ಯವಸ್ಥಾಪಕ ನಿರ್ದೇಶಕ ಶಂತನು ಮಿತ್ರ ಮಾತನಾಡಿ, "ಎಸ್‌ಎಂಎಫ್ ಜಿ ಇಂಡಿಯಾ ಕ್ರೆಡಿಟ್"ನಲ್ಲಿ, ಅರ್ಥಪೂರ್ಣ ಪರಿಣಾಮ ಉಂಟುಮಾಡುವ ಸಾಮಾಜಿಕ ಉಪಕ್ರಮಗಳನ್ನು ಬೆಂಬಲಿಸುವ ನಮ್ಮ ಬದ್ಧತೆಯಲ್ಲಿ ನಾವು ಸದೃಢವಾಗಿರುತ್ತೇವೆ. 1000+ ಶಾಖೆಗಳ ಬಲವಾದ ಪ್ಯಾನ್-ಇಂಡಿಯಾ ಉಪಸ್ಥಿತಿಯೊಂದಿಗೆ, ನಮ್ಮ ಪ್ರಾಥಮಿಕ ಗಮನವು ಟೈಯರ್-2+ ನಗರಗಳ ಮೇಲೆ ಕೇಂದ್ರೀಕೃತವಾಗಿದೆ. ನಮ್ಮ 90% ಶಾಖೆಗಳು ಈ ಪ್ರದೇಶಗಳಲ್ಲಿ ಕಾರ್ಯತಂತ್ರ ಸ್ಥಾನದಲ್ಲಿವೆ. ವಾಸ್ತವವಾಗಿ, ಕಳೆದ 2 ವರ್ಷಗಳಲ್ಲಿ, ನಾವು ಸುಮಾರು 300 ಶಾಖೆಗಳನ್ನು ಸೇರ್ಪಡೆ ಮಾಡಿದ್ದೇವೆ, ಎಲ್ಲವೂ ಟೈಯರ್-2+ ನಗರಗಳ ಸುತ್ತಮುತ್ತಲಿನ ಭೌಗೋಳಿಕ ಪ್ರದೇಶಗಳಲ್ಲಿವೆ" ಎಂದರು.

"ದೇಶದ ವಿವಿಧ ಭಾಗಗಳಲ್ಲಿ ಅತಿದೊಡ್ಡ ಜಾನುವಾರು ಕಲ್ಯಾಣ ಪಾಠ ಕಾರ್ಯಕ್ರಮವನ್ನು ಆಯೋಜಿಸಿರುವುದಕ್ಕೆ ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್‌ನಿಂದ ಮನ್ನಣೆ ಪಡೆದಿರುವುದು ಎಸ್‌ಎಂಎಫ್ ಜಿ ಇಂಡಿಯಾ ಕ್ರೆಡಿಟ್‌ನಲ್ಲಿನ ಪ್ರತಿಯೊಬ್ಬರಿಗೂ ಹೆಮ್ಮೆಯ ಕ್ಷಣವಾಗಿದೆ. ಗಿನ್ನೆಸ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ವಿಶ್ವ ದಾಖಲೆ ಸ್ಥಾಪಿಸುವುದು ಗ್ರಾಮೀಣ ಕಲ್ಯಾಣಕ್ಕೆ ಸಂಬಂಧಿಸಿದ ನಮ್ಮ ಸಮರ್ಪಣಾ ಭಾವನೆಯನ್ನು ಪುನರುಚ್ಚರಿಸುತ್ತದೆ. ರೈತಾಪಿ ವರ್ಗಕ್ಕೆ ನಮ್ಮ ಹಣಕಾಸಿನ ಪರಿಹಾರಗಳ ಮೂಲಕ ಆರ್ಥಿಕ ನೆರವು ಒದಗಿಸುವ ಮೂಲಕ ಸಮುದಾಯಗಳನ್ನು ಸಬಲೀಕರಣಗೊಳಿಸುವುದನ್ನು ಮುಂದುವರಿಸಲು ನಮಗೆ ಪ್ರೇರಣೆ ನೀಡಲಿದೆ" ಎಂದು ಎಸ್‌ಎಂಎಫ್ ಜಿ ಇಂಡಿಯಾ ಕ್ರೆಡಿಟ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವಾಮಿನಾಥನ್ ಸುಬ್ರಮಣಿಯನ್ ಹೇಳಿದ್ದಾರೆ.

ವಿಶ್ವ ದಾಖಲೆಗಳನ್ನು ಸಾಧಿಸುವ ತನ್ನ ಶ್ರೀಮಂತ ಪರಂಪರೆ ನಿರ್ಮಿಸುವ ಪಶು ವಿಕಾಸ ದಿನವನ್ನು ಈ ಹಿಂದೆ ಒಂದೇ ದಿನದಲ್ಲಿ ಅತಿದೊಡ್ಡ ಜಾನುವಾರು ಆರೈಕೆ ಶಿಬಿರಗಳನ್ನು ಆಯೋಜಿಸಿದ್ದಕ್ಕಾಗಿ ವರ್ಲ್ಡ್ ರೆಕಾರ್ಡ್ಸ್ ಯೂನಿಯನ್, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್, ಬೆಸ್ಟ್ ಆಫ್ ಇಂಡಿಯಾ ರೆಕಾರ್ಡ್ಸ್ ಮತ್ತು ವರ್ಲ್ಡ್ ಬುಕ್ಸ್ ಆಫ್ ರೆಕಾರ್ಡ್ಸ್ ನಮ್ಮ ಕಂಪನಿಯ ಸಾಧನೆಯನ್ನು ಗುರುತಿಸಿವೆ ಎಂದರು.

## ಆಸ್ಪತ್ರೆಯ ಕಟ್ಟಡದ ಮೂರನೇ ಮಹಡಿಗೆ ಸ್ಥಳಾಂತರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.20-ಈ ಹಿಂದೆ ಕಲಬುರಗಿ ಜಿಮ್ಸ್ ಆಸ್ಪತ್ರೆಯ ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಫೆಬ್ರವರಿ 18 ರಿಂದ ಕಲಬುರಗಿ ಜಿಮ್ಸ್ ನೂತನ ಆಸ್ಪತ್ರೆಯ ಕಟ್ಟಡದ ಮೂರನೇ ಮಹಡಿಗೆ ಸ್ಥಳಾಂತರಿಸಲಾಗಿದೆ ಎಂದು ಕಲಬುರಗಿಯ ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಜಿಮ್ಸ್) ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಜ್ಞರು ಹಾಗೂ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾಕುಂಭ:ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿ ದರ್ಶನ ಪಡೆದ ರಾಜಕುಮಾರ ಆರ್ ಹಡಪದ



ಮಲ್ಲಮ್ಮ ನುಡಿ ವಾರ್ತೆ

ಉತ್ತರ ಪ್ರದೇಶ:- ರಾಜ್ಯದ ಇತಿಹಾಸಿಕ ಸ್ಥಳವಾಗಿರುವ ಪ್ರಯಾಗರಾಜನಲ್ಲಿ 144 ವರ್ಷಕ್ಕೊಮ್ಮೆ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಕರ್ನಾಟಕ ರಾಜ್ಯದ ಬೀದರ್ ಜಿಲ್ಲೆಯ ಚಿಟಗುಪ್ಪ ಪಟ್ಟಣದ ನಿವಾಸಿ ರಾಜಕುಮಾರ ಆರ್. ಹಡಪದ, ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮ ಸ್ಥಳವಾಗಿರುವ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿ ನಾಡಿನ ಜನತೆಗೆ ಹಾಗೂ ವಿಶೇಷವಾಗಿ ರೈತರ ಮತ್ತು ಸೈನಿಕರಿಗೆ, ಸುಖ, ಶಾಂತಿ, ನೆಮ್ಮದಿ, ಆಯುಷ್ಯ, ಆರೋಗ್ಯ ನೀಡಿ ದಯಪಾಲಿಸಲೆಂದು ಪ್ರಾರ್ಥನೆ ಸಲ್ಲಿಸಿದರು.

# ಪ್ರಯಾಗರಾಜನಲ್ಲಿ ಶಾಸಕ ತುನ್ನೂರ್ ಮಹಾ ಕುಂಭ ಮೇಳ ಅಭೂತಪೂರ್ವ



ಮಲ್ಲಮ್ಮ ನುಡಿ ವಾರ್ತೆ


ಯಾದಗಿರಿ:ಉತ್ತರ ಪ್ರದೇಶದ ಪ್ರಯಾಗರಾಜ ಕುಂಭಮೇಳದಲ್ಲಿ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರ್ ಭಾಗವಹಿಸಿ, ತ್ರಿವೇಣಿ ಸಂಗಮದಲ್ಲಿ ಶಾಹಿ (ಪುಣ್ಯ) ಸ್ನಾನ ಮಾಡಿದರು.

144 ವರ್ಷಗಳಿಗೊಮ್ಮೆ ಬರುವ ಈ ಮಹಾಕುಂಭ ಮೇಳದ ತ್ರಿವೇಣಿ ಸಂಗಮದಲ್ಲಿ ಮುಳುಗಿ ಏಳುವುದು ಸುದೈವವೇ ಸರಿ, ಅಭೂತಪೂರ್ವ ಕುಂಭ ಮೇಳದಲ್ಲಿ ಭಾಗವಹಿಸಿ ಸಂತಸ ನನಗಾಗಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಸಮಸ್ತ ರಾಜ್ಯದ ಜನತೆಗೆ ಅದರಲ್ಲೂ ಕಲ್ಯಾಣ ಕರ್ನಾಟಕ ಭಾಗದ ಜನರ ಏಳಿಗೆಗೆ ಪ್ರಾರ್ಥನೆ ಸಲ್ಲಿಸಿರುವೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ವಿನಾಯಕ ಮಾಲಿಪಾಟೀಲ್, ಸಾಬಣ್ಣ ಕೆ-ಂಗುರಿ, ಮಲ್ಲಿಕಾರ್ಜುನ ಗೌಡ-ರೆಡ್ಡಿ, ಶರಣ ಗೌಡ ಬಾಲ್ಕಲ್, ಸುರೇಶ ಮಡ್ಡಿ,ಗುರುಬಸಪ್ಪ, ತಿಮಣ್ಣ ನಾಯಕ, ಅಮರೇಶ ಜಾಕ ಇದ್ದರು.

# ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಹಾಗೂ ಪಿಕೆಪಿಎಸ್ ಮಾಜಿ ಅಧ್ಯಕ್ಷರಾದ ಅಶೋಕ ಸ್ವಾಮಿ ಫಾತ್ಮಪುರ್ ಅವರು ತಮ್ಮ ಆತ್ಮೀಯ ಗೆಳೆಯರ ಬಳಗದೊಂದಿಗೆ ಉತ್ತರ ಪ್ರದೇಶ ರಾಜ್ಯದ ಐತಿಹಾಸಿಕ ಸ್ಥಳವಾಗಿರುವ ಪ್ರಯಾಗರಾಜನಲ್ಲಿ 144 ವರ್ಷಕ್ಕೊಮ್ಮೆ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಭಾಗವಹಿಸಿ ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮ ಸ್ಥಳವಾಗಿರುವ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ (ಅಮೃತ ಸ್ನಾನ) ಮಾಡಿ ನಾಡಿನ ಒಳತಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಬುಧವಾರ ವಾರಣಾಸಿಯ ಶ್ರೀ ಕಾಶಿ ವಿಶ್ವನಾಥ ದೇವರ ದರ್ಶನ ಪಡೆದರು.

ಜೊತೆಯಲ್ಲಿ ವೆಂಕಟ ಪೂಜಾರಿ, ರಾಜಕುಮಾರ ಆರ್. ಹಡಪದ, ನರೇಂದ್ರರೆಡ್ಡಿ ರಾಂಪುರ, ಧರ್ಮರೆಡ್ಡಿ ಚಿಂಚೋಳಿ, ಜಗನಾಥ ಗೋಣಗಿ, ಶಕೀಲ್ ಆಲ್ಲೂರ್, ಸೂರ್ಯಕಾಂತ ಸಂಗೊಳ್ಳಗಿ ಇದ್ದರು.

# ಅಂಗವಿಕಲರಿಗೆ ವೀಲ್ ಚೇರ್ ವಿತರಣ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಸುರುಪುರ :19/02/2025 ರಂದು ಎ ಪಿ ಡಿ ಸಂಸ್ಥೆ ಸುರಪುರದಲ್ಲಿ ವೀಲ್ ಚೇರ್ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಮುಖ್ಯ ಅತಿಥಿಗಳಾಗಿ ಸುರಪುರ ಉಪ ತಹಸೀಲ್ದಾರ ಬಸವರಾಜ ಪಾಟೀಲ, ಪ್ರಭು ಜೈನಾಪುರ ಜಿಲ್ಲಾಧ್ಯಕ್ಷರು SCI ಯಾದಗಿರ ಹಾಗೂ ಅಧಿಕಾರಿಗಳಾದ ಶಿವಕುಮಾರ ಅವರು ಮತ್ತು ಎಪಿಡಿ ಸಂಸ್ಥೆಯ ಎಲ್ಲಾ ಸಿಬ್ಬಂದಿ ವರ್ಗ ಹಾಗೂ ತಾಲ್ಲೂಕಿನ ಅನೇಕ ವಿಶೇಷ ಚೇತನರು ಭಾಗವಹಿಸಿದರು.

ಎಪಿಡಿ ತಾಲ್ಲೂಕು ಸಂಯೋಜಕರಾದ ಗಿರೀಶ್ ಕುಲಕರ್ಣಿ ಸ್ವಾಗತಿಸಿದರು. ಉಪ ತಹಸೀಲ್ದಾರ ಅವರು ಮಾತನಾಡಿ ಸಂಸ್ಥೆಯ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ನಂತರ ಜಿಲ್ಲಾಧ್ಯಕ್ಷರಾದ ಪ್ರಭು ಜೈನಾಪುರ ಅವರು ಎ ಪಿ ಡಿ ಸಂಸ್ಥೆಯ ಸಂಸ್ಥಾಪಕರಾದ ಹೇಮಾ ಮೇಡಂ ರವರ ಬಗ್ಗೆ ಮತ್ತು ಸಂಸ್ಥೆಯ ಕಾರ್ಯಕ್ರಮಗಳ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು. ನಂತರ 10 ಫಲಾನುಭವಿಗಳಿಗೆ ವೀಲ್ ಚೇರ್ ವಿತರಣೆ ಮಾಡಲಾಯಿತು.!

# ಶ್ರೀ ಗುಡ್ಡಾಪುರ ದಾನಮ್ಮ ದೇವಿ ಎರಡನೆ ದಿನದ ಪುರಾಣ ಕಾರ್ಯಕ್ರಮಕ್ಕೆ ಸಚಿವರು ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ.ಪೇ 20-: ತಾಲೂಕಿನ ಶ್ರೀ ಕ್ಷೇತ್ರ ಬೆನಕನಹಳ್ಳಿ ಶ್ರೀ ಸಿದ್ಧಲಿಂಗೇಶ್ವರ ವಿರಕ್ತಮಠದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಹಮ್ಮಿಕೊಂಡಿರುವ ಗುಡ್ಡಾಪುರ ದಾನಮ್ಮ ದೇವಿ ಎರಡನೆ ದಿನದ ಪುರಾಣ ಕಾರ್ಯಕ್ರಮವನ್ನು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರಾದ ಶ್ರೀ ಡಾ.ಶರಣಪ್ರಕಾಶ್ ಪಾಟೀಲ್ ದಾನಮ್ಮ ದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಚಾಲನೆ ನೀಡಿದರು.ನಮ್ಮ ನಾಡಿಗೆ ಮಠ ಮಾನ್ಯಗಳ ಕೊಡುಗೆ ಅಪಾರವಾದದ್ದು. ಮಠಗಳು ಒಳ್ಳೆಯ ಶಿಕ್ಷಣ, ಸಂಸ್ಕಾರ ಮಠಗಳ ಮಾಡಲಿವೆ. ಎಂದರು ಮುಂದಿನ ದಿನಗಳಲ್ಲಿ ಶ್ರೀ ಮಠಕ್ಕೆ ಹೆಚ್ಚಿನ ಅನುದಾನವನ್ನು ನೀಡುತ್ತೇನೆ ಎಂದು ಮಾತನಾಡಿದರು.ದಿವ್ಯಸಾನಿಧ್ಯ ವಹಿಸಿದ್ದ ಶ್ರೀ ರಾಜಶೇಖರ ಶಿವಾಚಾರ್ಯರು ಹಲಕಟ್ಟಿ ಹಾಗೂ ಗುಡ್ಡೆಪಲ್ಲಿಯ ಶ್ರೀ ಶಿವಸಿದ್ದ ಸೋಮೇಶ್ವರ ಶಿವಾಚಾರ್ಯರು ಭಕ್ತಾದಿಗಳಿಗೆ

ಆಶೀರ್ವಚನ ದಯಪಾಲಿಸಿದರು.ಪರಮ ಶ್ರೀ ಕೇದಾರ ಲಿಂಗ ದೇವರು ನೇತೃತ್ವ ವಹಿಸಿದ್ದರು.ಇದೇ ಸಂದರ್ಭದಲ್ಲಿ ಶ್ರೀ ಶಂಬು ರೆಡ್ಡಿ ಮದ್ನಿ. ಶಿವಶರಣರೆಡ್ಡಿ ಪಾಟೀಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಸೇಡಂ,

ವಿಶ್ವನಾಥ ಪಾಟೀಲ್ ಬೊಮ್ಮನಳ್ಳಿ,ಹೆಮರೆಡ್ಡಿ ಪಾಟೀಲ್ ನ್ಯಾಯವಾದಿಗಳು ಕಲ್ಕಂಬ.ರಾಜು ಪಾಟೀಲ್, ಉಮಾರೆಡ್ಡಿ ಮಾಜಿ ತಾಲೂಕ್ ಪಂಚಾಯತ್ ಸದಸ್ಯರು ಹಂದರಕಿ, ಜೈ ಭೀಮ್ ಉಡುಗಿ, ಸಂತೋಷ್ ಮಹಾರಾಜ್ ಸೇಡಂ. ಐಲರೆಡ್ಡಿ ಪೊಲೀಸ್ ಪಾಟೀಲ್, ಮುಸ್ಥಳ್ಳಿ, ವೀರೇಶ್ ಕೊಟಗಿ , ಸತೀಶ್ ಪೂಜಾರಿ ಕುರುಬ ಸಮಾಜದ ತಾಲೂಕ ಅಧ್ಯಕ್ಷರು ಸೇಡಂ, ಶ್ರೀ ಸಂಗಯ್ಯ ಸ್ವಾಮಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ್ ಬೆನಕನಹಳ್ಳಿ, ನೌಕರರ ಸಂಘದ ತಾಲೂಕು ಅಧ್ಯಕ್ಷರು ಅರವಿಂದ ಪಸರ ಉಪಸ್ಥಿತರಿದ್ದರು, ಶ್ರೀ ಬಸಯ್ಯ ಸ್ವಾಮಿ ಮಠಪತಿ ಸ್ವಾಗತಿಸಿದರು.ಚನ್ನಯ್ಯ ಸ್ವಾಮಿ ಮಠಪತಿ ನಿರೂಪಿಸಿದರು,

## ವಾರ್ಡ್ ನಂಬರ್ 22ರಲ್ಲಿ ಅಪಘಾತಕ್ಕೆ ಗುಂಡಿ ಕೈ ಮಾಡಿ ಕರೆಯುತ್ತಿದೆ

# ರಾಘವೇಂದ್ರ ಯಕ್ಷಂತಿ ಅಧಿಕಾರಿಗಳ ವಿರುದ್ಧ ಗರಂ



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ನಗರಸಭೆ ವ್ಯಾಪ್ತಿಯಲ್ಲಿ ಬರುವ ವರ್ಡ್ ನಂಬರ್ 22ರಲ್ಲಿ ಮುಖ್ಯ ರಸ್ತೆ ಆಗಿರುವ ಕನಕ ಬೋರ್ಡ್ ಮುಂದೆ ಹಲವಾರು ಬೈಕ್ ಸವಾರರು ಹಾಗೂ ಪದಾಚಾರಿಗಳು ಅಪಘಾತಗಳಾಗಿದ್ದು ಹಲವು ಬಾರಿ ನಗರಸಭೆ ಮೇಲಾಧಿಕಾರಿಗಳಿಗೂ ಹಲವು ಬಾರಿ ಮನವಿ ಸಲ್ಲಿಸಿದರು ಕ್ಯಾರೆಯನ್ನದ ಪೌರಾಯುಕ್ತರು ಕೂಡಲೇ ಇತ್ತ ಗಮನಹರಿಸಿ ವಾರ್ಡ್ ನಂಬರ್ 22 ನಗರದ ನಿವಾಸಿಗಳಿಗೆ ಅನುಕೂಲ ಮಾಡಿಕೊಡುವಂತೆ ನಗರಸಭೆ ಸದಸ್ಯರಾದ ರಾಘವೇಂದ್ರ ಯಕ್ಷಂತಿ ಒಂದು ವಾರದ ಒಳಗೆ ನಿರ್ಮಿಸದೆ ಹೋದರೆ ನಗರಸಭೆ ಆವರಣದ ಮುಂದೆ ಉಪವಾಸ ಪ್ರತಿಭಟನೆ ಮಾಡುವುದಾಗಿ ಪತ್ರಿಕೆಗೆ ತಿಳಿಸಿದ್ದಾರೆ .

ಇನ್ನಾದರೆ ಎಚ್ಚೆತ್ತುಕೊಂಡು ಅಧಿಕಾರಿಗಳು ಸೂಕ್ತ ಕ್ರಮ



ಕೈಗೊಂಡು ಸಾರ್ವಜನಿಕರಿಗೆ ಅನುಕೂಲವಾಗಲಿ ಎಂದು ಮಲ್ಲಮ್ಮ ನುಡಿಯ ಪತ್ರಿಕೆ ಆಶಯವಾಗಿದೆ.

## ನ್ಯಾಷನಲ್ ಪ್ಯಾರಾಮೆಡಿಕಲ್ ಕಾಲೇಜ್ ಸಂಭ್ರಮ, ಬೀಳ್ಕೊಡುಗೆ ಮತ್ತು ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.20: ನಗರದಲ್ಲಿ ವೃತ್ತಿ ಶಿಕ್ಷಣಕ್ಕೆ ಹೆಸರಾದ ಶ್ರೀ ವಿದ್ಯಾಭಾರತಿ ಸಂಸ್ಥೆವು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಬದುಕು ರೂಪಿಸುತ್ತಾ ವೈದ್ಯಕೀಯ ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡುತ್ತಿರುವ ನ್ಯಾಶನಲ್ ಪ್ಯಾರಾ ಮೆಡಿಕಲ ಕಾಲೇಜನ ತೃತೀಯ ವರ್ಷದ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಫೆ.21ರಂದು ಕೊಪ್ಪಳದ ಸಾಹಿತ್ಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ನುರಿತ ಸಿಬ್ಬಂದಿಯೊಂದಿಗೆ ಸುಸಜ್ಜಿತ ಕಟ್ಟಡಗಳನ್ನೊಳಗೊಂಡ ಪ್ರಯೋಗಾಲಯ ಹಾಗೂ ಕಂಪ್ಯೂಟರ್ ಶಿಕ್ಷಣದ ಮೂಲಕ ಮಕ್ಕಳ ಭವಿಷ್ಯ ರೂಪಿಸುತ್ತಿದೆ ಈ ಸಂಸ್ಥೆ.ಕಾಲೇಜಿನ ಪ್ರಾಶುಂಪಾಲರಾದ ಗೀತಾ ಬಳ್ಳಾರಿಯವರ ನೇತೃತ್ವದಲ್ಲಿ ಈ ಸಂಸ್ಥೆಯು ಸಮಾಜಕ್ಕೆ ಉತ್ತಮ ಕೊಡುಗೆ ನೀಡುತ್ತಿದೆ. ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದು ನಗರ ಮತ್ತು ಗ್ರಾಮೀಣ ಮಕ್ಕಳ ವೃತ್ತಿಪರ ಶಿಕ್ಷಣಕ್ಕೆ ಹೆಸರಾಗಿದ್ದು ಕಾಲೇಜ್ ಸಂಭ್ರಮವನ್ನು ಆಚರಿಸಿಕೊಳ್ಳುತ್ತಿದೆ.

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಗವಿಸಿದ್ದೇಶ್ವರ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದು ಕೊಪ್ಪಳದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳರವರು ಕಾರ್ಯಕ್ರಮವನ್ನು ಉದ್ಘಾಟನೆಗೊಳಿಸಲಿದ್ದು,ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಶುಂಪಾಲರಾದ ಗೀತಾ ಬಳ್ಳಾರಿ ಮುಖ್ಯ ಅತಿಥಿಗಳಾಗಿ ಹೇಮಲತಾ ನಾಯಕ್ ವಿಧಾನ ಪರಿಷತ್ ಸದಸ್ಯರು,ಗಾಲಿ ಜನಾರ್ದನರಡ್ಡಿ ಶಾಸಕರು,ಮಾಜಿ ಶಾಸಕರಾದ ಬಸವರಾಜ ದಡೇಸಗೂರು,ಪಿ.ನಾರಾಯಣ, ಬಸವರಾಜ ಕ್ಯಾವಟರ್, ಡಾ.ಲಿಂಗರಾಜು, ನವೀನ ಗುಳಗಣ್ಣನವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.27ರಂದು ಸಂಜೀವಿನಿ ಜೀವ ರಕ್ಷಕ ಪ್ರಶಸ್ತಿ ಪ್ರದಾನ: ರಂಗಸ್ವಾಮಿ ಇಂಗಳದಾಳ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 20 : ಈ ತಿಂಗಳ 27ರಂದು ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ ವತಿಯಿಂದ ತುರ್ತು ಪರಿಸ್ಥಿತಿಗಳಲ್ಲಿ ಸಾಮಾನ್ಯ ಜನರ ನೆರವಿಗೆ ನಿಂತ ರಾಜ್ಯದ ಕಾರ್ಮಿಕ ಸಚಿವ ಸಂತೋಷ ಲಾಡ್ ಅವರ ಹುಟ್ಟುಹಬ್ಬವಾದ್ದರಿಂದ ಅಂದು ಅವರಿಗೆ ಗೌರವಪೂರ್ವಕವಾಗಿ ಅಭಿನಂದಿಸಲು ಸಂಜೀವಿನಿ ಜೀವನ ಟ್ರಸ್ಟ್ ವತಿಯಿಂದ ನೀಡಲ್ಪಡುವ ಸಂಜೀವಿನಿ ಜೀವ ರಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಆಪತ್ ರಕ್ಷಕ ದಿನಾಚರಣೆ ಆಯೋಜನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ ಸಂಸ್ಥಾಪಕ ಅಧ್ಯಕ್ಷ ರಂಗಸ್ವಾಮಿ.ಡಿ.ಇಂಗಳದಾಳ ತಿಳಿಸಿದರು.ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು,




**ಜಿಲ್ಲೆಯ 15 ವಿವಿಧ ಸಾಧಕರಿಗೆ ಸಂಜೀವಿನಿ ಪ್ರಶಸ್ತಿ: ರತ್ನದೀಪ ಕಸ್ತುರೆ**

ಆರೋಗ್ಯ, ಶೈಕ್ಷಣಿಕ, ಸಾಮಾಜಿಕ, ಮಾಧ್ಯಮಿಕ, ಕೃಷಿ, ಕೈಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ 15 ಜನ ಸಾಧಕರಿಗೆ ಈ ತಿಂಗಳ 27ರಂದು ನಗರದ ಕರ್ನಾಟಕ ಸಾಹಿತ್ಯ ಸಂಗದ ಸಾಂಸ್ಕೃತಿಕ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ ವತಿಯಿಂದ ಸಂಜೀವಿನಿ ಪ್ರಸಸ್ತಿ ಪ್ರದಾನ ಮಾಡಲಾಗುತ್ತಿದ್ದು, ಸಾಧಕರು ನಮ್ಮ ಬಳಿ ತಮ್ಮ ಸಾಧನೆಗೆ ಸಂಬಂಧಿಸಿದ ಅರ್ಜಿ ಜೊತೆಗೆ ಅಗತ್ಯ ಸಾಧಕ ದಾಖಲೆಗಳನ್ನು ಸಲ್ಲಿಸಬೇಕೆಂದು ಟ್ರಸ್ಟ್ ಜಿಲ್ಲಾಧ್ಯಕ್ಷ ರತ್ನದೀಪ ಕಸ್ತುರೆ ಹೇಳಿದರು.

ಕಳೆದ ಮೂರು ವರ್ಷಗಳ ಹಿಂದೆ ಕೋವಿಡದಿಂದೀಚೇಗೆ ಚಿದ್ರದುರ್ಗದಲ್ಲಿ ಸಂಜೀವಿನಿ ಜೀವರಕ್ಷಕ ಟ್ರಸ್ಟ್ ಸ್ಥಾಪಿಸಲಾಯಿತು. ಕೋವಿಡ್ ಕಾಲದಲ್ಲಿ ಕೊರೊನಾ ವಾರಿರ್ಸ್ಸಾಗಿ ಹಲವಾರು ಕಾರ್ಯಗಳನ್ನು ಕೈಗೊಂಡು ನೂರಾರು ಜನರ ಜೀವ ಉಳಿಸಿದೇವು ಹಾಗೇ ಎಷ್ಟೊ ವಾರಸುದಾರರಿಲ್ಲದ ಶವಗಳನ್ನು ಸಂಕೋಚವಿಲ್ಲದೆ ಶವ ಸಂಸ್ಕಾರ ಮಾಡಿದ್ದೇವೆ. ಎರಡು ವರ್ಷಗಳಿಂದ ರಾಜ್ಯ ಮಟ್ಟದ ಕಾರ್ಯಕ್ರಮ ಆಯೋಜಿಸಿದ್ದೇವೆ. ಈ ವರ್ಷ ದಾವಣಗೆರೆ ಅಥವಾ ಕೊಪ್ಪಳದಲ್ಲಿ ಆಯೋಜಿಸಲು ತಿರ್ಮಾನಿಸಲಾಗಿದೆ ಎಂದರು.

ಈ ವರ್ಷ ರಾಜ್ಯದ ಬೀದರ್, ವಿಜಯಪುರ, ರಾಯಚುರು, ಕೊಪ್ಪಳ, ವಿಜಯನಗರ, ಬಳ್ಳಾರಿ, ಚಿತ್ರದುರ್ಗ, ಹುಬ್ಬಳ್ಳಿ, ದಾವಣಗೆರೆ ಸೇರಿದಂತೆ ಹೀಗೆ ರಾಜ್ಯದ ಒಟ್ಟು 15 ಜಿಲ್ಲೆಗಳಲ್ಲಿ 27ರಂದು ಏಕ ಕಾಲಕ್ಕೆ ಈ ಕಾರ್ಯಕ್ರಮ ಆಯೋಜಿಸಲಾಗುತ್ತದೆ ಎಂದು ರಂಗಸ್ವಾಮಿ ವಿವರಿಸಿದರು.

ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ ರಾಜ್ಯ ಸಂಘಟನಾ ಕಾರ್ಯದರ್ಶಿ ಶಶಿಧರ.ಸಿ.ಭತ್ತನಯನಹಟ್ಟಿ, ಟ್ರಸ್ಟ್ ಪ್ರಮುಖರಾದ ಜಾನಸನ್ ಫೋಡೆ, ಸಚೀನ ಗಿರಿ, ಸುನಿಲ ಮಿತ್ರಾ, ಆನಂದ ಕಾಂಬಳೆ, ಪ್ರಕಾಶ ಕಾಂಬಳೆ, ಉತ್ತಮ ಗಾಯಕವಾಡ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ವ್ಯವಸ್ಥೆ ಸರಿಪಡಿಸದಿದ್ದರೆ ಪ್ರತಿಭಟನೆ: ಕರವೇ ಎಚ್ಚರಿಕೆ

## ಜನನ, ಮರಣ ಪ್ರಮಾಣ ಪತ್ರಕ್ಕೆ ತೊಂದರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 20 : ಇಲ್ಲಿಯ ನಗರಸಭೆ ಕಚೇರಿಯಲ್ಲಿ ಜನನ ಹಾಗೂ ಮರಣ ಪ್ರಮಾಣ ಪತ್ರಕ್ಕಾಗಿ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸಬೇಕಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ದೂರಿದ್ದಾರೆ.



ನಗರಸಭೆ ಕಚೇರಿಯ ಕೊಠಡಿ ಸಂಖ್ಯೆ 7 ರಲ್ಲಿ ಜನನ ಮತ್ತು ಮರಣ ಪ್ರಮಾಣ ಪತ್ರದ ಕೌಂಟರ್ ಇದೆ. ಕೊಠಡಿ ಹಿಂಭಾಗದ ಕೌಂಟರನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರು ಎರಡು ಅಡಿ ಎತ್ತರದ ಕಿಟಕಿ ಹತ್ತಬೇಕಾಗಿದೆ. ನೆರಳಿನ ವ್ಯವಸ್ಥೆ ಇಲ್ಲದ ಕಾರಣ ಗಂಟೆಗಟ್ಟಲೆ ಬಿಸಿಲಲ್ಲೇ ನಿಲ್ಲಬೇಕಾಗಿದೆ ಎಂದು ಹೇಳಿದ್ದಾರೆ.

ಪ್ರಮಾಣ ಪತ್ರ ಪಡೆಯಲು ಬರುವವರಿಗೆ ಆಸನ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಹೀಗಾಗಿ ಅಂಗವಿಕಲರು, ಮಹಿಳೆಯರು ಹಾಗೂ ಹಿರಿಯ ನಾಗರಿಕರು ಹೈರಾಣಾಗಬೇಕಾಗಿದೆ ಎಂದು ತಿಳಿಸಿದ್ದಾರೆ.

ಕೌಂಟರ್ ಸಿಬ್ಬಂದಿ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಕೌಂಟರನಲ್ಲಿ ಸದಾ ದಲ್ಲಾಳಿಗಳೂ ಇರುತ್ತಿದ್ದಾರೆ. ಹೀಗಾಗಿ ಸಾರ್ವಜನಿಕರಿಗೆ ಸಕಾಲಕ್ಕೆ ಸುಲಭವಾಗಿ ಪ್ರಮಾಣ ಪತ್ರ ದೊರೆಯುತ್ತಿಲ್ಲ ಎಂದು ಆಪಾದಿಸಿದ್ದಾರೆ.

ಕೌಂಟರ್ ಸಿಬ್ಬಂದಿಯನ್ನು ಬದಲಿಸಬೇಕು. ದಲ್ಲಾಳಿಗಳ ಹಾವಳಿ ತಪ್ಪಿಸಬೇಕು. ಸಾರ್ವಜನಿಕರಿಗೆ ನೆರಳು, ಆಸನ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಕೂಡಲೇ ವ್ಯವಸ್ಥೆ ಸರಿಪಡಿಸದಿದ್ದರೆ ನಗರಸಭೆ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

## ಕಮಲನಗರ:ಛತ್ರಪತಿ ಶಿವಾಜಿ ಮಹಾರಾಜರ 395ನೇ ಜಯಂತ್ಯುತ್ಸವ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.20:ಪಟ್ಟಣದ ತಹಸಿಲ್ ಕಚೇರಿಯಲ್ಲಿ ತಾಲೂಕ ಆಡಳಿತದ ವತಿಯಿಂದ ಛತ್ರಪತಿ ಶಿವಾಜಿ ಮಹಾರಾಜರ 395ನೇ ಜಯಂತ್ಯುತ್ಸವ ಬುಧವಾರ ಆಚರಣೆ ಮಾಡಲಾಯಿತು.

ಪ್ರವೀಣ ಬಿರಾದಾರ ಮಾತನಾಡಿ,

ಅತ್ಯುತ್ತಮ ನಾಯಕತ್ವ, ಅಡಳಿತ ತಂತ್ರಗಾರಿಕೆ ಮತ್ತು ಪ್ರಬುದ್ಧ ಅಡಳಿತಕ್ಕೆ ಹೆಸರಾದ ಛತ್ರಪತಿ ಶಿವಾಜಿ ಮಹಾರಾಜರು ಹಿಂದವಿ ಸಾಮ್ರಾಜ್ಯದ ಸಂಸ್ಥಾಪಕರಾಗಿದ್ದರು.

ಬಿಜಾಪುರ ಆದಿಲ್ ಷಾಹಿಗಳ ವಿರುದ್ಧ ಶಿವಾಜಿ ನಡೆಸಿದ ಹೋರಾಟಗಳು ಭೋಸ್ಲೆ ಮನೆತನ ರಾಜಕೀಯ ಅಸ್ತಿತ್ವ ಪಡೆದು



ದಕ್ಷಿಣ ಭಾರತದಲ್ಲಿ ಹಿಂದವಿ ಸಾಮ್ರಾಜ್ಯ ಸ್ಥಾಪಿಸಿದರು.

ತಾಯಿ ಜೀಜಾಮಾತೆ ಮತ್ತು ಗುರು ರಾಮದಾಸರ ಆದರ್ಶ ವಿಚಾರಗಳಿಂದ ಪ್ರಭಾವಿತರಾದ ಶಿವಾಜಿ ಧೈರ್ಯ, ಸಹನೆ ಮತ್ತು ಅಧ್ಯಾತ್ಮ ಬಲದಿಂದ ವಿಶಾಲ ಸಾಮ್ರಾಜ್ಯವನ್ನು ನಿರ್ಮಿಸಿದ ಮಹಾನ ಹೋರಾಟಗಾರರು. ಔರಂಗಜೇಬನ ಧಾರ್ಮಿಕ ತುಷ್ಟಿಕರಣ ಮತ್ತು ಯುದ್ಧ ನೀತಿ ವಿರುದ್ಧ ನಡೆಸಿದ ಹೋರಾಟಗಳು ಇತಿಹಾಸದ ಪುಟದಲ್ಲಿ ಹೊಸ ದಾಖಲೆ ನಿರ್ಮಿಸಿವೆ ಎಂದರು.

ಎಸ್.ಎನ್.ಶಿವಣಕರ ಮಾತನಾಡಿ ಛತ್ರಪತಿ ಶಿವಾಜಿ ಮಹಾರಾಜರು ಧೀರ ಮತ್ತು ಪರಾಕ್ರಮಿ ಆಗಿದ್ದು, ಯಾವುದೇ ಸಮುದಾಯಕ್ಕೆ ಸೀಮಿತವಾಗಿರದೆ ಒರ್ವ ಮಹಾನ ನಾಯಕರು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ.ಅಧ್ಯಕ್ಷೆ ಸುಶೀಲಾಬಾಯಿ ಮಹೇಶ ವಹಿಸಿದರು.ಗ್ರೇಡ2 ತಹಸೀಲ್ದಾರ ರಮೇಶ ಪೆದ್ದೆ, ತಾ.ಪಂ. ಇಓ ಮಾಣಿಕರಾವ ಪಾಟೀಲ್, ಎಡಿ ಹಣಮಂತರಾಯ ಕೌಟಗೆ, ಕ.ಸಾ.ಪ ಅಧ್ಯಕ್ಷ ಪ್ರಶಾಂತ ಮಠಪತಿ, ಎಸ್ಎನ್ ಶಿವಣಕರ, ಸಮಿತಿ ಅಧ್ಯಕ್ಷ ಸಚಿನ ಜಾಧವ, ಶ್ರೀರಂಗ ಪರಿಹಾರ, ಸುನಿಲ ಚಾಂಗೋಣೆ, ಪ್ರವೀಣ ಕದಮ, ಶಾಂತಕುಮಾರ ಬಿರಾದಾರ, ಮಾಧವರಾವ ಚಾಂಗೋಣೆ, ರಂಗರಾವ ಜಾಧವ, ದಿಲೀಪ ಹುಣಸನಾಳೆ, ಆರ. ವ್ಹಿ. ಸೂರ್ಯವಂಶಿ ಸೇರಿದಂತೆ ಅನೇಕರು ಇದ್ದರು. ಆಕಾಶ ಜಾಧವ ಸ್ವಾಗತಿಸಿದರು. ಪಿಡಿಓ ರಾಜಕುಮಾರ ತಂಬಾಕೆ ಕಾರ್ಯಕ್ರಮ ನಿರೂಪಿಸಿದರು. ಎಡಿ ಹಣಮಂತರಾಯ ಕೌಟಗೆ ವಂದಿಸಿದರು.

## ಮುಖ್ಯಮಂತ್ರಿಗೆ ಕ್ಲೀನ್ ಚಿಟ್: ಸಂತಸ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 20 : ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಹಗರಣದಲ್ಲಿ ಲೋಕಾಯುಕ್ತ ಪೊಲೀಸರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿಗೆ ಕ್ಲೀನ್ ಚಿಟ್ ನೀಡಿದ್ದಕ್ಕೆ ಕಾಂಗ್ರೆಸ್ ಪ್ರಚಾರ ಸಮಿತಿಯ ಬೀದರ್ ದಕ್ಷಿಣ ಘಟಕದ ಅಧ್ಯಕ್ಷ ನರಸಪ್ಪ ಜಾನಕನೋರ ಸಂತಸ ವ್ಯಕ್ತಪಡಿಸಿದ್ದಾರೆ.



ಪ್ರಕರಣದಲ್ಲಿ ಬಿಜೆಪಿ ನಾಯಕರು ಮುಖ್ಯಮಂತ್ರಿ ಅವರ ರಾಜಕೀಯ ಜೀವನಕ್ಕೆ ಕಪ್ಪುಚುಕ್ಕೆ ಇಡುವ ಪ್ರಯತ್ನ ಮಾಡಿದ್ದರು ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯ ಅವರ ಪತ್ನಿ ಅವರಿಗೆ ವಿಐಪಿ ಕೋಟಾ ಅಥವಾ ಯಾವುದೇ ಕೋಟಾದಲ್ಲಿ ನಿವೇಶನ ಸಿಕ್ಕಿರಲಿಲ್ಲ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಅವರ ಜಮೀನು ಸ್ವಾಧೀನಪಡಿಸಿಕೊಂಡಿತ್ತು. ಅದಕ್ಕೆ ಬದಲಿ ನಿವೇಶನಗಳನ್ನು ಅವರಿಗೆ ಕೊಟ್ಟಿತ್ತು. ಆದರೆ, ಬಿಜೆಪಿಯವರು ಸಿದ್ದರಾಮಯ್ಯ ಅವರ ಮೇಲೆ ಸುಳ್ಳು ಆರೋಪ ಹೊರೆಸಿದ್ದರು ಎಂದು ತಿಳಿಸಿದ್ದಾರೆ.

## ಗುಣಮಟ್ಟದ ಕ್ವಿಂಟಲ್ ತೊಗರಿಗೆ 8 ಸಾ. ರೂ ನಿಗದಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.20:ಗುಣಮಟ್ಟದ ಕ್ವಿಂಟಲ್ ತೊಗರಿ ಖರೀದಿಗೆ ಸರಕಾರ 8 ಸಾವಿರ ರೂ ನಿಗದಿ ಪಡಿಸಿದ್ದು ರೈತರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಪಿಕೆಪಿಎಸ್ ಅಧ್ಯಕ್ಷ ಶಿವಾಜಿ ಪಾಟೀಲ್ ಹೇಳಿದರು.

ತಾಲೂಕಿನ ಶಿವಣಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವತಿಯಿಂದ 2024-25ನೆಯ ಸಾಲಿನ ತೊಗರಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಎಫ್ ಎಕ್ಯೂ ಗುಣಮಟ್ಟದ ತೊಗರಿ ಖರೀದಿ ಪ್ರಕ್ರಿಯೆಗೆ ಸರಕಾರ ಆದೇಶಿಸಿದ್ದು, ಅದರಂತೆ ತೊಗರಿ ಖರೀದಿ ಮಾಡಲಾಗುತ್ತಿದೆ.

ಬೆಂಬಲ ಬೆಲೆಯಲ್ಲಿ ಪ್ರತಿ ಕ್ವಿಂಟಲ್ ಗೆ 7550 ರೂ ನಿಗದಿ ಪಡಿಸಲಾಗಿದೆ. ಜತೆಗೆ ರಾಜ್ಯ ಸರಕಾರ ಕ್ವಿಂಟಲ್ ಗೆ 450 ರೂ ಪ್ರೋತ್ಸಾಹ ಧನ ಸೇರಿ ಕ್ವಿಂಟಲ್ ತೊಗರಿಗೆ 8 ಸಾವಿರ ರೂ ನೀಡಲಾಗುತ್ತಿದೆ.

ಮಾರುಕಟ್ಟೆಯಲ್ಲಿ ತೊಗರಿಗೆ ಕಡಿಮೆ ಬೆಲೆ ಇದೆ. ಹಾಗಾಗಿ ಸುತ್ತತ್ತಮುತ್ತಲಿನ ರೈತರು ಖರೀದಿ ಕೇಂದ್ರದ ಸದುಪಯೋಗ ಪಡೆದುಕೊಂಡು ಹೆಚ್ಚಿನ ರೈತರು ಖರೀದಿ ಕೇಂದ್ರದಲ್ಲಿ ತೊಗರಿ ಮಾರಾಟ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿಕೆಪಿಎಸ್ ಉಪಾಧ್ಯಕ್ಷ ರಾಜಕುಮಾರ ಮಡಿವಾಳ, ನಿರ್ದೇಶಕರಾದ ಬಾಬಶೆಟ್ಟಿ ಬೇಲೂರೆ, ಲೋಕೇಶ ನೀಲಾ, ನರ್ಸಿಂಗ ರಾಮ, ವಾಮನ ರಾಮ, ಅಪ್ಪರಾವ ಭದಾಡೆ, ಕಾರ್ಯದರ್ಶಿ ರಮೇಶ ಕನಶೆಟ್ಟೆ ಇದ್ದರು.

## ಫೆ.26 ರಂದು ರಾಮತೀರ್ಥ ದೇವಸ್ಥಾನದಲ್ಲಿ ವಿವಿಧ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.20:ಮಹಾಶಿವರಾತ್ರಿ ಮಹೋತ್ಸವ ಮೇಳ ಸಮಿತಿ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಆಳಂದ ರಸ್ತೆಯಲ್ಲಿರುವ ಶ್ರೀರಾಮತೀರ್ಥ ದೇವಸ್ಥಾನದಲ್ಲಿ ಶ್ರೀರಾಮತೀರ್ಥ ಮಂದಿರದಲ್ಲಿ ಫೇ.26 ರಂದು 50 ನೇ ವರ್ಷದ ಸುವರ್ಣ ಮಹೋತ್ಸವದ ಅಂಗವಾಗಿ ಮಹಾಶಿವರಾತ್ರಿ ಮಹೋತ್ಸವ ಆಚರಿಸಲಾಗುವುದು ಎಂದು ಸಮಿತಿಯ ಅಧ್ಯಕ್ಷರು ಹಾಗೂ ನ್ಯಾಯವಾದಿ ಸುನಿಲ್ ಎಚ್.ಬುಧ್ವಾನಿ ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ದರ್ಶನ ಹಾಗೂ ಪ್ರಸಾದ ಸ್ವೀಕರಿಸಲು ಅಂದು ಶಿವ ಮೂರ್ತಿಗೆ ಬೆಳಿಗ್ಗೆ 4.ಕ್ಕೆ ರುದ್ರಾಭಿಷೇಕ, 5.30.ಕ್ಕೆ ಪೂಜೆ, ಆರತಿ ಮತ್ತು ಪ್ರಸಾದ, 10.ಕ್ಕೆ ಹೂವಿನ ಅಲಂಕಾರ, 11.ಕ್ಕೆ ಅನ್ನದಾಸೋಹ, ರಾತ್ರಿ 8.ಕ್ಕೆ ಮದ್ದು ಸುಡುವ ಕಾರ್ಯಕ್ರಮ, 10.ಕ್ಕೆ ಭಜನಾ ಕಾರ್ಯಕ್ರಮವನ್ನು ಹಮ್ಮಿಕೋಳ್ಳಲಾಗುದು ಈ ಕಾರ್ಯಕ್ರಮಕ್ಕೆ ಸಕಲ ಸದ್ಭಕ್ತರು ಹಾಗೂ ಸಾರ್ವಜನಿಕರು ಆಗಮಿಸಿ ಶಿವನ ಕೃಪೆಗೆ ಪಾತ್ರರಾಗಬೇಕೆಂದು ಸುನಿಲ್ ಎಚ್.ಬುಧ್ವಾನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೈ ಗಜಾನನ ಕ್ರೆಡಿಟ್ ಕೋ- ಆಪರೇಟಿವ್ ಶಾಖೆ ಉದ್ಘಾಟನೆ 23ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 20 : ಬಸವಕಲ್ಯಾಣ ನಗರದ ಬಸವೇಶ್ವರ ವೃತ್ತ ಸಮೀಪದ ಪಿ.ಕೆ.ಪಿ.ಎಸ್.ಕಾಂಪ್ಲೆಕ್ಸ್‌ನಲ್ಲಿ ಫೆ. 23 ರಂದು ಬೆಳಿಗ್ಗೆ 10.30ಕ್ಕೆ ಜೈ ಗಜಾನನ ಸೌಹಾರ್ದ ಕ್ರೆಡಿಟ್ ಕೋ-ಆಪರೇಟಿವ್ ನಿಯಮಿತದ ಶಾಖೆ ಉದ್ಘಾಟನಾ ಸಮಾರಂಭ ನಡೆಯಲಿದೆ.

ಬಸವಕಲ್ಯಾಣದ ಗವಿ ಮಠದ ಡಾ.ಅಭಿನವಘನಲಿಂಗ ರುದ್ರಮುನಿ ಶಿವಾಚಾರ್ಯರು ಉದ್ಘಾಟಿಸುವರು ಎಂದು



ಜೈ ಗಜಾನನ ಸೌಹಾರ್ದ ಕ್ರೆಡಿಟ್ ಕೋ-ಆಪರೇಟಿವ್ ನಿಯಮಿತದ ಸಂಸ್ಥಾಪಕ ಅಧ್ಯಕ್ಷ ವಿಜಯಕುಮಾರ ಸಿಂಧೆ ತಿಳಿಸಿದ್ದಾರೆ.

ಕೋ- ಆಪರೇಟಿವ್ ಅಧ್ಯಕ್ಷ ವಿಜಯಕುಮಾರ ಸಿಂಧೆ ಅಧ್ಯಕ್ಷತೆ ವಹಿಸುವರು. ಬೀದರನ ಸೌಹಾರ್ದ ಕ್ರೆಡಿಟ್ ಕೋ- ಆಪರೇಟಿವ್ ಅಸೋಸಿಯೇಷನ್ ನಿರ್ದೇಶಕ ಜಗನ್ನಾಥ ಕರಂಜೆ ಹಾಗೂ ಅಭಿವೃದ್ಧಿ ಅಧಿಕಾರಿ ವೀರಶೆಟ್ಟಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕ್ರೆಡಿಟ್ ಕೋ -ಆಪರೇಟಿವ್ ನಿಯಮಿತದ ಸಿಇಒ ಸಂಜೀವಕುಮಾರ ಕಣಕೇರಿ, ಪ್ರಧಾನ ವ್ಯವಸ್ಥಾಪಕ ವಿಜಯ ಬಿರಾದಾರ ಉಪಸ್ಥಿತರಿರುವರು ಎಂದು ಹೇಳಿದ್ದಾರೆ.

## ರನ್ನವೈಭವ : ವಿಶೇಷ ಬಸ್ ವ್ಯವಸ್ಥೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಫೆ. 20 : ಮುಧೋಳದಲ್ಲಿ ಫೆಬ್ರವರಿ 22 ರಿಂದ 24 ವರೆಗೆ ಜರುಗಲಿರುವ ರನ್ನವೈಭವ ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಣೆಗೆ ಮುಧೋಳ, ಜಮಖಂಡಿ, ಮಹಾಲಿಂಗಪೂರ, ಬಾಗಲಕೋಟೆ ಹಾಗೂ ಬೀಳಗಿ ಬಸ್ ನಿಲ್ದಾಣಗಳಿಂದ ಕವಿ ಚಕ್ರವರ್ತಿ ರನ್ನ ಕ್ರೀಡಾಂಗಣಕ್ಕೆ ತೆರಳಲು ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರು ಈ ವಿಶೇಷ ವಾಹನಗಳ ಸದುಪಯೋಗ ಪಡೆದುಕೊಳ್ಳುವಂತೆ ಬಾಗಲಕೋಟೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗವಿಕಲರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮನವಿ ಪತ್ರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ದಿನಾಂಕ 15 / 2 / 2025 ರಂದು ಜಿಲ್ಲಾ ಪಂಚಾಯತ್ ಅಲ್ಲಿ ನೆಡಿದಿರುವ ಪ್ರಗತಿ ಪರಿಶೀಲನಾ ಸಭೆಗೆ ಅಂಗವಿಕಲರ ಆಯುಕ್ತರಾದ ಶ್ರೀ ದಾಸ್ ಸೂರ್ಯವಂಶಿರವರು ಆಗಮಿಸಿದ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ RPD TASKFORCE ಒಕ್ಕೂಟ ಯಾದಗಿರಿ, ಇವರ ವತಿಯಿಂದ ಅಂಗವಿಕಲರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷರಾದ ನಾಗಮ್ಮ, ಜಿಲ್ಲಾಧ್ಯಕ್ಷೆ ಉಮಾ ನಾಯಕ್, ಉಪಾಧ್ಯಕ್ಷರಾದ ರಮೇಶ್ ನಾಯಕ್, ಹಾಗೂ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

ಬಳ್ಳಾರಿಯಲ್ಲಿ ಸಂಭ್ರಮದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ

# ಇತಿಹಾಸದಲ್ಲಿ ಛತ್ರಪತಿ ಶಿವಾಜಿಯ ಆಡಳಿತ ಅಚ್ಚಳಿಯಾಗಿ ಉಳಿದಿದೆ: ಮೇಯರ್ ಮುಲ್ಲಂಗಿ ನಂದೀಶ್




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.20–ಛತ್ರಪತಿ ಶಿವಾಜಿ ಮಹಾರಾಜರು ಸ್ವರಾಜ್ಯ ಮೌಲ್ಯ ಮತ್ತು ಮರಾಠ ಪರಂಪರೆಯನ್ನು ತಮ್ಮ ಆಡಳಿತ ಕೌಶಲ್ಯದಿಂದ ಇತಿಹಾಸದಲ್ಲಿ ಅಚ್ಚಳಿಯಾಗಿ ಉಳಿಯುವಂತೆ ಮಾಡಿದವರು ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಬುಧವಾರ ಏರ್ಪಡಿಸಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿವಾಜಿ ಮಹಾರಾಜರು ತನ್ನ ಮರಾಠ ಸೈನ್ಯದ ಮೂಲಕ ಗೆರಿಲ್ಲಾ ಹೋರಾಟದ ತಂತ್ರಗಳನ್ನು ಪರಿಚಯಿಸಿದ ಮೊದಲ ವ್ಯಕ್ತಿ. ಮೊಘಲರ ವಿರುದ್ಧ ಹಲವಾರು ಯುದ್ಧಗಳನ್ನು ಗೆದ್ದ ಅವರ ಶೌರ್ಯ ಮತ್ತು ತಂತ್ರಗಳಿಗೆ ಹೆಸರುವಾಸಿಯಾಗಿದ್ದರು ಎಂದು ತಿಳಿಸಿದರು.

ಕರ್ನಾಟಕ ಮರಾಠ ಛತ್ರಪತಿ ಶಿವಾಜಿ ಮಹಾರಾಜ್ ಸೇನೆಯ ಯುವ ರಾಜ್ಯಾಧ್ಯಕ್ಷ ವಿನೋದ್ ಎಂ.ಚವ್ಹಾಣ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರ ಬಾಲ್ಯ, ಶೌರ್ಯ, ಕ್ಷಾತ್ರತೇಜಸ್ಸು, ಸ್ವಾಭಿಮಾನ, ಸ್ವರಾಜ್ಯದ ಪರಿಕಲ್ಪನೆ, ರಾಷ್ಟ್ರಾಭಿಮಾನ ಆದರ್ಶಗಳನ್ನು ಮೈಗೂಡಿಸಿಕೊಳ್ಳುವಂತೆ ನೆರದಿದ್ದ ಸಮಾಜದ ಯುವಕರಿಗೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಮಹಾರಾಜರ ಆಡಳಿತ, ನಾಯಕತ್ವ ಮತ್ತು ಮರಾಠ ಯೋಧರ ತ್ಯಾಗ ಬಲಿದಾನ ಹೀಗೆ ಮಹಾರಾಜರ ವೀರ ಸಾಹಸಗಾಥೆಯನ್ನು ತೆರೆದಿಟ್ಟರು.

ಕಾರ್ಯಕ್ರಮದಲ್ಲಿ ಮಾಜಿ ಯೋಧರಿಗೆ ಗೌರವ ಸನ್ಮಾನ ಮಾಡಲಾಯಿತು. ಇತ್ತೀಚಿಗೆ ಮೈಸೂರು ವಿವಿ ಯಿಂದ 16 ಚಿನ್ನದ ಪದಕ ಪಡೆದ ಪೂಜಾ ನಲವಡೆ ಅವರಿಗೆ ಗೌರವ ಪುರಸ್ಕಾರ ನೀಡಿ ಅಭಿನಂದಿಸಲಾಯಿತು.

ಮರಾಠ ಸ್ಪೋರ್ಟ್ಸ್ ಕ್ಲಬ್ ಬಳ್ಳಾರಿ ಆಯೋಜಿಸಿದ್ದ ಛತ್ರಪತಿ ಶಿವಾಜಿ ಮಹಾರಾಜ್ ಕಪ್ –2025 ರ ವಿನ್ನರ್ಸ್ ಮರಾಠಾ ಯೋಧಸ್ ಫಿಖ ಬಳ್ಳಾರಿ ತಂಡಕ್ಕೆ ಪ್ರಶಸ್ತಿ ವಿತರಿಸಲಾಯಿತು. ರನ್ನರ್ಸ್ ಆದ ಶಿವನೇರಿ ಫಿಖ ತಂಡಕ್ಕೂ ಬಹುಮಾನ ವಿತರಿಸಲಾಯಿತು.

*ಅದ್ದೂರಿ ಮೆರವಣಿಗೆ:*

ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಅಂಗವಾಗಿ ನಗರದಲ್ಲಿ ಅದ್ದೂರಿಯಾಗಿ ಮೆರವಣಿಗೆ ನಡೆಯಿತು. ಅಂದು ಬೆಳಿಗ್ಗೆ ನಗರದ ಶ್ರೀ ಪಾಂಡುರಂಗಸ್ವಾಮಿ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು.

ಸಂಜೆ 4 ಗಂಟೆಗೆ ಭವ್ಯ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಕಲಾತಂಡಗಳ ಝೇಂಕಾರದೊಂದಿಗೆ ಅದ್ದೂ–ರಿಯಾಗಿ ನಡೆಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ, ಹಿಂದೂ ಧಾರ್ಮಿಕ ಧತ್ತಿ ಇಲಾಖೆಯ ಅಧಿಕಾರಿ ಪ್ರಕಾಶ್ ರಾವ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಶಿವಾಜಿರಾವ್.ಎಂ ಸೇರಿದಂತೆ ಮರಾಠ ಸಮಾಜದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

# ಸರ್ಕಾರಿ ನೌಕರಿ ಕೊಡಿಸುವುದಾಗಿ ಹೇಳಿ 6 ಲಕ್ಷ ರೂ.ವಂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.20–ಸರ್ಕಾರಿ ನೌಕರಿ ಕೊಡಿಸುವುದಾಗಿ ಹೇಳಿ 6 ಲಕ್ಷ ರೂಪಾಯಿ ಪಡೆದು ವ್ಯಕ್ತಿಯೊಬ್ಬರಿಗೆ ವಂಚನೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ. ಆಳಂದ ತಾಲ್ಲೂಕಿನ ಇಕ್ಕಳಗಿ ಗ್ರಾಮದ ಅಶೋಕ ಹಣಮಂತರಾವ ಪಾಟೀಲ (40) ಎಂಬುವವರೆ ವಂಚನೆಗೆ ಒಳಗಾಗಿದ್ದು, ಈ ಸಂಬಂಧ ಅವರು ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.ಅಶೋಕ ಪಾಟೀಲ ಅವರು 2005 ರಿಂದ 2019 ರವರೆಗೆ ಪೆಟ್ರೋಲ್ ಪಂಪ್ ಒಂದರಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಪರಿಚಯವಾದ ಸಿಕಂದರ ಬಾಸಗಿ ಎಂಬಾತ ನೀರಾವರಿ ಇಲಾಖೆಯಲ್ಲಿ ಡಿ ಗ್ರೂಪ್ ನೌಕರಿ ಕೊಡಿಸುವುದಾಗಿ ಹೇಳಿ 6 ಲಕ್ಷ ರೂಪಾಯಿ ಪಡೆದು ಇಲ್ಲಿಯವರೆಗೆ ಕೆಲಸವು ಕೊಡಿಸದೆ, ಹಣವು ಮರಳಿ ಕೊಡದೆ ಮೋಸ ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಸಿದ್ದಾರೆ. ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,ತನಿಖೆ ನಡೆದಿದೆ.

# ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ತಲುಪುತ್ತಿಲ್ಲ, ನೆಟ್ಟಗೆ ಆಡಳಿತ ಮಾಡಿ–ಇಲ್ಲವೇ ರಾಜೀನಾಮೆ ಕೊಡಿ: ಶೋಭಾ ಕರಂದ್ಲಾಜೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ/ಬೆಂಗಳೂರು: ಗ್ಯಾರಂಟಿ ಯೋಜನೆಗಳ ಭರವಸೆ ನೀಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಈಗ ಯೋಜನೆಗಳನ್ನು ನಿಲ್ಲಿಸಿ ರಾಜ್ಯದ ಜನತೆಗೆ ಮೋಸ ಮಾಡುತ್ತಿದೆ. ರಾಜ್ಯದಲ್ಲಿ ಒಂದೇ ಒಂದು ಅಭಿವೃದ್ಧಿ ಕೆಲಸವಾಗುತ್ತಿಲ್ಲ. ಕೇಂದ್ರದತ್ತ ಬೊಟ್ಟು ಮಾಡುವುದನ್ನು ಬಿಟ್ಟು, ನೆಟ್ಟಗೆ ಆಡಳಿತ ಮಾಡಿ ಇಲ್ಲವೇ ರಾಜೀನಾಮೆ ಕೊಡಿ ಎಂದು ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರ ಬುಧವಾರ ವಾಗ್ದಾಳಿ ನಡೆಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರತಿನಿತ್ಯ ಒಂದಲ್ಲ ಒಂದು ವಸ್ತುಗಳ ಬೆಲೆ ಏರಿಕೆಯಾಗುತ್ತಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಿರುವುದೇ ಗ್ಯಾರಂಟಿಗಳಿಂದ, ಆದರೆ, ಗ್ಯಾರಂಟಿಗಳು ಜನರಿಗೆ ತಲುಪುತ್ತಿಲ್ಲ. ಗೃಹಲಕ್ಷ್ಮಿ ಯೋಜನೆ ಮಹಿಳೆಯರಿಗೆ ತಲುಪುತ್ತಿಲ್ಲ, ಬಸ್ ಫ್ರೀ ಎಂದು ಹೇಳಿದ್ದರು. ಆದರೆ, ಬಸ್ ನಿಲ್ಲಿಸಿದ್ರು ಗೃಹಲಕ್ಷ್ಮೀ ಯೋಜನೆಯ 2 ಸಾವಿರ ಹಣ ತಲುಪುತ್ತಿಲ್ಲ. ಸಿದ್ದರಾಮಯ್ಯ ಯೋಜನೆಗಳು ನಿಂತಿದೆಯಾ ಎಂದು ಕೇಳಿದ್ದಾರೆ. ಹಣಕಾಸು ಇಲಾಖೆ ಇಟ್ಟುಕೊಂಡು ಸಿದ್ದರಾಮಯ್ಯ ಅವರಿಗೆ ಗೊತ್ತಿಲ್ಲ ಕರ್ನಾಟಕದಲ್ಲಿ ಪ್ರತಿನಿತ್ಯ ಒಂದಲ್ಲ ಒಂದರ ದರ ಏರಿಕೆಯಾಗುತ್ತಿದೆ ಎಂದು ಕಿಡಿಕಾರಿದರು.

10 ಕೆಜಿ ಕೊಡುತ್ತೀವೆ ಎಂದಿದ್ದರು. ಈಗ ಅಕ್ಕಿ ಕೊಡುತ್ತಿಲ್ಲ. ಕೇಂದ್ರ ಸರ್ಕಾರ ಅಕ್ಕಿ ಕೊಡಲು ರೆಡಿ ಇದ್ದರೂ ರಾಜ್ಯ ತೆಗೆದುಕೊಳ್ಳುತ್ತಿಲ್ಲ. ಹೊಸ 9 ವಿವಿ ಬಂದ್ ಮಾಡಿದ್ದಾರೆ. ಹಳೆಯ ವಿವಿಗಳಿಗೆ ಹಣವನ್ನೇ ಕೊಡ್ತಿಲ್ಲ. ಹಾಗಾದರೆ ಹೊಸ ವಿವಿಯಿಂದ ಸರ್ಟಿಫಿಕೇಟ್ ಪಡೆದವರ ಕಥೆ ಏನು..? ಇದಕ್ಕೆ ಯಾವುದೇ ಸ್ಪಷ್ಟತೆಯನ್ನು ಸರ್ಕಾರ ಕೊಟ್ಟಿಲ್ಲ. ಕಂದಾಯ ಇಲಾಖೆಯಲ್ಲಿ ಸಿಬ್ಬಂದಿಗೆ ಸಂಬಳ ಕೊಟ್ಟಿಲ್ಲ. ಈ ನಡುವೆ ಕಾಂಗ್ರೆಸ್ ಸರ್ಕಾರದಲ್ಲಿ ಹೊಸ ಟ್ಯಾಕ್ಸ್ ವ್ಯವಸ್ಥೆ ಜಾರಿಯಾಗಿದೆ. ಬೆಂಗಳೂರಿನಲ್ಲಿ ಬಿಲ್ಡಿಂಗ್ ಕಟ್ಟಬೇಕೆಂದರೆ ಅಡಿಗೆ 100 ರೂ. ಕೊಡಬೇಕಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸರಿಯಿಲ್ಲ. ದನದ ಕೆಚ್ಚಲು ಕೊಯ್ದವರನ್ನು ಮಾನಸಿಕ ಅಸ್ವಸ್ಥ ಎನ್ನುತ್ತಾರೆ. ಪೊಲೀಸ್ ಠಾಣೆಗೆ ದಾಳಿ ಮಾಡಲಾಗಿದೆ, ಆಸ್ಪತ್ರೆಯಲ್ಲಿ ಬಾಣಂತಿಯ ಸಾವಾಗುತ್ತಿದೆ, ಎಲ್ಲವನ್ನ ಕೇಂದ್ರ ಸರ್ಕಾರ ಮಾಡೋದಾದ್ರೆ ಸಿದ್ದರಾಮಯ್ಯನವರೇ ನೀವು ಏಕೆ ಅಧಿಕಾರ ನಡೆಸುತ್ತೀರಿ ಎಂದು ಪ್ರಶ್ನಿಸಿದರು.

ಮೆಟ್ರೋ ದರ ಏರಿಕೆ ಕುರಿತು ಮಾತನಾಡಿ, ಮೆಟ್ರೋ ಟಿಕೆಟ್ ದರ ಏರಿಕೆ ಬಗ್ಗೆ ಸಿದ್ದರಾಮಯ್ಯ ಸುಳ್ಳು ಹೇಳಿದ್ದಾರೆ. ಕರ್ನಾಟಕ ಸರ್ಕಾರದ ಶಿಫಾರಸ್ಸಿನ ಮೇರೆಗೆ ಮೆಟ್ರೋ ಟಿಕೆಟ್ ದರ ಹೆಚ್ಚಳ ಮಾಡಲಾಗಿದೆ. ಮೆಟ್ರೋ ಅಧಿಕಾರಿಗಳು ಟಿಕೆಟ್ ದರ ಹೆಚ್ಚಳಕ್ಕೆ ಪತ್ರ ಬರೆದಿದ್ದರು. ನಿಮ್ಮ ಒತ್ತಡಕ್ಕೆ ಒಳಗಾಗಿ ಕೇಂದ್ರ ಅನುಮತಿ ಕೊಟ್ಟಿದೆ ಎಂದು ಎಂದರು.

ಜಾತಿ ಜನಗಣತಿ ವಿಚಾರವಾಗಿ ಮಾತನಾಡಿ, ಸಿದ್ದರಾಮಯ್ಯ ಒಡೆದು ಆಳುವ ನೀತಿ ಮಾಡುತ್ತಿದ್ದಾರೆ. ಲಿಂಗಾಯತ, ಒಕ್ಕಲಿಗ, ಬ್ರಾಹ್ಮಣರ ಉಪಜಾತಿಗಳನ್ನು ಒಡೆಯುವ ಪ್ರಯತ್ನ ಮಾಡುತ್ತಿದ್ದಾರೆ. ಮೇಜರ್ ಜಾತಿ ಒಡೆಯಬೇಕು ಎಂದು ಮಾಡುತ್ತಿದ್ದಾರೆ. ಬ್ರಿಟಿಷರ ಮೆಂಟಾಲಿಟಿ ಸಿದ್ದರಾಮಯ್ಯನವರದ್ದು ಎಂದು ಲೇವಡಿ ಮಾಡಿದ್ದಾರೆ.

# ಪರಮಹಂಸರಿಗೆ ಮೋದಿ ಗೌರವ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಫೆ.18– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮಂಗಳವಾರ ರಾಮಕೃಷ್ಣ ಪರಮಹಂಸರ ಜಯಂತಿಯಂದು ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ರಾಮಕೃಷ್ಣ ಪರಮಹಂಸರ ಆಧ್ಯಾತ್ಮಿಕ ಚಿಂತನೆಗಳು ಸ್ವಾಮಿ ವಿವೇಕಾನಂದರಂತಹ ಮಹಾನ್ ವ್ಯಕ್ತಿಗಳಿಗೆ ಸ್ಫೂರ್ತಿ ನೀಡಿದ್ದು ಮಾತ್ರವಲ್ಲದೆ, ಇಡೀ ರಾಷ್ಟ್ರದ ಮೇಲೆ ಆಳವಾದ ಪ್ರಭಾವ ಬೀರಿವೆ ಎಂದು ಅವರು ಹೇಳಿದ್ದಾರೆ. ಅವರು ಸಾಮರಸ್ಯ ಮತ್ತು ಸಹೋದರತ್ವದ ಮನೋಭಾವದ ಸಾಕಾರವಾಗಿದ್ದರು. ಅವರು ನ್ಯಾಯಯುತ ಮತ್ತು ವಿಭಜನೆಗಳನ್ನು ಮೀರಿದ ಸಮಾಜದ ಕನಸು ಕಂಡಿ–ದ್ದರು ಎಂದಿದ್ದಾರೆ.

ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಭಾವನಾತ್ಮಕ ಸಂದೇಶವನ್ನು ನೀಡಿದ ಪ್ರಧಾನಿ ಮೋದಿ, ಎಲ್ಲಾ ದೇಶವಾಸಿಗಳ ಪರವಾಗಿ, ರಾಮಕೃಷ್ಣ ಪರಮಹಂಸ ಜಿ ಅವರ ಜನ್ಮ ವಾರ್ಷಿಕೋತ್ಸವದಂದು ನಾನು ಅವರಿಗೆ ನಮಸ್ಕರಿಸುತ್ತೇನೆ ಎಂದು ಹೇಳಿದ್ದಾರೆ.ಪ್ರಧಾನಮಂತ್ರಿಯವರು ತಮ್ಮ ವಿಡಿಯೋ ಸಂದೇಶದಲ್ಲಿ ರಾಮಕೃಷ್ಣ ಪರಮಹಂಸರ ಆಳವಾದ ಆಧ್ಯಾತ್ಮಿಕ ಚಿಂತನೆಗಳನ್ನು ಎತ್ತಿ ಹೇಳಿದ್ದಾರೆ ರಾಮಕೃಷ್ಣ ಪರಮಹಂಸರು ಮಾ ಕಾಳಿಯ ದಿವ್ಯ ಸಾನಿಧ್ಯಕ್ಕೆ ಸಾಕ್ಷಿಯಾಗಿದ್ದಾರೆ ಮತ್ತು ಅವರು ತಮ್ಮ ಇಡೀ ಜೀವನವನ್ನು ಮಾ ಕಾಳಿಯ ಪಾದಗಳಿಗೆ ಅರ್ಪಿಸಿದ್ದಾರೆ ಎಂದು ಅವರು ಹೇಳಿದ್ದಾರೆ.ಇಡೀ ಜಗತ್ತು ಕಾಳಿಯ ಪ್ರಭಾವದಿಂದ ತುಂಬಿದೆ ಮತ್ತು ಈ ಪ್ರಜ್ಞೆಯು ಬಂಗಾಳದ ಕಾಳಿ ಪೂಜೆಯಲ್ಲಿ ಪ್ರತಿಫಲಿಸುತ್ತದೆ ಎಂದಿದ್ದಾರೆ.

# ಛತ್ರಪತಿ ಶಿವಾಜಿ ಮಹಾರಾಜರ ಧೈರ್ಯ, ಸಾಹಸ ಸರ್ವರಿಗೂ ಆದರ್ಶ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಫೆ.20:ಹಿಂದು ಸಮಾಜ ಮತ್ತು ಧರ್ಮ ರಕ್ಷಣೆಗೆ ಛತ್ರಪತಿ ಶಿವಾಜಿ ಮಹಾರಾಜರು ಮಾಡಿದ ಹೋರಾಟ ಪ್ರತಿಯೊಬ್ಬ ಭಾರತೀಯನಿಗೂ ಮಾದರಿ. ಶಿವಾಜಿ ಹೆಸರೇ ಯುಕರಿಗೆ ಆದರ್ಶವಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಹೇಳಿದರು.

ಪಟ್ಟಣದ ಬೀದರ ಮಾರ್ಗದಲ್ಲಿರುವ ಶಿವಾಜಿ ವೃತ್ತದಲ್ಲಿ ಛತ್ರಪತಿ ಶಿವಾಜಿ ಯುವಸೇನೆಯಿಂದ ಆಯೋಜಿಸಿದ 395ನೇ ಜನ್ಮೋತ್ಸವ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು. ಛತ್ರಪತಿ ಶಿವಾಜಿ ಮಹಾರಾಜರು ಬಹುಜನ ಸಮಾಜದ ನಾಯಕರಾಗಿದ್ದರು. ಪ್ರಥಮವಾಗಿ ನೌಕಾಪಡೆ ಸ್ಥಾಪಿಸಿದ ಕೀರ್ತಿ ಅವರೀಗೆ ಸಲ್ಲುತ್ತದೆ. ಮಕ್ಕಳಿಗೆ ಜನ್ಮ ಕೊಟ್ಟು ಶಾಲೆಗೆ ಕಳುಹಿಸಿದೇ ದೊಡ್ಡ ಸಾಧನೆಯಲ್ಲ. ಅವರಿಗೆ ಸಂಸ್ಕಾರ ಕಲಿಸುವುದು ಶಿಕ್ಷಕರ ಜೊತೆಗೆ ಪಾಲಕರ ಹೊಣೆಯು ಇದೆ. ಶಿವಾಜಿ ಮಹಾರಾಜರ ತಾಯಿ ಜೀಜಾಬಾಯಿ ಹೇಳಿಕೊಟ್ಟ ಧರ್ಮ ಮಾರ್ಗಗಳು ಅವರನ್ನು ಸಂಸ್ಕಾರವಂತರನ್ನಾಗಿ ಮಾಡಿದವು, ಹೀಗಾಗಿ ಸ್ವರಾಜ್ಯ ಕಟ್ಟಲು ಸಾಧ್ಯವಾಯಿತು . ಆ ನಿಟ್ಟಿನಲ್ಲಿ ಸಮಾಜದ ಪ್ರತಿಯೊಬ್ಬರೂ ಜೀಜಾಬಾಯಿಯಂತೆ ಆಗಬೇಕು ಎಂದು ಸಲಹೆ ನಿಡಿದರು.

ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಪದ್ಮಾಕರ ಪಾಟೀಲ್ ಮಾತನಾಡಿ. ಹಿಂದವೀ ಸ್ವರಾಜ್ಯಕ್ಕಾಗಿ ಸರ್ವಸ್ವವನ್ನೂ ಅರ್ಪಿಸಿದ ಹಿಂದೂ ಹೃದಯ ಸಾಮ್ರಾಟ್ ಛತ್ರಪತಿ ಶಿವಾಜಿ ಮಹಾರಾಜ್ ಯಾವತ್ತೂ ಮುಸ್ಲಿಂಮರನ್ನು ವಿರೋಧಿಸಿದವರಲ್ಲ. ಆದರೆ ಕೆಲವರು ಶಿವಾಜಿ ಮಹಾರಾಜರು ಮುಸ್ಲಿಂ ವಿರೋಧಿಯಾಗಿದ್ದರು ಎಂದು ತಪ್ಪಾಗಿ ಬಿಂಬಿಸುತ್ತಿದ್ದಾರೆ. ಅವರು ಎಂದು ಮಾಹಿತಿ ನೀಡಿದರು.

ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಉದ್ಯಮಿ ಸಂತೋಷ ಪಾಟೀಲ್, ಪುರಸಭೆ ಅಧ್ಯಕ್ಷರು ಪಾರ್ವತಿಬಾಯಿ ಶೇರಿಕಾರ, ಉಪಾಧ್ಯಕ್ಷ ಮುಖರಂಜಾ, ತಹಸೀಲ್ದಾರ ಅಂಜುಮ್ ತಬಸುಮ್, ರಾಜಕೀಯ ಮುಖಂಡ ಬಸವರಾಜ ಆರ್ಯ, ರವಿಕುಮಾರ ಘವಾಳಕರ, ದೇವಾನಂದ ಘವಾಳಕರ, ಜ್ಞಾನೇಶ್ವರ ಬೋಸ್ಲೆ, ರಂಜೀತ ಮಾನಕರೆ, ಸಿದ್ಧಾರ್ಥ ಪರಂಜಪೆ, ಕುನಾಲ ಘವಾಳಕರ, ರೋಹನ, ಸೋಹನ, ಆಕಾಶ ಉಬಾಳೆ, ರಮೇಶ ಕ್ಷೀರಸಾಗರ, ಜ್ಞಾನದೇವ ಧುಮಾಳೆ, ಅವಿನಾಶ ಧುಮಾಳೆ, ಪ್ರಾಚಾರ್ಯ ಮೀನಾಕ್ಷಿ ಜಾಧವ, ಜಗದೇಶ ಧುಮಾಳೆ, ವಸಂತ ಜಾಧವ, ಆನಂದಿ, ವಿಜಯಲಕ್ಷ್ಮಿ ಮೀನಾಕ್ಷಿ, ಪ್ರಿಯಾಂಕಾ, ಮಧು, ರೇಣುಕಾ, ಸುಧಾರಣೆ, ಜಯಶ್ರೀ, ಸುನೀತಾ, ಜ್ಯೋತಿ, ಕಲ್ಪನಾ, ಮನಿಷ್ಯಾ ಸೇರಿದಂತೆ ಅನೇಕರಿದ್ದರು.

# ಅನುದಾನದಲ್ಲಿ ಕೊರತೆಯಾದರೆ ಅಧಿಕಾರಿಗಳೇ ಹೊಣೆ: ಸಚಿವ ಚಲುವರಾಯಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಮೈಸೂರು: ಬಜೆಟ್‌ನಲ್ಲಿ ಹಂಚಿಕೆಯಾದ ಅನುದಾನವನ್ನು ಅಧಿಕಾರಿಗಳು ಬಳಸಿಕೊಳ್ಳಬೇಕು. ಅನುದಾನಗಳಲ್ಲಿ ಕೊರತೆಯಾದರೆ ಸಂಬಂಧಪಟ್ಟ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆಂದು ಸಚಿವ ಚಲುವರಾಯಸ್ವಾಮಿಯವರು ಮಂಗಳವಾರ ಎಚ್ಚರಿಸಿದರು.

ಮಂಗಳವಾರ ಇಲ್ಲಿ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರಿ ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸುವ ಮೂಲಕ ಮತ್ತು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಗುರಿಯನ್ನು ಸಾಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನೀರಾವರಿ ಯೋಜನೆಗೆ 50 ಕೋಟಿ ರೂ. ಹಂಚಿಕೆ ಮಾಡುವ ಪ್ರಸ್ತಾವನೆಯನ್ನು ಸರ್ಕಾರ ಸಿದ್ಧಪಡಿಸುತ್ತಿದೆ. ಕೆರೆಗಳ ಹೂಳು ತೆಗೆಯುವಿಕೆಯನ್ನು ವೈಜ್ಞಾನಿಕವಾಗಿ ಮಾಡಬೇಕು, ರೈತರು ಅಥವಾ ಇತರ–ರಿಂದ ವಿರೋಧ ವ್ಯಕ್ತವಾದರೆ ಪೊಲೀಸ್ ಭದ್ರತೆಯನ್ನು ತೆಗೆದುಕೊಳ್ಳಬೇಕು ಎಂದು ಹೇಳಿದರು. ಏತನ್ಮಧ್ಯೆ, ಕುಡಿಯುವ ನೀರಿನ ಅಗತ್ಯಗಳನ್ನು ಪೂರೈಸಲು ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮತ್ತು ಪ್ರತಿ ಮನೆಗೆ ಪೈಪ್ ಮೂಲಕ ನೀರು ಪೂರೈಸಲು ಜಲ ಜೀವನ್ ಮಿಷನ್ ಅಡಿಯಲ್ಲಿ ಬೋರ್‌ವೆಲ್‌ಗಳ ಸಂಪರ್ಕವನ್ನು ಪೂರ್ಣಗೊಳಿಸುವಂತೆಯೂ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಹಿಂದಿನ ವರ್ಷಗಳಲ್ಲಿ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಿದವರ ಬಾಕಿ ಬಿಲ್‌ಗಳನ್ನು ಸ್ಥಳಕ್ಕೆ ಭೇಟಿ ನೀಡಿ ಪಾವತಿಸುವಂತೆ ಸಹಾಯಕ ಆಯುಕ್ತರು, ತಹಶೀಲ್ದಾರ್‌ಗಳು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಭೂಸಮೀಕ್ಷೆಯನ್ನು ಪಾರದರ್ಶಕವಾಗಿ ನಡೆಸಬೇಕು ಮತ್ತು ದೂರುಗಳ ಆಧಾರದ ಮೇಲೆ ಸ್ಥಳ ಪರಿಶೀಲನೆ ನಡೆಸಬೇಕು. ಯಾವುದೇ ಕುಟುಂಬಕ್ಕೆ ಸಾಮಾಜಿಕ ವಲಯದ ಕಾರ್ಯಕ್ರಮಗಳ ಅಡಿಯಲ್ಲಿ ಯಾವುದೇ ಪ್ರಯೋಜನಗಳನ್ನು ನಿಲ್ಲಿಸಬಾರದು ಎಂದು ಎಂದು ಸೂಚನೆ ನೀಡಿದರು.

ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಗ್ರಾಮ ಪಂಚಾಯತ್ ಸಭೆಗಳಲ್ಲಿ ಸಾವಯವ ಕೃಷಿಯನ್ನು ಅಳವಡಿಸಿಕೊಳ್ಳುವುದು, ಕೀಟನಾಶಕಗಳನ್ನು ಬಳಸುವುದು ಮತ್ತು ಮಣ್ಣಿನ ಗುಣಮಟ್ಟವನ್ನು ಕಾಪಾಡಿಕೊಳ್ಳಲು ವಿವೇಚನಾಯುಕ್ತ ಪ್ರಮಾಣದ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು. ನೀರಾವರಿ ಇಲಾಖೆಯು ಕೆಆರ್‌ಎಸ್ ಜಲಾಶಯದಿಂದ ಆನ್–ಆಫ್ ವ್ಯವಸ್ಥೆಯಲ್ಲಿ ನೀರು ನೀಡಲು ನಿರ್ಧರಿಸಿರುವುದರಿಂದ ರಬಿ ಬೆಳೆಗಳಿಗೆ ಬಿತ್ತನೆ ಮಾಡುವ ರೈತರಿಗೆ ಬೀಜಗಳು ಮತ್ತು ರಸಗೊಬ್ಬರಗಳನ್ನು ಒದಗಿಸಬೇಕೆಂದು ಹೇಳಿದರು.

ಬಳಿಕ ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ ಅಪಘಾತಗಳನ್ನು ತಡೆಗಟ್ಟಲು ಮತ್ತು ಪ್ರಯಾಣಿಕರ ಸಮಸ್ಯೆಗಳನ್ನು ಪರಿಹರಿಸುವ ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಅಧಿಕಾರಿಗಳಿಗೆ ಸಚಿವರು ಇದೇ ವೇಳೆ ನಿರ್ದೇಶನ ನೀಡಿದರು.

# ರಸ್ತೆ ಅಪಘಾತ:ವಕೀಲನ ಸಾವು




ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಫೆ.20:ಟ್ರಕ್ ಹಾಗೂ ಬೈಕ್ ನಡುವೆ ಡಿಕ್ಕಿ ಸಂಭವಿಸಿ ವಕೀಲನೋರ್ವ ಸಾವನ್ನಪ್ಪಿದ ದುರ್ಘಟನೆ ವಿಜಯಪುರ ನಗರ ಹೊರ ವಲಯದ ಟೋಲ್ ನಾಕಾ ಬಳಿ ನಡೆದಿದೆ.

ಯಲ್ಲಪ್ಪ ಬಳಗಾನೂರ ಸಾವನ್ನಪ್ಪಿದ ದುರ್ದೈವಿ.

ವಿಜಯಪುರ ಜಿಲ್ಲಾ ನ್ಯಾಯಾಲಯದಲ್ಲಿ ನ್ಯಾಯವಾದಿಯಾಗಿದ್ದರು. ಮೃತ ವಕೀಲ ಇಲ್ಲಿಗೆ ಸಮೀಪದ ಮಹಲ್ ಐನಾಪುರ ಗ್ರಾಮದವರು.

ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮೈಕ್ರೋ ಫೈನಾನ್ಸ್ ಸಂಸ್ಥೆಗಳು ತಮ್ಮ ನಿಯಮ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಬೇಕು – ಜಿಲ್ಲಾಧಿಕಾರಿ ನಲಿನ್ ಅತುಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕೊಪ್ಪಳ ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ತಮಗೆ ಇರುವ ನಿಯಮಗಳ ಕಾನೂನು ವ್ಯಾಪಿಯಲ್ಲಿ ಕಾರ್ಯನಿರ್ವಹಿಸಬೇಕು. ಅದನ್ನು ಬಿಟ್ಟು ಜನರಿಗೆ ಕಿರುಕುಳ ನೀಡುವ ಯಾವುದೇ ಪ್ರಕರಣಗಳು ಕಂಡು ಬಂದರೆ ಅಂಥಹ ಫೈನಾನ್ಸ್ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕಾಗುತ್ತದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಬುಧವಾರ ಜಿಲ್ಲಾಡಳಿತಭವನದ ಆಡಿಟೋ–ರಿಯಂ ಹಾಲನಲ್ಲಿ ಜಿಲ್ಲೆಯ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜನರಿಗೆ ಸಾಲ ನೀಡುವಾಗ ತಮ್ಮ ಕಂಡೀಷನಗಳ ಕುರಿತು ಸ್ಪಷ್ಟವಾಗಿ ಅವರಿಗೆ ಅರ್ಥವಾಗುವ ರೀತಿಯಲ್ಲಿ ತಿಳಿಸಬೇಕು ಮತ್ತು ಅವರ ಸಾಮರ್ಥ್ಯಕ್ಕೆ ತಕ್ಕಂತೆ ಸಾಲ ನೀಡಬೇಕು. ಅದನ್ನು ಬಿಟ್ಟು ಅವರಿಗೆ ಸರಿಯಾಗಿ ಮಾಹಿತಿ ನೀಡದೆ ಸಾಲ ನೀಡುವದರ ಜೊತೆಗೆ ಅವರಿಗೆ ಕಿರುಕೂಳ ನೀಡಿದರೆ ಇದು ಕಾನೂನಿನ ಉಲ್ಲಂಘನೆಯಾಗುತ್ತದೆ. ತಾವು ಸಾಲ ಕೊಟ್ಟಾಗ, ಜನರಿಂದ ಕಾನೂನು ರೀತಿಯಲ್ಲಿ ಅವರಿಂದ ಹಣವನ್ನು ಮರಳಿ ಪಡೆಯಬೇಕೆಂದು ಹೇಳಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕೂಳ ಪ್ರಕರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶವನ್ನು ರಾಜ್ಯ ಸರ್ಕಾರ ದಿನಾಂಕ 12–02–2025 ರಂದು ಜಾರಿಗೆ ತಂದಿದೆ. ಇದರ ಹೊರತಾಗಿ ಈಗಾಗಲೇ ಫೈನಾನ್ಸ್ ಸಂಸ್ಥೆಗಳ ಕುರಿತು ಆರ್.ಬಿ.ಐ ಸ್ಪಷ್ಟವಾದ ಗೈಡಲೈನ್ಸ್ ಇದೆ ಆದರೆ ಅದನ್ನು ತಾವು ಯಾರು ಸರಿಯಾಗಿ ಪಾಲನೆ ಮಾಡುತ್ತಿಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ದುಬಾರಿ ಬಡ್ಡಿದರಗಳ ಅನುಚಿತ ತೊಂದರೆಗಳಿಂದ ಮತ್ತು ಬಲವಂತದ ವಸೂಲಾತಿ ವಿಧಾನಗಳಿಂದ ಆರ್ಥಿಕವಾಗಿ ದುರ್ಬಲ ಗುಂಪುಗಳು ಮತ್ತು ವ್ಯಕ್ತಿಗಳು, ವಿಶೇಷವಾಗಿ ರೈತರು, ಮಹಿಳೆಯರು ಮತ್ತು ಮಹಿಳಾ ಸ್ವಸಹಾಯ ಗುಂಪುಗಳನ್ನು ರಕ್ಷಿಸಲು ಮತ್ತು ಮುಕ್ತಗೊಳಿಸಲು ಹಾಗೂ ಅದಕ್ಕೆ ಸಂಬಂಧಪಟ್ಟ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗೆ ಸಂಬಂಧಿಸಿದ ಅಧ್ಯಾದೇಶವಾಗಿದೆ ಎಂದು ಹೇಳಿದರು.

ಸೆಕ್ಷನ್ 3 ರಡಿ ತಿಳಿಸಿದಂತೆ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಈ ಅಧ್ಯಾದೇಶದ ಪ್ರಾರಂಭದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ, ಜಿಲ್ಲೆಯ ನೋಂದಣಿ ಪ್ರಾಧಿಕಾರಿಯ ಮುಂದೆ ನೋಂದಣಿಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಈ ಅಧ್ಯಾದೇಶದ ಪ್ರಾರಂಭದ ತರುವಾಯ, ನೋಂದಣಿ ಪ್ರಾಧಿಕಾರಿಯಿಂದ ಈ ಅಧ್ಯಾದೇಶದಡಿ ನೋಂದಣಿ ಪಡೆಯದೆ ಯಾವುದೇ ಸಾಲಗಳನ್ನು ಮಂಜೂರು ಮಾಡತಕ್ಕದ್ದಲ್ಲ ಅಥವಾ ಯಾವುದೇ ಸಾಲವನ್ನು ವಸೂಲು ಮಾಡುವಂತಿಲ್ಲ. ನೋಂದಣಿ ಪ್ರಾಧಿಕಾರಿಯು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಾರ್ಯಾಚರಣೆಗಾಗಿ ನಿರ್ದಿಷ್ಟಪಡಿಸಬಹುದಾದಂಥ ವಿಧಾನದಲ್ಲಿ ಒಂದು ವರ್ಷದ ಅವಧಿಗಾಗಿ ನೋಂದಣಿಯನ್ನು ಮಾಡಿಕೊಳ್ಳಬಹುದಾಗಿದೆ.

ನೋಂದಣಿ ಪ್ರಾಧಿಕಾರಿಯು ಮೈಕ್ರೋ ಫೈನಾನ್ಸ್ ಸಂಸ್ಥೆಗಳು

# ಬಳ್ಳಾರಿ: ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಕೃಷ್ಣಪ್ಪ ಭೇಟಿ ಹಾಗೂ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19–ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಕೃಷ್ಣಪ್ಪ ಹಾಗೂ ಸದಸ್ಯರು ಒಳಗೊಂಡ ತಂಡವು ಸೋಮವಾರದಿಂದ ಬಳ್ಳಾರಿ ಜಿಲ್ಲೆಗೆ ವಿವಿಧೆಡೆ ಭೇಟಿ ನೀಡಿ ಪರಿಶೀಲಿಸಿದರು. ಆಹಾರ ಇಲಾಖೆ ಅಧಿಕಾರಿಗಳೊಂದಿಗೆ ಆಹಾರ ನಾಗರಿಕ ಸರಬರಾಜು ನಿಗಮದ ಸಗಟು ಗೋದಾಮುಗಳ ತಪಾಸಣೆ, ಬಳ್ಳಾರಿ ನಗರ ಮತ್ತು ಗ್ರಾಮೀಣ ಪ್ರದೇಶಗಳ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪಡಿತರ ವಿತರಣೆ ಕಾರ್ಯ, ಪಡಿತರ ವಿತರಣೆ ಸಮರ್ಪಕವಾಗಿ ವಿತರಿಸಿರುವ ಬಗ್ಗೆ ಫಲಾನುಭವಿಗಳ ಮನೆ–ಮನೆ ಭೇಟಿ ನೀಡಿ ಖುದ್ದು ಪರಿಶೀಲನೆ ನಡೆಸಿದರು.

ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆಗಳ ಹಾಸ್ಟೆಲ್ ಗಳಿಗೆ ಭೇಟಿ ನೀಡಿ ಆಹಾರ ಗುಣಮಟ್ಟ, ಸ್ವಚ್ಚತೆ ಮತ್ತು ನೈರ್ಮಲ್ಯತೆ ಹಾಗೂ ವಿಧ್ಯಾರ್ಥಿಗಳಿಗೆ ಬೇಕಾದ ಅಗತ್ಯ ಸಾಮಾಗ್ರಿಗಳ ಕುರಿತು ಪರಿಶೀಲಿಸಿದರು.

ಕಾನೂನು ಮಾಪನ ಶಾಸ್ತ್ರ ಇಲಾಖೆಯಡಿಯ ಪೆಟ್ರೋಲ್ ಬಂಕ್ ತಪಾಸಣೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಳ್ಳಾರಿ ನಗರದ ವಿವಿಧ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳಿಗೆ ನೀಡುವ ಆಹಾರ ಗುಣಮಟ್ಟ, ಸ್ವಚ್ಚತೆ ಮತ್ತು ನೈರ್ಮಲ್ಯತೆ ಕುರಿತು ಪರಿಶೀಲಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಬಿಮ್ಸ್ ಆಸ್ಪತ್ರೆ ಮುಖ್ಯಸ್ಥರೊಂದಿಗೆ ಬಾಣಂತಿಯರಿಗೆ ನೀಡುವ ಎಲ್ಲಾ ರೀತಿಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು.

ಬಳಿಕ ಕಂಪ್ಲಿ, ಸಂಡೂರು, ಸಿರುಗುಪ್ಪ ತಾಲೂಕುಗಳ ಸಗಟು ಗೋದಾಮುಗಳಿಗೆ ಮತ್ತು ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು. ನಂತರ ಬಳ್ಳಾರಿ ನಗರದ ವಿವಿಧ ಹೋಟೆಲ್‌ಗಳಿಗೆ ಭೇಟಿ ನೀಡಿ ಆಹಾರದ ಗುಣಮಟ್ಟ, ಸ್ವಚ್ಚತೆ ಮತ್ತು ನೈರ್ಮಲ್ಯತೆ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕಿ ಸಕೀನಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ ಸೇರಿದಂತೆ ಇತರರು ಇದ್ದರು.

### ಜಿಂದಾಲ್ ನಲ್ಲಿ ಮೂರು ದಿನಗಳ ಬೃಹತ್ ರಕ್ತದಾನ ಶಿಬಿರಕ್ಕೆ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಚಾಲನೆ

# ಅರ್ಹರು ತಪ್ಪದೇ ರಕ್ತದಾನ ಮಾಡುವಂತೆ ಕರೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.20–ಸಂಡೂರಿನ ತೋರಣಗಲ್ಲು ಬಳಿಯ ಜಿಂದಾಲ್ ನಲ್ಲಿ ಇಂದಿನಿಂದ (ಫೆ.20, 21, 22) ಮೂರು ದಿನಗಳ ಕಾಲ ನಡೆಯಲಿರುವ ಬೃಹತ್ ರಕ್ತದಾನ ಶಿಬಿರಕ್ಕೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಗುರುವಾರ ಒಪಿಜೆ ಸೆಂಟರ್ ಸಭಾಂಗಣದಲ್ಲಿ ಚಾಲನೆ ನೀಡಿದರು.

ಕೃತಕವಾಗಿ ತಯಾರಿಸಲು ಸಾಧ್ಯವಾಗದ ರಕ್ತವನ್ನು ಮತ್ತೊಬ್ಬರಿಗೆ ನೀಡಿ ಜೀವ ಉಳಿಸುವಂಥ ಕೆಲಸ ನಿಜಕ್ಕೂ ಶ್ರೇಷ್ಠವಾಗಿದ್ದು, 18 ವರ್ಷ ತುಂಬಿದ ಎಲ್ಲಾ ಅರ್ಹರು ತಪ್ಪದೇ ರಕ್ತದಾನ ಮಾಡಬೇಕು ಎಂದು ಕರೆ ನೀಡಿದರು.

ಜಿಲ್ಲೆಯಲ್ಲಿ ರಕ್ತದಾನ ಶಿಬಿರಗಳು ಕ್ಷೀಣಿಸುತ್ತಿದ್ದವು. ವರ್ಷವಾರು ನಿಗದಿತ ಗುರಿ–ಗಿಂತ ಕಡಿಮೆ ಸಂಗ್ರಹವಿದೆ. ಇದಕ್ಕೆ ಪ್ರೋತ್ಸಾಯಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಹಣಾ ಘಟಕ ಇವರೊಂದಿಗೆ ಜೆಎಸ್‌ಡಬ್ಲ್ಯು ಜಿಂದಾಲ್ ಸಹಯೋಗದಲ್ಲಿ ಜಿಂದಾಲ್ ಆವರಣದ ವಿವಿಧ 15 ಸ್ಥಳಗಳಲ್ಲಿ ರಕ್ತ ಭಂಡಾರ ಮೂಲಕ ಬೃಹತ್ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ತುರ್ತು ಸಂದರ್ಭದಲ್ಲಿ ಜೀವ ಉಳಿಸಲು ಹಾಗೂ ರಕ್ತದ ಕೊರತೆ ತಗ್ಗಿಸಲು ರಕ್ತದಾನ ಶಿಬಿರವು ಫೆ.22 ರ ವರೆಗೆ ನಡೆಯಲಿದ್ದು, ಈ ಬೃಹತ್ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಪ್ರತಿಯೊಬ್ಬರೂ ರಕ್ತದಾನ ಮಾಡಬಹುದು ಎಂದರು.

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಹಣಾ ಘಟಕ ಅಧಿಕಾರಿ ಡಾ.ಇಂದ್ರಾಣಿ.ವಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮಲ್ಲಿನ ಎಲ್ಲಾ ಅಂಗಾಂಗಗಳನ್ನು ದಾನ ಮಾಡಬಹುದಾಗಿದ್ದು, ಅದರಲ್ಲಿ ರಕ್ತದಾನ ಬಹುಮುಖ್ಯವಾಗಿದೆ. ಜಿಲ್ಲೆಯ ಬಿಮ್ಸ್ ಆಸ್ಪತ್ರೆ ಹಾಗೂ ಜಿಲ್ಲಾ ಆಸ್ಪತ್ರೆ ಮತ್ತು ಇತರೆ ರಕ್ತ ಕೇಂದ್ರಗಳಲ್ಲಿ ಅತಿ ಅವಶ್ಯಕವಾಗಿದೆ ಎಂದರು.

ಅಪಘಾತಗಳಿಂದ ಗಾಯಗೊಂಡವರಿಗೆ ಹಾಗೂ ರಕ್ತಹೀನತೆಯಿಂದ ಬಳಲುವ ಗರ್ಭಿಣಿಯರಿಗೆ, ಹೆರಿಗೆ ಸಂದರ್ಭದಲ್ಲಿ ಗರ್ಭಿಣಿಯರಿಗೆ ಮತ್ತು ಥಲಸೀಮಿಯಾದಂತಹ ಕಾಯಿಲೆಯಿಂದ ಬಳಲುತ್ತಿರುವವರಿಗೆ ನಿರಂತರವಾಗಿ ರಕ್ತದ ಅವಶ್ಯಕತೆ ಇದೆ. ರಕ್ತದಾನದಿಂದ ನಮ್ಮ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಗೆ ನಿರಂತರವಾಗಿ ಸಹಕಾರಿಯಾಗಲಿದೆ ಎಂದರು.

ಈ ಶಿಬಿರದಲ್ಲಿ 5000 ರಕ್ತ ಯುನಿಟ್ ಸಂಗ್ರಹಿಸುವ ಗುರಿ ಹೊಂದಲಾಗಿದೆ. ಈ ವರ್ಷದಲ್ಲಿ ಒಟ್ಟು 13,792 ರಕ್ತ ಯುನಿಟ್ ಸಂಗ್ರಹ ಮಾಡುವ ಗುರಿ ಇದ್ದು, ಈವರೆಗೆ 6000 ರಕ್ತ ಯುನಿಟ್




ಸಂಗ್ರಹ ಮಾಡಲಾಗಿದೆ ಎಂದು ಅವರು ತಿಳಿಸಿದರು.

18 ವರ್ಷ ತುಂಬಿದ ಎಲ್ಲಾ ಅರ್ಹ ಪುರುಷ ಮತ್ತು ಮಹಿಳೆಯರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಜಿಲ್ಲೆಯಲ್ಲಿ ರಕ್ತದ ಕೊರತೆ ನೀಗಿಸಿ ಜೀವ ಉಳಿಸುವ ಕಾರ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

**ರಕ್ತದಾನ ಶಿಬಿರ ನಡೆಯುವ ಸ್ಥಳ:** ಜಿಂದಾಲ್‌ನ ಓಪಿಜೆ ಸೆಂಟರ್‌ನ ತಮನ್ನಾ ಶಾಲೆ, ಜಿಂದಾಲ್ ಸಂಜೀವಿನಿ ಆಸ್ಪತ್ರೆ, ವಿದ್ಯಾನಗರದ ಆರೋಗ್ಯ ಕೇಂದ್ರ ಮತ್ತು ಲಿಟಲ್ ಎಲ್ಲೆ, ಹೆಚ್‌ಎಸ್‌ಟಿ ಕಾಂಪ್ಲೆಕ್ಸ್, ಸಿಆರ್‌ಎಂ–1 ಪ್ಲ್ಯಾಂಟ್, ಲಾಜಿಸ್ಟಿಕ್ ಪ್ಲಾಂಟ್, ಎಸ್‌ಎಂಎಸ್–4 ಪ್ಲ್ಯಾಂಟ್, ಹೆಚ್‌ಆರ್‌ಡಿ ಪ್ಲ್ಯಾಂಟ್, ಜೆಎಸ್‌ಎಂಎಸ್‌ಹೆಚ್‌ನ ಸ್ಟೆಪ್‌ಡೌನ್ ಐಸಿಯು ಮತ್ತು ಜೆಎಸ್‌ಡಬ್ಲ್ಯುಜೆ ಎನರ್ಜಿ ಸಭಾಂಗಣದಲ್ಲಿ ಬೆಳಿಗ್ಗೆ 09 ಗಂಟೆಯಿಂದ ಸಂಜೆ 04.30 ಗಂಟೆಯವರೆಗೆ ನಡೆಯಲಿದೆ.

**ಸಾರ್ವಜನಿಕರಿಗೆ ಅವಕಾಶ:** ತೋರಣಗಲ್ಲು ನ ಒಪಿಜೆ ಜಿಂದಾಲ್ ತಮನ್ನಾ ಶಾಲೆ ಆವರಣ ಮತ್ತು ಜಿಂದಾಲ್ ಸಂಜೀವಿನಿ ಆಸ್ಪತ್ರೆ ಆವರಣ ಸೇರಿ ಈ ಎರಡು ಸ್ಥಳದಲ್ಲಿ ಸಾರ್ವಜನಿಕರಿಗೆ ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಲು ಅವಕಾಶವಿದ್ದು, ಮೂರು ದಿನಗಳ ಕಾಲ ತಪ್ಪದೇ ಆಗಮಿಸಿ ರಕ್ತದಾನ ಮಾಡಬಹುದು ಎಂದು ತಿಳಿಸಿದರು.

ನೋಂದಣಿಗಾಗಿ ಮೊ.7829012277, 8039542124, 08395–42222, 9945367894, 9686595215 ಗೆ ಕರೆ ಮಾಡಿ ನೋಂದಾಯಿಸಿಕೊಳ್ಳಬಹುದು ಎಂದರು.

ಬಳಿಕ ರಕ್ತದಾನಿಗಳಿಗೆ ಪ್ರಮಾಣ ಪತ್ರ, ಕಿರು ಆಹಾರ ಕಿಟ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಂದಾಲ್ ತೋರಣಗಲ್ಲಿನ ಕಾರ್ಯನಿರ್ವಾಹಕ ಉಪಾಧ್ಯಕ್ಷ ಮಯೂರೇಶ್ ಬಾಪತ್, ಉಪಾಧ್ಯಕ್ಷ (ಆಡಳಿತ) ಸುನೀಲ್ ರಾಲ್ಫ್, ಸಿಎಸ್‌ಆರ್ ಮುಖ್ಯಸ್ಥ ಪೆದ್ದಣ್ಣ, ಸಂಜೀವಿನಿ ಆಸ್ಪತ್ರೆಯ ಮುಖ್ಯಸ್ಥ ಡಾ.ಸುನೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೀರಿನ ಮಹತ್ವದ ಅರಿವು ಮೂಡಿಸಿ: ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.19–ನೈಸರ್ಗಿಕ ಸಂಪನ್ಮೂಲವಾದ ನೀರು ನಮ್ಮೆಲ್ಲರಿಗೂ ಅತ್ಯಮೂಲ್ಯವಾಗಿದ್ದು, ನಗರ ಮತ್ತು ಗ್ರಾಮೀಣ ಪ್ರದೇಶದ ಜನ ಸಮುದಾಯದವರಿಗೆ ನೀರಿನ ಮಹತ್ವದ ಅರಿವು ಮೂಡಿಸಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಹೇಳಿದರು.

ಬುಧವಾರ, ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಿಲ್ಲಾ ಪಂಚಾಯತ್ ಇವರ ಸಹಯೋಗದಲ್ಲಿ ಫೀಡ್‌ಬ್ಯಾಕ್ ಫೌಂಡೇಶನ್ ವತಿಯಿಂದ ಜಲ ಜೀವನ್ ಮಿಷನ್ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಕುರಿತು ಆಯೋಜಿಸಿದ್ದ ನಾಲ್ಕು ದಿನ ತರಬೇತಿ ಕಾರ್ಯಾಗಾರದ ಸಮಾರೋಪದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇಶದ ಅಭಿವೃದ್ಧಿಯು ಗ್ರಾಮದ ಅಭಿವೃದ್ಧಿಯಲ್ಲಿ ಅಡಗಿದೆ. ಹಾಗಾಗಿ ಗ್ರಾಪಂ ಅಧಿಕಾರಿಗಳು ಹಾಗೂ ಚುನಾಯಿತ ಜನ ಪ್ರತಿನಿಧಿಗಳು ಸಮಗ್ರ ಗ್ರಾಮ ಅಭಿವೃದ್ಧಿಗೆ ಕಾರ್ಯಗತರಾಗಬೇಕು ಎಂದರು.

ತರಬೇತಿ ಪಡೆದವರು ಕ್ಷೇತ್ರ ಪರಿವೀಕ್ಷಣೆ ಕೈಗೊಳ್ಳಬೇಕು. ಇದರಿಂದ ಜಲ ಜೀವನ್ ಮಿಷನ್ 24*7 ಅನುಷ್ಠಾನಗೊಳಿಸಲು ಇನ್ನಷ್ಟು ಅನುಕೂಲಕರವಾಗಲಿದೆ ಎಂದು ತಿಳಿಸಿದರು. ಜೆಜೆಎಂ ಯೋಜನೆಯಡಿ ಶುದ್ಧ ನೀರು ಸರಬರಾಜು ಮುಖ್ಯ ಮಾಡುವುದು ಮುಖ್ಯ ಧ್ಯೇಯವಾಗಬೇಕು. ಸಾರ್ವಜನಿಕರು ನೀರನ್ನು ವ್ಯರ್ಥ ಮಾಡದೇ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು. ಇದೇ ವೇಳೆ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿದ ಗ್ರಾ.ಪಂ ಅಧ್ಯಕ್ಷರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಈ ಸಂಧರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಹೆಚ್.ಇಂಧುದಾರ್, ಫೀಡ್ ಬ್ಯಾಂಕ್ ಫೌಂಡೇಶನ್‌ನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಅಜಯ್ ಸಿನ್ಹ, ಜಿ.ಪಂ ನ ಜಿಲ್ಲಾ ವ್ಯವಸ್ಥಾಪಕ ತಿಪ್ಪೇಸ್ವಾಮಿ, ಫೀಡ್ ಬ್ಯಾಕ್ ಸಂಸ್ಥೆಯ ರಾಜ್ಯ ಯೋಜನಾ ಸಮನ್ವಯಾಧಿಕಾರಿ ಡಾ.ನಂದಕುಮಾರ್, ಜಿಲ್ಲಾ ಸಂಯೋಜಕರಾದ ಓಂಕಾರ್, ಅಭಿಷೇಕ್.ಹೆಚ್., ತಿಪ್ಪೇಸ್ವಾಮಿ, ಶಶಿಕಾಂತ್, ರವಿ, ಮಂಜುನಾಥ್, ಐಎಸ್‌ಆರ್‌ಒ ಶ್ರೀಧರ್ ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರು, ವಿವಿಧ ಗ್ರಾಪಂ ಅಧ್ಯಕ್ಷರು, ಪಿಡಿಒ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಪ್ರವಾಸೋದ್ಯಮ ಇಲಾಖೆಯಿಂದ ಫೆ.26, 27 ಹಾಗೂ 28ರಂದು ಅಂತರಾಷ್ಟ್ರೀಯ ಟ್ರಾವೆಲ್ ಮಾರ್ಟ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 20–ಪ್ರವಾಸೋದ್ಯಮ ಇಲಾಖೆಯಿಂದ ಇದೇ ಫೆ.26, 27 ಹಾಗೂ 28ರಂದು ಬೆಂಗಳೂರಿನ ನೆಲಮಂಗಲ ರಸ್ತೆ ಅಂತರಾಷ್ಟ್ರೀಯ ಟ್ರಾವೆಲ್ ಮಾರ್ಟ್ ಆಯೋಜನೆ ಮಾಡಲಾಗುತ್ತಿದ್ದು, ಜಿಲ್ಲೆಯ ಪ್ರವಾಸೋದ್ಯಮ ಪಾಲುದಾರರು ಭಾಗವಹಿಸಿಬಹುದಾಗಿದೆ.

ಕರ್ನಾಟಕದ ಪ್ರವಾಸೋದ್ಯಮವನ್ನು ಜಾಗತಿಕವಾಗಿ ಬಲಪಡಿಸುವ, ಬೆಳೆಸುವ ಪ್ರವಾಸಿಗರನ್ನು ಆಕರ್ಷಿಸುವ ಹಾಗೂ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಜಾಗತಿಕವಾಗಿ ವ್ಯಾಪಾರದ ಅವಕಾಶಗಳನ್ನು ಹೆಚ್ಚಿಸುತ್ತಾ ಬಂಡವಾಳವನ್ನು ಸೆಳೆಯುವ ಉದ್ದೇಶದಿಂದ 2 2ne edition of the Karnataka International Travel Expo (KITE) & Bangalore International Exhibition center ಆಯೋಜಿಸುತ್ತಿದೆ. ಈ ಆಯೋಜನೆಯಲ್ಲಿ ದೇಶ 400ಕ್ಕೂ ಹೆಚ್ಚಿನ ಊಥಣಜಜ ಃಣಥಿಜಥಿ ಹಾಗೂ ವಿದೇಶದ 30ಕ್ಕೂ ಹೆಚ್ಚಿನ ದೇಶಗಳಿಂದ 50ಕ್ಕೂ ಹೆಚ್ಚಿನ ಮಾಧ್ಯಮಗಳು ಈ ಮೇಳದಲ್ಲಿ ಭಾಗವಹಿಸಲಿವೆ. ಪ್ರವಾಸೋದ್ಯಮ ಉತ್ಪನ್‌ಗಳು ಮತ್ತು ಸೇವೆಗಳು, ಸಾಂಸ್ಕೃತಿಕ ಪರಂಪರೆಯನ್ನು ಪ್ರದರ್ಶಿಸುವಂತಹ ಪ್ರವಾಸಿ ಉತ್ತೇಜಕ ಚಟುವಟಿಕೆಗಳಿಗೆ ಉತ್ತೇಜನ ದೊರೆಯಲಿದೆ. ಹಾಗೂ ರಾಯಚೂರು ಜಿಲ್ಲೆಯ ಪ್ರವಾಸೋದ್ಯಮಕ್ಕೆ ಅಂತರಾಷ್ಟ್ರೀಯ ಮಟ್ಟದ ವೇದಿಕೆ ದೊರೆಯಲಿದೆ. ಜಿಲ್ಲೆಯ ಪ್ರವಾಸೋದ್ಯಮ ಪಾಲುದಾರರಾದ, ಟೂರ ಅಪರೇಟರಗಳು, ಹೋಟೇಲ್ ಮತ್ತು ರೆಸಾರ್ಟ್ ಮಾಲಿಕರು ಹಾಗೂ ಇತರ ಪ್ರವಾಸೋದ್ಯಮ ಕ್ಷೇತ್ರದ ಪ್ರತಿನಿಧಿಗಳಿಗೆ ಇದರಲ್ಲಿ ತಮ್ಮ ಉತ್ಪನ್ ಗಳೊಂದಿಗೆ ಭಾಗವಹಿಸಿ ಇದರ ಸದುಪಯೋಗ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಈ ಮೇಳದಲ್ಲಿ ಉತ್ತರ ಕರ್ನಾಟಕದ ಪ್ರವಾಸೋದ್ಯಮ ಪಾಲುದಾರರಿಗೆ ಆಕರ್ಷಿಸುವ ಸಲುವಾಗಿ, ಸ್ಟಾಲ್ ಸ್ಥಾಪಿಸಲು ಅನುಕೂಲವಾಗುವ ದೃಷ್ಠಿಯಿಂದ ವಿಶೇಷ ರಿಯಾಯಿತಿಯನ್ನು ನೀಡಲಾಗಿದೆ. ಪ್ರತಿ ಸ್ಟಾಲ್‌ಗೆ ಕೇವಲ ರೂ.10,000/– ಮಾತ್ರ ದರ ನಿಗದಿಪಡಿಸಲಾಗಿರುತ್ತದೆ. ಈ ಅವಕಾಶವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ https://register.karnatakatravelexpo.orga forstand booking ದೂರವಾಣಿ ಸಂಖ್ಯೆ: 08532200677ಗೆ ಸಂಪರ್ಕಿಸುವಂತೆ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜೇಂದ್ರ ಜಿಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಮಟ್ಟದ ಸಾಂಸ್ಕೃತಿಕ ಸಮಾವೇಶ; ಇಂದು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 20– ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಫೆ.21ರ ಸಂಜೆ 4.30ಗಂಟೆಗೆ ರಾಜ್ಯ ಮಟ್ಟದ ಸಾಂಸ್ಕೃತಿಕ ಸಮಾವೇಶ ಕಾರ್ಯಕ್ರಮದ ಕುರಿತು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಜಿಲ್ಲೆಯ ಎಲ್ಲಾ ಸಂಘ, ಸಂಸ್ಥೆ ಹಾಗೂ ಸಂಘಟನೆಯ ಮುಖಂಡರು, ಸಾಹಿತಿಗಳು ಮತ್ತು ಕಲಾವಿದರು ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳ ಭಾಗಿಯಾಗಿ ಸೂಕ್ತ ಸಲಹೆ ಸೂಚನೆ ನೀಡಬೇಕೆಂದರು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿರಾ ಕ್ಯಾಂಟಿನನಲ್ಲಿ ಗುಣಮಟ್ಟದ ಆಹಾರ ನೀಡದ ಗುತ್ತಿಗೆದಾರರ ಗುತ್ತಿಗೆ ರದ್ದುಪಡಿಸಲು ಕರವೆ ಒತ್ತಾಯ.








(ಶಿವು ರಾಠೋಡ)

ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು:ಪಟ್ಟನದಲ್ಲಿರುವ ಇಂದಿರಾ ಕ್ಯಾಂಟೀನಲ್ಲಿ ನಿತ್ಯವು ಗುಣಮಟ್ಟದ ಆಹಾರ ನೀಡುತ್ತಿಲ್ಲ ಕೂಡಲೇ ಗುತ್ತಿಗೆದಾರನ ಗುತ್ತಿಗೆ ರದ್ದುಪಡಿಸುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಅಮರೇಶ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ.

ಪಟ್ಟಣದಲಿರುವ ಇಂದಿರಾ ಕ್ಯಾಂಟೀನನಲ್ಲಿಗುಣಮಟ್ಟದಆಹಾರ ಹಮಚಿಕೆಮಾಡುವುದಿಲ್ಲ ಚಪಾತಿ ಹಾಗೂಅನ್ನಸರಿಯಾಗಿಬೆಂದಿರದ ಆಹಾರವನ್ನುನೀಡಲಾಗುತ್ತಿದ್ದು ಶಾಲಾ ಕಾಲೇಜುಗಳಿಗೆ ಬರುವ ವಿದ್ಯಾರ್ಥಿಗಳುಬಡವರುಸೇರಿದಂತೆ ಹಲವಾರು ಜನ ಇಂತಹುದ್ದೆ ಆಹಾರ ಸೇವಿಸಬೇಕಾಗಿದೆ

ಸರಕಾರದಿಂದ ಬರುವ ಹಣದಲ್ಲಿ ಇಂದಿರಾ ಕ್ಯಾಂಟೀನ್ ನಡೆಸಲಾಗುತ್ತಿದ್ದು ರಿಯಾಯಿತಿ ದರದಲ್ಲಿ ಆಹಾರ ದೊರೆಯುತ್ತಿದೆ ಎಂದು ಬೇರೆಬೇರೆಕಡೆಯಿಂದ ಬರುವ ಬಡವಿದ್ಯಾರ್ಥಿಗಳು ಇತರರು ಸದರಿ ಕ್ಯಾಂಟಿನ್ ಗೆ ಬರುತ್ತಾರೆ ಆದರೆ ಇಲ್ಲಿಯ ಅಡುಗೆಯ ಸಿಬ್ಬಂದಿ ತಮ್ಮ ಮನಸೋ ಇಚ್ಚೆಯಂತೆ ಚಪಾತಿ ಮಾಡಿ ಅರೆಬರೆ ಬೆಂದಿರುವ ಊಟ ನೀಡುತ್ತಾರೆ

ಇಂತಹ ಊಟ ಸೇವಿಸಿದ ಹಲವರಿಗೆ ಹೊಟ್ಟೆ ನೋವು ಕಾಣಿಸಿಕೊಂಡಿದೆ ಅನ್ನವನ್ನು ಮುದ್ದೆಯಾಗಿಮಾಡಿದ್ದು ಅದರಲ್ಲಿ ಕೆಲವು ಬೆಂದಿವೆ ಕೆಲಹಾಗೆ ಇವೆ ಅಂತಹ ಆಹಾರವನ್ನುನೋಡಿದ ಹಲವಾರು ವಿದ್ಯಾರ್ಥಿಗಳು ಇಂತಹದ್ದು ಹೇಗೆ ತಿನ್ನಬೇಕು ಎಂದು ಕೇಳಿದರೆ .

ತಿಂದರೆ ತಿನ್ನಿ ಇಲ್ಲವಾದರೆ ಹೊಗಿ ಎಂದು ಬೆದರಿಕೆ ಹಾಕುತ್ತಿದ್ದಾರೆಸಾರ್ವಜನಿಕರೊಡನೆ ವಾಗ್ವಾದಕ್ಕಿಳಿಯುವ ಬೆದರಿಕೆ ಹಾಕುವ ಇಲ್ಲಿಯ ಸಿಬ್ಬಂದಿಯ ಮೇಲೆ ಸೂಕ್ತಕ್ರಮ ಜರುಗಿಸಬೇಕು ಹಾಗೂ ಗುತ್ತಿಗೆದಾರರ ಗುತ್ತಿಗೆ ರದ್ದು ಪಡಿಸಿ ಬೇರೆ ವ್ಯವಸ್ಥೆ ಮಾಡಬೇಕೆಂದು ಒತ್ತಾಯಿಸಿ ಮನವಿ ಸಲ್ಲಿಸಿದ್ದಾರೆ.

ಈಸಂದರ್ಭದಲ್ಲಿಸಂಘಟನೆಯ ಅಮರೇಶಉಸ್ಕಿಹಾಳ,ದೇವರಾಜ, ರವಿಚಂದ್ರ ರಮೇಶ ಶಿವರಾಜ ಸೇರಿದಂತೆ ಇದ್ದರು.

### ಭಂಟನೂರ ಪಿಕೆಪಿಎಸ್ ಅಧ್ಯಕ್ಷ– ಉಪಾಧ್ಯಕ್ಷರ ಚುನಾವಣೆ

## ಅಧ್ಯಕ್ಷೆಯಾಗಿ ನಾಗಮ್ಮ,ಉಪಾಧ್ಯಕ್ಷರಾಗಿ ಶರಣಪ್ಪ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಭಂಟನೂರಗ್ರಾಮದವಿವಿಧೋದ್ದೇಶ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷೆಯಾಗಿ ನಾಗಮ್ಮ ಶಾಂತಪ್ಪ ಹಾಲಣ್ಣವರ ಹಾಗೂ ಉಪಾಧ್ಯಕ್ಷರಾಗಿ ಶರಣಪ್ಪರಾಮಣ್ಣ ನಾಯಕ ಅವಿರೋಧವಾಗಿ ಆಯ್ಕೆಯಾದರು.ಗುರುವಾರ ಸಂಘದ ಸಭಾಂಗಣದಲ್ಲಿ ನಡೆದ ಈ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ನಾಗಮ್ಮ ಶಾಂತಪ್ಪ ಹಾಲಣ್ಣವರ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಶರಣಪ್ಪ ರಾಮಣ್ಣ ನಾಯಕ ಇವರಿಬ್ಬರೇ ನಾಮಪತ್ರ ಸಲ್ಲಿಸಿರುವುದರಿಂದ ಇವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಅಣ್ಣಾಸಾಹೇಬ ದೇಸಾಯಿ( ಮಾಲಗತ್ತಿ) ಘೋಷಿಸಿದರು.ಸಂಘದ ಒಟ್ಟು 12 ಜನ ನಿರ್ದೇಶಕರಲ್ಲಿ 8 ಜನ ನಿರ್ದೇಶಕರು ಚುನಾವಣಾ ಸಭೆಯಲ್ಲಿ ಹಾಜರಿದ್ದು 4 ಜನ ಗೈರಾಗಿದ್ದರು.ಇದೇ ಸಂದರ್ಭದಲ್ಲಿ ನೂತನ ನಿರ್ದೇಶಕರಿಗೆ ಸದಸ್ಯತ್ವ ಪ್ರಮಾಣ ಪತ್ರ ವಿತರಿಸಲಾಯಿತು.

ವಿಜಯೋತ್ಸವ: ಸಂಘದ ಅಧ್ಯಕ್ಷ ಉಪಾಧ್ಯಕ್ಷರ ಹೆಸರುಗಳು ಘೋಷಣೆಯಾಗುತ್ತಿದ್ದಂತೆಯೇ ಅವರ ಅಪಾರ ಬೆಂಬಲಿಗರು ಮುಖಂಡರಾದ ಕೆ.ಕೆ.ನಾಡಗೌಡ (ಶಳ್ಳಗಿ) ಹಾಗೂ ಸಂಗನಗೌಡ ಹೆಗರಡ್ಡಿ ಇವರ ನೇತೃತ್ವದಲ್ಲಿ ಪಟಾಕಿ ಸಿಡಿಸಿ ಗುಲಾಲು ಎರಚಿ ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಿದರು. ಈ ಸಂದರ್ಭದಲ್ಲಿ ಮುಖಂಡ ಸಂಗನಗೌಡ ಹೆಗರಡ್ಡಿ ಮಾತನಾಡಿ ಇಂದು ನಾವೆಲ್ಲರೂ ಸೇರಿ ಪಕ್ಷಾತೀತವಾಗಿ ಅಧ್ಯಕ್ಷ ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದೇವೆ. ಎಲ್ಲರೂ ಒಂದಾಗಿ ಸಂಘದ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇವೆ. ಕಳೆದ ಅವಧಿಯಲ್ಲಿ ನಾನು ಅಧ್ಯಕ್ಷನಾಗಿದ್ದಾಗಿಯೂ ಸಾಕಷ್ಟು ಸಂಘದ ಅಭಿವೃದ್ಧಿಯನ್ನು ಮಾಡಿದ್ದೇನೆ ಇನ್ನು ಮುಂದೆಯೂ ನೂತನ ಅಧ್ಯಕ್ಷ ಉಪಾಧ್ಯಕ್ಷರು ಹಾಗೂ ಎಲ್ಲರೂ ಸೇರಿ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ ಅವಿರೋಧ ಆಯ್ಕೆಗೆ ಸಹಕರಿಸಿದ ಎಲ್ಲ ನಿರ್ದೇಶಕರಿಗೂ ಅಭಿನಂದಿಸುತ್ತೇನೆ ಎಂದರು.

ಈ ವೇಳೆ ಮುಖಂಡರಾದ ಶರಣುಧಣಿ ದೇಶಮುಖ, ಬಸನಗೌಡ ಬಿರಾದಾರ, ಹಣಮಗೌಡ ಬಸರಡ್ಡಿ, ಬಸನಗೌಡ ನಾಡಗೌಡ,ಡಾ. ಬಲವಂತ್ರಾಯಗೌಡ ನಡಹಳ್ಳಿ, ಶಿವರೆಡ್ಡಿ ಐನಾಪೂರ,ಸಂಗನಗೌಡ ಮೂಲಿಮನಿ, ಸಾಹೇಬಗೌಡ ಬಸರೆಡ್ಡಿ,ಅರವಿಂದ ಹಾಲಣ್ಣವರ, ಶರಣಗೌಡ ಪದರೆಡ್ಡಿ,ಅಪ್ಪಸಾಹೇಬ ನಾವದಗಿ,ಬಸನಗೌಡ ಬಿರಾದಾರ, ಸಂಗನಗೌಡ ಅಸ್ಕಿ,ಗೌಡಪ್ಪಗೌಡ ಐನಾಪೂರ,ಆದಣ್ಣ ಸಜ್ಜನ ಶಳ್ಳಗಿ, ರೇವಣಸಿದ್ದಪ್ಪವಾಲಿಕಾರ ಸಂಗನಗೌಡ ನಾವದಗಿ, ನಿರ್ದೇಶಕರಾದ ಶಾಂತಗೌಡ ನಾವದಗಿ,ನಿಂಗಣ್ಣ ನಗನೂರ, ಸಿದ್ದಮ್ಮ ಪೊಲೀಸ್ ಪಾಟೀಲ,ನಡಗೇರಪ್ಪ ನೀರಲಗಿ, ಮಲ್ಲರೆಡ್ಡಪ್ಪ ಕಿರದಳ್ಳಿ, ಕಾಸಪ್ಪ ಮಾದರ ಇದ್ದರು.

## ಶ್ರೇಷ್ಠ ವಚನಕಾರ ಸರ್ವಜ್ಞ ಅವರ ಜಯಂತೋತ್ಸವ.




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ನಗರದ ಬಿಜೆಪಿ ನಗರ ಕಾರ್ಯಾಲಯದಲ್ಲಿ ಕನ್ನಡ ಸಾಹಿತ್ಯ ಸಿರಿಗೆ ಅಮೂಲ್ಯ ಕೊಡುಗೆ ನೀಡಿದ ಶ್ರೇಷ್ಠ ವಚನಕಾರ ಸರ್ವಜ್ಞ ಅವರ ಜಯಂತೋತ್ಸವ.

ಈಸಂದರ್ಭದಲ್ಲಿನಗರಮಂಡಲ ಅಧ್ಯಕ್ಷರಾದ ಶ್ರೀ ಚಂದ್ರಶೇಖರ ಯಾಳಗಿ,ಪ್ರ,ಕಾ ಶ್ರೀ ಮೌನೇಶ ಹಯ್ಯಾಳಕರ,ಲಕ್ಷೀಕಾಂತ ಬಿರಾಳ, ಪ್ರಭು ಕುಂಬಾರ, ಮಹೇಶ ರಸ್ತಾಪೂರ,ಕಾಶಿರಾಜ ಹುಣಸಗಿ, ಹುಸನಪ್ಪ ಅಜ್ಜಕೊಲ್ಲಿ, ವಿಶ್ವನಾಥ ಕುಂಬಾರ, ಶರಣು ಟೊಕಾಪೂರ, ಪ್ರಭು ಗೋವಿಂದಪಲ್ಲಿ, ಸಂಗಣ್ಣ ಕುಂಬಾರ, ರಾಮರೆಡ್ಡಿ ತಳವಾರ, ದೇವು, ಅಂಬ್ರೇಶ ಕುಂಬಾರ, ಸ್ನೇಹಲ್ ಎಕಬೋಟೆ,ಮಂಜುನಾಥ ಅಲಬಾನೂರ್, ಬಸವರಾಜ ಕುಂಬಾರ, ಸದಾಶಿವಾನಂದ ಕುಂಬಾರ,ಶಿವುಕುಂಬಾರ,ವೆಂಕಟೇಶ ಗೌನಳ್ಳಿ, ವಿನೋದ ನಾಯಕ, ಓಂಪ್ರಕಾಶ್ ಕಟ್ಟಿಮನಿ ಹಾಗೂ ಇತರರು ಉಪಸ್ಥಿತರಿದ್ದರು

### ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು । ಶಾಲಾ ಮಕ್ಕಳಿಗೆ ಶಾಸಕ ಕಂದಕೂರ ಸಲಹೆ

## ಉತ್ತಮ ಫಲಿತಾಂಶ ಪಡೆದು ಬದಲಾವಣೆ ತನ್ನಿ..!





ಶೈಕ್ಷಣಿಕ ಪ್ರಗತಿಗೆ ಶಾಸಕರ ಕೊಡುಗೆ ಅಪಾರ, ಮೊರಾರ್ಜಿ ವಸತಿ ಶಾಲೆಗಳಿಗೆ ಮೂಲ ಸೌಲಭ್ಯಗಳ ಜತೆಗೆ ಹೈಮಾಸ್ಟ್ ದೀಪಗಳ ಅಳವಡಿಕೆ ಮಾಡಿದ್ದಾರೆ. ಅದರಂತೆ ಲಿಂಗೇರಿ ಸ್ಟೇಷನ್ ವಸತಿ ಶಾಲೆಗೆ ಟ್ರ್ಯಾಕ್ ಹಾಗೂ ವಿದ್ಯಾರ್ಥಿಗಳಿಗೆ ಭೋಜನಾಲಯ, ಕಂಪ್ಯೂಟರ್ ಲ್ಯಾಬ್ ಅವಶ್ಯವಿದೆ. ಹಿಂದುಳಿದ ಕಲ್ಯಾಣ ಕರ್ನಾಟಕ ಅಭಿವೃದ್ಧಿಯಲ್ಲಿ ಕಲ್ಯಾಣ ಪಥವಾಗಿ ಸಾಗಲಿ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಚನ್ನಬಸಪ್ಪ ಅವರು ಮನವಿ ಮಾಡಿದರು. ಇದಕ್ಕೆ ತಕ್ಷಣ ಸ್ಪಂದಿಸಿದ ಶಾಸಕ ಕಂದಕೂರ ಅವರು ಕೂಡಲೇ ಬೇಡಿಕೆ ಪಟ್ಟಿ ಸಲ್ಲಿಸುವಂತೆ ಸೂಚಿಸಿದರು.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕಲ್ಯಾಣ ಕರ್ನಾಟಕ ಭಾಗದಲ್ಲಿ ಯಾವ ಕಾರಣಕ್ಕೆ ಶೈಕ್ಷಣಿಕವಾಗಿ ಹಿಂದುಳಿದಿವೆಯೋ ಗೊತ್ತಿಲ್ಲ ಆದರೆ ಪ್ರತೀ ವರ್ಷದ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ನಮ್ಮ ಜಿಲ್ಲೆ ಕೊನೆಯ ಸ್ಥಾನದಲ್ಲಿ ಇರುವುದು ನೋಡಿ ತುಂಬಾ ನೋವಾಗುತ್ತದೆ. ಈ ಬಾರಿ ಅದಕ್ಕೆ ಅವಕಾಶ ಮಾಡಿಕೊಡದೆ ಪ್ರತಿಯೊಬ್ಬ ವಿದ್ಯಾರ್ಥಿಗಳು ಚೆನ್ನಾಗಿ ಓದಿ ಉತ್ತಮ ಫಲಿತಾಂಶ ಪಡೆಯುವ ಮುಖಾಂತರ ಬದಲಾವಣೆ ತರಬೇಕು ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ತಾಲೂಕಿನ ಲಿಂಗೇರಿ ಸ್ಟೇಷನ್ ಮೊರಾರ್ಜಿ ವಸತಿ ಶಾಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.

ಒಬ್ಬರ ಮೇಲೆ ಒಬ್ಬರು ಆರೋಪ ಮಾಡುವುದರಲ್ಲೇ ಎಂಬತ್ತು ವರ್ಷ ಕಳೆದಿವೆ ಈಗಲೂ ಅದನ್ನೇ ಮುಂದುವರೆಸೋದು ಬೇಡ, ಈ ವರ್ಷದ ಫಲಿತಾಂಶದಲ್ಲಿ ಹೆಚ್ಚಳ ಆಗಬೇಕು. ಮುಂದಿನ ಒಂದು ತಿಂಗಳು ಕಾಲ ಎಷ್ಟೇ ಅನಿವಾರ್ಯ ಇದ್ದರೂ ತಂದೆ ತಾಯಿಯ ಜತೆಗೆ ಜಮೀನುಗಳಿಗೆ ಹೋಗದೆ ಅಭ್ಯಾಸದ ಕಡೆಗೆ ಗಮನ ಕೊಡಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಶಾಲೆಗಳಲ್ಲಿ ಶಿಕ್ಷಕರ ಕೊರತೆ ನೀಗಿಸಲು ಈಗಾಗಲೇ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡಿದ್ದು, ಅವರು ಈಗಾಗಲೇ ಎಲ್ಲ ಸರಕಾರಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.ಮುಂಬರುವ ದಿನದಲ್ಲಿ ಖಾಯಂ ಶಿಕ್ಷಕರ ನೇಮಕಮಾಡಿಕೊಳ್ಳುವ ಬಗ್ಗೆಯೂ ಸರಕಾರ ಭರವಸೆ ನೀಡಿದೆ.

### ಟಾಪ್ 10 ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು

ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದು ತೇರ್ಗಡೆಯಾದ ಜಿಲ್ಲೆಯ 10 ವಿದ್ಯಾರ್ಥಿಗಳಿಗೆ ನಮ್ಮ ತಂದೆಯವರ ಹೆಸರಿನಲ್ಲಿ ಈಚೆಗೆ ಸ್ಥಾಪನೆ ಮಾಡಲಾದ ನಾಗನಗೌಡ ಕಂದಕೂರ ಫೌಂಡೇಶನ ಮುಖಾಂತರ ಪಿಯು ಕಾಲೇಜು ಶಿಕ್ಷಣಕ್ಕೆ ನೆರವು ನೀಡಬೇಕು ಎಂಬ ಅಪೇಕ್ಷೆ ಹೊಂದಿದ್ದೇನೆ. ಈ ಬಾರಿ ನಮ್ಮ ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು ತೇರ್ಗಡೆ ಹೊಂದಿ 100 ಪರ್ಸೆಂಟ್ ಫಲಿತಾಂಶ ಪಡೆದುಕೊಳ್ಳಬೇಕು. ಸರಕಾರದ ಮಂತ್ರಿ, ಅಧಿಕಾರಿಗಳನ್ನು ಕಾಡಿ ಬೇಡಿ ಅನುದಾನ ತಂದು ನಾನು ನಿಮಗೆ ಸೌಲಭ್ಯಗಳನ್ನು ಕಲ್ಪಿಸುತ್ತೇನೆ. ಅದಕ್ಕೆ ಪ್ರತಿಯಾಗಿ ನೀವು ನನಗೆ ಫಲಿತಾಂಶ ತಂದುಕೊಡಬೇಕು ಎಂದು ಶಾಸಕ ಶರಣಗೌಡ ಕಂದಕೂರ ಅವರು ವಿದ್ಯಾರ್ಥಿಗಳಿಗೆ ಹೇಳಿದರು.

### ವಿವಿಧ ಕಾಮಗಾರಿಗೆ ಚಾಲನೆ

ಗುರುಮಠಕಲ್ ಮತಕ್ಷೇತ್ರದ ಲಿಂಗೇರಿ ಮುರಾರ್ಜಿ ದೇಸಾಯಿ ವಸತಿ ಶಾಲೆ ಸಿಸಿ ನೆಲಹಾಸು, ಶೌಚಾಲಯ ನಿರ್ಮಾಣ, ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ 1.10ಕೋಟಿ, ಬಳಿಚಕ್ರ ಸಣ್ಣ ತಾಂಡಾದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ತಡೆಗೋಡೆ ನಿರ್ಮಾಣ 12 ಲಕ್ಷ, ಸಾವೂರು, ಹೆಗ್ಗಣಗೇರಾ, ಗ್ರಾಮದಲ್ಲಿ ಸಿಸಿ ಮತ್ತು ಚರಂಡಿ ನಿರ್ಮಾಣ ತಲಾ 10 ಲಕ್ಷ, ಜಿನಕೇರಾ ಗ್ರಾಮದ ಸ.ಹಿ.ಪ್ರಾಥಮಿಕ ಶಾಲೆ ಅಕ್ಷರ ಅವಿಷ್ಕಾರ ಅನುಷ್ಠಾನ 56.12ಲಕ್ಷ, ಕೌಳೂರು ಸರಕಾರಿ ಶಾಲೆಯ ಅಕ್ಷರ ಅವಿಷ್ಕಾರ ಅನುಷ್ಠಾನ 34.01ಲಕ್ಷ, ಕೂಡಲೂರು ಗ್ರಾಮದಿಂದ ಗೌಡಗೇರಾ ಗ್ರಾಮದವರೆಗೆ ರಸ್ತೆ ನಿರ್ಮಾಣ 160 ಲಕ್ಷ, ಕಾಳೆಬೆಳಗುಂದಿ ತಾಂಡ, ಜಿನಕೇರಾ ತಾಂಡ, ಮಲ್ಹಾರ ತಾಂಡ, ಲಿಂಗೇರಿ ತಾಂಡ ಗಳಲ್ಲಿ ಸಿಸಿ ಮತ್ತು ಚರಂಡಿ ನಿರ್ಮಾಣ ತಲಾ 10 ಲಕ್ಷ, ಕೂಡಲೂರು ಗ್ರಾಮದ ಎಸ್.ಟಿ ವಾರ್ಡಲ್ಲಿ, ನಾಗರಬಂಡಿ ಗ್ರಾಮದಲ್ಲಿ ಸಿಸಿ ಮತ್ತು ಚರಂಡಿ ನಿರ್ಮಾಣ ತಲಾ 20 ಲಕ್ಷ, ಬಳಿಚಕ್ರ ಮತ್ತು ಜಿನಕೇರಾ ಗ್ರಾಮದಲ್ಲಿ ಸಿಸಿ ಮತ್ತು ಚರಂಡಿ ನಿರ್ಮಾಣ ತಲಾ 10 ಲಕ್ಷ ಗಳ ಅಭಿವೃದ್ಧಿ ಕಾಮಗಾರಿಗಳ ಅಡಿಗಲ್ಲು ಮತ್ತು ಉದ್ಘಾಟನೆಯನ್ನು ಶಾಸಕ ಶರಣಗೌಡ ಕಂದಕೂರ ನೇರವೇರಿಸಿದರು.

ನನ್ನ ಅಧಿಕಾರಾವಧಿಯಲ್ಲಿ ಬಂದಿರುವ ಅನುದಾನದಲ್ಲಿ ಶೇ.70–75ರಷ್ಟು ಹಣವನ್ನು ಶಿಕ್ಷಣ ಕ್ಷೇತ್ರಕ್ಕೆ ನೀಡಲಾಗಿದೆ. ವಿದ್ಯಾರ್ಥಿಗಳಿಗೆ ಬೇಕಾದ ಎಲ್ಲ ರೀತಿಯ ಸೌಲಭ್ಯ ಕಲ್ಪಿಸುವುದು ನನ್ನ ಜವಾಬ್ದಾರಿ ಅದಕ್ಕೆ ನಾನು ಬದ್ಧನಾಗಿದ್ದೇನೆ. ಆದರೆ ಈ ಸಲ ಎಸ್ಸೆಸ್ಸೆಲ್ಸಿ ಫಲಿತಾಂಶ ಮಾತ್ರ ಏರಿಕೆ ಆಗಲೇ ಬೇಕು, ರಾಜ್ಯದ ಶ್ರೇಣಿ ಪಟ್ಟಿಯಲ್ಲಿ ತಳದಿಂದ ನಾವು ಮೇಲೇರಬೇಕು. ಸಮಸ್ಯೆಗಳ ವಿರುದ್ಧ ಧ್ವನಿ ಎತ್ತದ ಹೊರತು ಸಮಸ್ಯೆಗಳಿಗೆ ಮುಕ್ತಿ ಪಡೆಯಲು ಸಾಧ್ಯವಿಲ್ಲ, ಸರಕಾರದ ಸವಲತ್ತುಗಳನ್ನು ಕೇಳಿ ಪಡೆಯುವ ಮನಸ್ಥಿತಿ ಪ್ರತಿಯೊಬ್ಬರಲ್ಲಿ ಬರಬೇಕು ಎಂದು ವಿದ್ಯಾರ್ಥಿಗಳಿಗೆ ಹುರಿದುಂಬಿಸಿದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಹಣಮಂತಿ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಚನ್ನಬಸಪ್ಪ, ಉಪ ತಹಶೀಲ್ದಾರ ಮಲ್ಲಪ್ಪ ಮಾಧ್ವಾರ,ಕ್ಷೇತ್ರಶಿಕ್ಷಣಾಧಿಕಾರಿ ಹವಳಪ್ಪ ಜಾನೇ, ನಿರ್ಮಿತಿ ಕೇಂದ್ರದ ಅಧಿಕಾರಿ ಕಿರಣ ಕುಮಾರ,ಲ್ಯಾಂಡ ಆರ್ಮಿಯ ಎಇಇ ಶಿವರಾಜ ಹುಡೇದ, ಬಸವರಾಜಪ್ಪಗೌಡ ಲಿಂಗೇರಿ, ಮಲ್ಲಣ್ಣಗೌಡ ಕೌಳೂರು,ಮಲ್ಲೇಶ ನಾಯಕ ಕೂಡ್ಲೂರು,ಹಣಮಂತ ನಾಯಕ, ಜಿಪಂ ಮಾಜಿ ಸದಸ್ಯ ಬಸವರಾಜ ಕಣೇಕಲ್, ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಕೋಟಗೇರಾ,ಬಸರೆಡ್ಡಿ ಹೆಗ್ಗಣಗೇರಾ,ಮಹಿಪಾಲರಡ್ಡಿ ಮಲ್ಹಾರ್, ಪರ್ವತರಡ್ಡಿ ಕಾಳೆಬೇಳಗುಂದಾ,ಶರಣಪ್ಪಗೌಡ ಹೊಸಳ್ಳಿ, ಅಲ್ಲಾವುದ್ದೀನ್ ನೀಲಹಳ್ಳಿ, ಲಕ್ಷ್ಮಣ ನಾಯಕ ಕೂಡ್ಲೂರು, ಗ್ರಾಪಂ ಮಾಜಿ ಅಧ್ಯಕ್ಷ ಮರೆಪ್ಪ ನಾಟೇಕರ, ಶರಣಗೌಡ ಕಾರಡ್ಡಿ,ಹಣಮಂತ ಇಸ್ಲಾಕರ, ಪರ್ವತಾರೆಡ್ಡಿ ಕಾಳೆಬೆಳಗುಂದಿ, ರಾಮು ದೊರೆ ಗೌಡಗೇರಾ ಸೇರಿದಂತೆ ಶಟ್ಟಿಗೇರಾ,ಬಳಿಚಕ್ರಗ್ರಾಮ ಮತ್ತು ತಾಂಡಾ, ಗೌಡಗೇರಾ ಗ್ರಾಮ ಮತ್ತು ತಾಂಡಾ ಸೇರಿದಂತೆ ಮುಂತಾದ ಗ್ರಾಮಗಳ ಜನರು ಹಾಗೂ ಮೊರಾರ್ಜಿ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅಕ್ಷರ ಆವಿಷ್ಕಾರ ಯೋಜನೆ ಮುಖಾಂತರ ಗುರುಮಠಕಲ್ ಮತಕ್ಷೇತ್ರ ಎಲ್ಲ ಶಾಲೆಗಳಿಗೆ ಶೌಚಾಲಯಗಳ ನಿರ್ಮಾಣ ಹಾಗೂ ಅದಕ್ಕೆ ನೀರಿನ ಸೌಲಭ್ಯ ಕಲ್ಪಿಸಿಕೊಡಲು ನಿರ್ಧರಿಸಿದ್ದು, ಬೇಸಿಗೆ ಮುಗಿದು ಜೂನ್ ತಿಂಗಳಲ್ಲಿ ಶಾಲಾರಂಭಕ್ಕೆ ಮುನ್ನವೇ ಕಾಮಗಾರಿ ಮುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಶೈಕ್ಷಣಿಕ ಗುಣಮಟ್ಟ ಸುಧಾರಣೆ ಮುಖಾಂತರ ಎಸ್ಸೆಸ್ಸೆಲ್ಸಿ ಫಲಿತಾಂಶ ಹೆಚ್ಚಳ ಮಾಡುವುದು ಅತ್ಯವಶ್ಯಕವಾಗಿದೆ ಇದಕ್ಕೆ ಶಿಕ್ಷಕ, ವಿದ್ಯಾರ್ಥಿಗಳ ಜತೆಗೆ ಪೋಷಕರ ಸಹಕಾರ ಜರೂರಿದೆ.

**– ಶರಣಗೌಡ ಕಂದಕೂರ**
**ಶಾಸಕರು, ಗುರುಮಠಕಲ್ ಮತಕ್ಷೇತ್ರ**

## ಉತ್ತಮ ವಾತಾವರಣಕ್ಕೆ ಪರಿಸರದ ಅವಶ್ಯಕತೆ ಇದೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:–ಫೆ20.ಇಂದಿನ ದಿನ ಮಾನಗಳಲಿ ಪರಿಸರದ ಅವಶ್ಯಕತೆ ವಿದೆ ಇದರಿಂದ ಉತ್ತಮ ವಾತಾವರಣ ನಿರ್ಮಾಣವಾಗ ಬಹುದು ಎಂದು ಶಿಕ್ಷಕರಾದ ಸುಭಾಷ ಗೈದನಕರ. ತಿಳಿಸಿದರು. ತಾಲ್ಲೂಕಿನ ಯಲ್ಲದಗುಂಡಿ ಸರ್ಕಾರಿ ಪ್ರೌಢಶಾಲೆಯಲ್ಲಿ ಇಕೋ ಕ್ಲಬ್ ಹಸಿರು ಪಡೆ ಉದ್ಘಾಟನೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ ಗಿಡ ಮರಗಳನ್ನು ಹೆಚ್ಚಿಗೆ ನೆಡಸಬೇಕು ಎಂದರು. ಮುಖ್ಯ ಅತಿಥಿಗಳಾಗಿ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಚನ್ನಬಸವ ಸೇರಿದಂತೆ ಸಿಬ್ಬಂದಿ ವರ್ಗದವರು ಮಕ್ಕಳು ಭಾಗವಹಿಸಿದ್ದರು. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಅಧ್ಯಕ್ಷತೆ ಶಾಲೆಯ ಮುಖ್ಯ ಗುರುಗಳಾದ ಸುರೇಖಾ ಉಪಾಸೆ ವಹಿಸಿದ್ದರು. ಸ್ವಾಗತ ಶಿಕ್ಷಕರಾದ ಸುನೀಲ ಘಾಂಗ್ರೆ ನಿರೂಪಣೆ ವಿಜ್ಞಾನ ಶಿಕ್ಷಕರಾದ ಪ್ರಹ್ಲಾದ ರಾವ ಶಿಕ್ಷಕರಾದ ಅಮರ ವಂದಿಸಿದರು.

## ಮೊಸಳೆ ತಂದು ಜೆಸ್ಕಾಂ ಕಚೇರಿ ಮುಂದೆ ರೈತರ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.20–ಬೆಳಗಿನ ಜಾವ ನಾಲ್ಕು ಗಂಟೆಗೆ ಗೋಧಿ ಬೆಳೆಗೆ ನೀರು ಬಿಡಲು ಹೋದಾಗ ರೈತನ ಜಮೀನಿನಲ್ಲಿ ಪ್ರತ್ಯಕ್ಷವಾಗಿರುವ ಮೊಸಳೆಯನ್ನು ಎತ್ತಿನ ಬಂಡಿಯಲ್ಲಿ ಕಟ್ಟಿಕೊಂಡು ಬಂದು ಜೆಸ್ಕಾಂ ಕಚೇರಿ ಮುಂದೆ ರೈತರು ಪ್ರತಿಭಟನೆ ನಡೆಸಿರುವ ಘಟನೆ ಜಿಲ್ಲೆಯಲ್ಲಿ ಇಂದು ನಡೆದಿದೆ.

ಅಫಜಲಪುರ ತಾಲ್ಲೂಕಿನ ಗೊಬ್ಬೂರ್ (ಬಿ) ಗ್ರಾಮದ ಲಕ್ಷ್ಮಣ ಪೂಜಾರಿ ಎಂಬ ರೈತನ ಹೊಲದಲ್ಲಿ ಮೊಸಳೆ ಪ್ರತ್ಯಕ್ಷವಾಗಿತ್ತು. ಜೆಸ್ಕಾಂ ಕಚೇರಿ ರೈತರ ಕೃಷಿ ಜಮೀನಿಗೆ ಬೆಳಗಿನ ಜಾವ 4 ಗಂಟೆಗೆ ವಿದ್ಯುತ್ ಪೂರೈಕೆ ಮಾಡುತ್ತಿರುವುದರಿಂದ ಭಯದ ವಾತಾವರಣದಲ್ಲಿ ಕೆಲಸ ಮಾಡುವಂತಾಗಿದೆ. ರೈತರಿಗೆ ಬೆಳಗಿನ ಜಾವ 4 ಗಂಟೆ ಬದಲು 6 ಗಂಟೆಗೆ ಸಮರ್ಪಕವಾಗಿ ವಿದ್ಯುತ್ ನೀಡುವಂತೆ ಆಗ್ರಹಿಸಿ ಗೊಬ್ಬೂರ್ (ಬಿ) ಗ್ರಾಮದ ಜೆಸ್ಕಾಂ ಕಚೇರಿ ಮುಂಭಾಗದಲ್ಲಿ ಮೊಸಳೆ ಇಟ್ಟು ರೈತರು ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ದೇವಲ್ ಗಾಣಗಾಪುರ ಪೊಲೀಸ್ ಠಾಣೆಯ ಪಿಎಸ್ಐ ರಾಹುಲ್ ಪಾವಡೆ ರೈತರ ಮನವೊಲಿಸಿ ಮೊಸಳೆಯನ್ನು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಒಪ್ಪಿಸಿ ಮೊಸಳೆಯನ್ನು ರಕ್ಷಿಸಲಾಯಿತು. ಎಎಸ್ಐ ಹಝ್ರುತ್ ಅಲಿ , ಸಂಗಣ್ಣ ವಾಲಿಕರ್, ಸಂತೋಷ್ ನಾಯ್ಕೋಡಿ ಸೇರಿದಂತೆ ಮುಂತಾದವರು ಹಾಜರಿದ್ದರು.

# ಸಂತಕವಿ ಸರ್ವಜ್ಞರ ತತ್ವಗಳನ್ನು ನಮ್ಮ ಜೀವನದಲ್ಲಿ ಪಾಲಿಸೋಣ:ಶೀಲವಂತ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಫೆ.20 ಸಂತಕವಿ ಸರ್ವಜ್ಞರ ತತ್ವಗಳನ್ನು ನಾವು ನಮ್ಮ ಜೀವನದಲ್ಲಿ ಪಾಲಿಸೋಣ ಅವರು ಹಾಕಿದ ಮಾರ್ಗದಲ್ಲಿ ಸಾಗೋಣ ಎಂದು ಅಪರ ಜಿಲ್ಲಾಧಿಕಾರಿ ಶಿವುಕುಮಾರ ಶೀಲವಂತ ಅವರು ಹೇಳಿದರು.

ಅವರು ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಸಂತಕವಿ ಸರ್ವಜ್ಞ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸರ್ವಜ್ಞ ಎಂದರೆ ಸರ್ವವನ್ನೂ ಬಲ್ಲವನು ಎಂದರ್ಥ, ಸರ್ವಜ್ಞ ಎಲ್ಲಾ ವಿಷಯಗಳ ಬಗ್ಗೆ ಜ್ಞಾನವನ್ನು ಹೊಂದಿದ್ದರು. ಸರಳವಾದ ಜನರು ಆಡುವ ಭಾಷೆಯಲ್ಲಿಯೇ ಸಾಹಿತ್ಯವನ್ನು ರಚಿಸಿದ್ದಾರೆ. ಡಾಂಭಿಕ ಜೀವನ, ಡಾಂಭಿಕ ಭಕ್ತಿಯನ್ನು ಕಟುವಾಗಿ ಖಂಡಿಸಿದರು, ಸರ್ವಜ್ಞ ಜನರು ಆಚಾರ-ವಿಚಾರಗಳು, ಸಮಾಜದ ವ್ಯವಸ್ಥೆಯನ್ನು ತಮ್ಮ ಸಾಹಿತ್ಯದಲ್ಲಿ ತಿಳಿಸಿಕೊಟ್ಟಿದ್ದಾರೆ. ನಾವು ಚಿಕ್ಕವರಿದ್ದಾಗ ಸರ್ವಜ್ಞನ ವಚನಗಳನ್ನು ಹಾಡುತ್ತ ಮನೆಗಳಿಗೆ ಬರುತ್ತಿದ್ದ ಸ್ವಾಮಿಗಳು ಅವರು ದವಸ ಧಾನ್ಯಗಳನ್ನು ತೆಗೆದು-ಕೊಂಡು ಹೋಗುತ್ತಿದ್ದರು. ಸರ್ವಜ್ಞನವರೆ ಹೇಳಿದಂತೆ



ಕೊಟ್ಟಿದ್ದು ತನಗೆ ಬಚ್ಚಿಟ್ಟಿದು ಪರರಿಗೆ ಎನ್ನುವಂತೆ ಅವರ ಹಲವಾರು ವಚನಗಳು ಬಹಳ ಅರ್ಥಪೂರ್ಣವಾಗಿ ಮತ್ತು ಅವು ಇಂದಿನ ಸಮಾಜಕ್ಕೆ ಬಹಳ ಪ್ರಸ್ತುತತೆ ಇವೆ ಎಂದರು.

ಯುವ ಸಾಹಿತಿ ಮತ್ತು ಪ್ರಾಧ್ಯಾಪಕರಾದ ಈಶ್ವರ ರುಮ್ಮಾ ಅವರು ಮಾತನಾಡಿ, ಸಂತಕವಿ ಸರ್ವಜ್ಞ ಅವರು 16ನೇ ಶತಮಾನದಲ್ಲಿ ಹಾವೇರಿ ಜಿಲ್ಲೆಯ ಅಂಬಲೂರಿನಲ್ಲಿ ಜನಿಸಿದರು. ತಂದೆ ಬಸವರಸ, ತಾಯಿ ಕುಂಬಾರ ಮಾಳೆ, ಇವರ ತಂದೆ ಕಾಶಿ ವಿಶ್ವನಾಥ ದೇಗುಲಕ್ಕೆ ಹೋಗಿ ಹರಿಕೆ ಮಾಡಿ ಇವರನ್ನು ಪಡೆದರು. ಸರ್ವಜ್ಞ ಅವರ ಮೂಲ ಹೆಸರು ಪುಷ್ಪದತ್ತ. ಚಿಕ್ಕವಯಸ್ಸಿನಲ್ಲೇ ವೇದಗಳ ಬಗ್ಗೆ, ವಚನ ಸಾಹಿತ್ಯದ ಬಗ್ಗೆ ಅಧ್ಯಯನ ಮಾಡಿದರು. ಮುಂದೆ ಹಳ್ಳಿ ಹಳ್ಳಿಗೆ ಸಂಚಾರಿಸಿ ಜನರ ಸಮಸ್ಯೆಗಳನ್ನು ಅರಿತರು. ಜನರ ಆಡು ಭಾಷೆಯಲ್ಲಿ ತ್ರಿಪದಿಗಳನ್ನು ರಚಿಸಿದರು. ಮೂಡನಂಬಿಕೆ, ಜಾತಿ ವ್ಯವಸ್ಥೆ, ಡಾಂಭಿಕ ಭಕ್ತಿಯನ್ನು ಕಟುವಾಗಿ ಖಂಡಿಸಿದರು ಎಂದು ಹೇಳಿದರು.

ಬೆಳಿಗ್ಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಂತಕವಿ ಸರ್ವಜ್ಞ ಅವರ ಭಾವಚಿತ್ರಕ್ಕೆ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಹೆಚ್ಚುವರಿ ಪೊಲೀಸ್ ವರಿಷಾ??ಧಿಕಾರಿಗಳಾದ ಚಂದ್ರಕಾಂತ ಪೂಜಾರ ಹಾಗೂ ಸಮಾಜದ ಗಣ್ಯ-ರಿಂದ ಪೂಜೆ ಸಲ್ಲಿಸಿ ನಂತರ ಮೆರವಣಿಗೆಗೆ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಚಾಲನೆ ನೀಡಲಾಯಿತು. ಬೀದರ ನಗರದ ವಿವಿಧ ವೃತ್ತಗಳ ಮೂಲಕ ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದವರೆಗೆ ಸಂತಕವಿ ಸರ್ವಜ್ಞ ಭಾವಚಿತ್ರದ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಮಂಜುನಾಥ ಸ್ವಾಮಿ ಮತ್ತು ತಂಡದಿಂದ ಸಂತಕವಿ ಸರ್ವಜ್ಞ ಗಾಯನ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ್ ಸೊನರ್, ಸಮಾಜದ ಮುಖಂಡರಾದ ವಿಠಲ ಕುಂಬಾರ, ಪವನ ಕುಂಬಾರ, ಶಂಕರ ಶೆಟ್ಟಿ ಕುಂಬಾರ, ಮಲ್ಲಿಕಾರ್ಜುನ ಕುಂಬಾರ ಸೇರಿದಂತೆ ಸಮಾಜದ ಇತರೇ ಮುಖಂಡರುಗಳು ಉಪಸ್ಥಿತರಿದ್ದರು.

## ಶೀಲ ಶಂಕಿಸಿ ಪತ್ನಿ ಕೊಂದ ಪತಿಗೆ ಜೀವಾವಧಿ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.20:ಪತ್ನಿಯ ಶೀಲ ಶಂಕಿಸಿ ಆಕೆಯನ್ನು ಕೊಲೆ ಮಾಡಿದ ಆರೋಪ ಸಾಬೀತಾದ್ದರಿಂದ ಕೊಲೆ ಅಪರಾಧಿ ಆಕೆಯ ಪತಿಗೆ ಇಲ್ಲಿನ 5ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ನಗರದ ಅಂಬಿಕಾ ಕಾಲೋನಿಯ ನಿವಾಸಿ ದೈಹಿಕ ಶಿಕ್ಷಣ ಶಿಕ್ಷಕ ಏಜಾಜ್ ಅಹಮದ್ ಉಸ್ಮಾನ್ ಶಿಕ್ಷೆಗೆ ಒಳಗಾದ ವ್ಯಕ್ತಿ.

2010ರಲ್ಲಿ ಚಿಂಚೋಳಿ ತಾಲ್ಲೂಕಿನ ಚಿಮ್ಮನಚೋಡ ಗ್ರಾಮದ ಶಮೊದ್ದೀನ್ ಗಾರಂಪಳ್ಳಿ ಎಂಬುವರ ಪುತ್ರಿ ರೀದಾಬೇಗಂ ಅವರನ್ನು ಏಜಾಜ್ ಮದುವೆಯಾಗಿದ್ದ. ಕೊಲೆಯಾದ ಗೃಹಿಣಿ ಸರ್ಕಾರಿ ಶಾಲೆಯ ಶಿಕ್ಷಕಿಯಾಗಿದ್ದರು.

ಪತ್ನಿ ರೀದಾಗೆ ಚೆನ್ನಾಗಿರುವ ಬಟ್ಟೆ ಧರಿಸದಂತೆ, ಮೇಕಪ್ ಮಾಡಿಕೊಳ್ಳದಂತೆ, ಯಾರ ಜೊತೆಗೂ ಮಾತನಾಡಬಾರದು ಎಂದು ಏಜಾಜ್ ಆಗಾಗ ಜಗಳ ತೆಗೆದು, ಹಲ್ಲೆಯೂ ಮಾಡುತ್ತಿದ್ದ. ಪತ್ನಿಯ ಶೀಲ ಶಂಕಿಸಿ 2023ರ ಫೆಬ್ರುವರಿ 15ರಂದು ರಾತ್ರಿ ಮಲಗಿದ್ದಾಗ ಆಕೆಯ ತಲೆಯ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ್ದ. ಈ ಸಂಬಂಧ ಸ್ಟೇಷನ್ ಬಜಾರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದರು. ವಾದ-ಪ್ರತಿವಾದ ಆಲಿಸಿದ 5ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಚಂದ್ರಶೇಖರ ಕರೋಶಿ ಅವರು ಏಜಾಜ್ ಅಹಮದ್‌ಗೆ ಜೀವಾವಧಿ ಶಿಕ್ಷೆ ಹಾಗೂ 30 ಸಾವಿರ ರೂ.ದಂಡ ವಿಧಿಸಿ ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಹಯಾಳಪ್ಪ ಎನ್.ಬಳಬಟ್ಟಿ ವಾದ ಮಂಡಿಸಿದರು.

## ವೈದ್ಯಕೀಯ ವಿದ್ಯಾರ್ಥಿಗೆ ರ್‍ಯಾಗಿಂಗ್: ಐವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ, ಫೆ. 20: ನಗರ ಹೊರ ವಲಯದ ಅಲ್- ಅಮೀನ್ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಯೊಬ್ಬನ ಮೇಲೆ ರ್‍ಯಾಗಿಂಗ್ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ಹಿರಿಯ ವಿದ್ಯಾರ್ಥಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಇಲ್ಲಿನ ಸೈನಿಕ ಶಾಲೆ ಬಳಿಯ ಮಹಮ್ಮದ್ ಝೈನುಲ್ ಜುಲ್ಫಿಕರ್ ಅಲಿ ಕಾಸರ್ (23), ಬಳ್ಳಾರಿ ಜಿಲ್ಲೆ ಸಂಡೂರಿನ ಸಮೀರ್ ಕಾಶಿಂಪೀರ್ ತಾಡಪತ್ರಿ (24), ರಾಯಚೂರು ಜಿಲ್ಲೆಯ ಮುದಗಲ್ ದ ಶೇಕ್ ಸಾವುದ್, (23), ಬಳ್ಳಾರಿ ಜಿಲ್ಲೆ ಶಿರಗುಪ್ಪಾದ ಮನ್ಸೂರ್ ಭಾಷಾ ಖಾಜಾ ಹುಸೇನ್ (24), ಇಂಡಿ ತಾಲೂಕಿನ ಹಿಂಗಣಿಯ ಮುಝಾಫರ್ ಉರ್ಫ್ ಮುಜೀಬ್ ಜಮಾದಾರ (23) ಬಂಧಿತ ಆರೋಪಿಗಳು.

ಈ ಆರೋಪಿಗಳು ದ್ವಿತೀಯ ವರ್ಷದ ಎಂಬಿಬಿಎಸ್ ವಿದ್ಯಾರ್ಥಿ ಜಮ್ಮು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಹಮೀಮ್ ಗುಲಾಂ ಅಹ್ಮದ್ ಭಟ್ ಎಂಬುವರಿಗೆ, ಕ್ರಿ-ಕೆಟ್ ಆಟದ ಸಮಯದಲ್ಲಿ, ಮೈದಾನವನ್ನು ತೊರೆಯುವಂತೆ ಒತ್ತಾಯಿಸಿದ್ದು, ತನ್ನ ಇಚ್ಚೆಗೆ ವಿರುದ್ಧವಾಗಿ ನೃತ್ಯ ಮಾಡಲು ಹಾಗೂ ಸೆಲ್ಯೂಟ್ ಮಾಡಲು ಒತ್ತಡ ಹೇರಿ ಮಾನಸಿಕವಾಗಿ ಹಿಂಸೆ ನೀಡಿದ್ದಲ್ಲದೆ ನಿಂದಿಸಿ, ಆರೋಪಿಗಳು ಹಾಸ್ಟೆಲ್ ಕೊಠಡಿಗೆ ನುಗ್ಗಿ ಹಲ್ಲೆ ನಡೆಸಿದ್ದಾರೆ. ನೊಂದ ವಿದ್ಯಾರ್ಥಿಯ ಪರಿಚಿತ ನಾಶೀರ್ ಹುಸೇನ್ ಪ್ರಧಾನ ಮಂತ್ರಿ, ಕೇಂದ್ರ ಗೃಹ ಸಚಿವ, ಜಮ್ಮು ಕಾಶ್ಮೀರ ಮುಖ್ಯಮಂತ್ರಿ, ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿ ದೂರು ನೀಡಿದ್ದಾರೆ. ಈ ಸಂಬಂಧ ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮನಸ್ಸು ಶಾಂತವಾಗಿರುವುದೇ ಮನೆ ಶಾಂತಿ : ಡಾ. ಬಸವಲಿಂಗ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.20:ಮನೆಯಲ್ಲಿರುವವರೆಲ್ಲರ ಮನಸ್ಸು ಶಾಂತ ವಾಗಿರುವುದೇ ಮನೆ ಶಾಂತಿ ಆಚರಣೆಯಾಗಿದೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.



ಪಟ್ಟಣದ ಸಿರಗೆರೆ ಪರಿವಾರದ ವಾಸ್ತುಶಾಂತಿ ಸಮಾರಂಭದ ಸಾನಿಧ್ಯವಹಿಸಿ ಅವರು ಮಾತನಾಡಿದರು. ಮನೆಯಲ್ಲಿ ಪ್ರತಿನಿತ್ಯ ಲಿಮಗಪೂಜೆ, ವಚನ ಪಠಣ ಮಾಡುತ್ತಿರಬೇಕು. ಮನೆಯಲ್ಲಿರುವ ಎಲ್ಲರೂ ಗುರುಗಳ, ಮಹಾತ್ಮರ, ಶರಣರ ಪ್ರವಚನ ಆಲಿಸಬೇಕು. ಇದನ್ನೆಲ್ಲ ಮಾಡುವುದರಿಂದ ಮನಸ್ಸು ಶಾಂತವಾಗಿರುತ್ತದೆ. ಮನಸ್ಸು ಶಾಂತಮಾಡಿಕೊಳ್ಳುವುದೇ ಮನೆ ಶಾಂತಿಯಾಗಿದೆ. ಮನೆಯಲ್ಲಿಯ ಎಲ್ಲಾ ಸಮಸ್ಯೆಗಳ ಪರಿಹಾರ ವಚನ ಪಠಣದಲ್ಲಿದೆ. ಶರಣರ ವಚನ ಪಠಣ ಮಾಡುವುದರಿಂದ ನಮ್ಮ ಮನಸ್ಸು ಪರಿಶುದ್ಧವಾಗಿ, ಮನಸ್ಸು ಶಾಂತವಾಗುವುದು. ಮ ಎಂದರೆ ಮನಸ್ಸು, ನೆ ಎಂದರೆ ನೆಮ್ಮದಿ, ಮನಸ್ಸು ನೆಮ್ಮದಿಯಿಂದಿರುವುದೇ ಮನೆಯಾಗಿದೆ. ಮನೆಯಲ್ಲಿರುವವರು ಕೋಪ, ತಾಪ ಬಿಟ್ಟು, ಸಂತೋಷ, ಆನಂದದಿಂದ ಇದ್ದು, ಎಲ್ಲರೂ ಒಬ್ಬರನ್ನೊಬ್ಬರು ಅರಿತು ಬಾಳುವೆ ಮಾಡಬೇಕು. ಅಂದಾಗ ಮಾತ್ರ ಅಂತಹ ಮನೆಯಲ್ಲಿ ಶಾಂತಿ ನೆಲೆಸುವುದು ಎಂದು ಹೇಳಿದರು.

ಪ್ರಾರಂಭದಲ್ಲಿ ಹಿರೇಮಠ ಸಂಸ್ಥಾನದ ಪೂಜ್ಯರಾದ ಶ್ರೀ ಬಸವಲಿಂಗ ಸ್ವಾಮೀಜಿ, ಬಸವಕಲ್ಯಾಣ ಅನುಭವ ಮಂಟಪದ ಶ್ರೀ ಶಿವಾನಂದ ಸ್ವಾಮೀಜಿ, ಹಿರೇಮಠದ ಶ್ರೀ ಮಹಾಲಿಂಗ ಸ್ವಾಮೀಜಿ, ಬಸವ ವಚನ ಪಠಣ ಮತ್ತು ನೂ-ರೆಂಟು ನಾಮಾವಳಿ ವಾಚನ ಮಾಡಿದರು. ಪಂಡಿತ ಪುಟ್ಟರಾಜ ಗವಾಯಿಯವರ ಶಿಷ್ಯರಾದ ಬಸವಜಯಂತಿ ಮತ್ತು ದಿವ್ಯಾಂಜಲಿಯವರು ವಚನ ಗಾಯನ ನಡೆಸಿಕೊಟ್ಟರು. ನಂತರ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಪೂಜೆ ನೆರವೇರಿಸಿದರು. ಶೋಭಾವತಿ ಮಲ್ಲಿಕಾರ್ಜುನ ಘಾಳೆ ಮುಚಳಂಬ ಪ್ರವಚನ ಮಾಡಿದರು.

ಶೃತಿ, ದೇವೆಂದ್ರ ಸಿರಗೆರೆಯವರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸಂಸದ ಸಾಗರ ಖಂಡ್ರೆ, ಡಾ.ನಂದರಾಜ ಪಾಟೀಲ, ವಿಜಯಕುಮಾರ ಗೌಡಗಾವೆ, ಪರಮೇಶ್ವರ ಪಾಟೀಲ, ನಂದಿನಿ ಪಡಶೆಟ್ಟೆ, ಪಾರ್ವತಿ ಪಿ ಪಾಟೀಲ ಉಪಸ್ಥಿತರಿದ್ದರು.

## ಇಂದಿನಿಂದ ಸಾರ್ವಜನಿಕ ಕುರಾನ್ ಪ್ರವಚನ:10 ಸಾವಿರ ಜನ ಸೇರುವ ನಿರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಫೆ.20:ಪಟ್ಟಣದಲ್ಲಿ ಜಮಾತೆ ಇಸ್ಲಾಮಿ ಹಿಂದ್ ಸಂಘಟನೆವತಿಯಿಂದ ಫೆ.21ರಿಂದ 23ರ ವರೆಗೆ ನಡೆಯಲಿರುವ ಸಾರ್ವಜನಿಕ ಕುರ್ ಆನ್ ಪ್ರವಚನ ಕಾರ್ಯಕ್ರಮದ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದು ಇದರ ಯಶಸ್ವಿಗೆ ಪಟ್ಟಣದ ಸರ್ವ ಸಮಾಜದ ಬಾಂಧವರು ಸಹಕರಿಸಬೇಕು ಎಂದು ಜಮಾತೆ ಇಸ್ಲಾಮಿ ಹಿಂದ್ ನಗರ ಅಧ್ಯಕ್ಷ ಮುಜಾಹೀದ ನಮಾಜಕಟ್ಟಿ ಮನವಿ ಮಾಡಿಕೊಂಡರು. ಗುರುವಾರ ಪಟ್ಟಣದಲ್ಲಿರುವ ಕುರ್ ಆನ್ ಪ್ರವಚನ ಕಾರ್ಯಾಲಯದಲ್ಲಿ ಕರೆದ ಸುದ್ದಿಗೋಷ್ಠಿಯಲ್ಲಿ ಪ್ರವಚನದ ವಿವರ ನೀಡಿದ ಅವರು ಮೂರು ದಿನಗಳವರೆಗೆ ಪ್ರತಿ ದಿನ ಸಂಜೆ 7ರಿಂದ 9 ರವರೆಗೆ ನಡೆಯಲಿರುವ ಈ ಪ್ರವಚನ ಕಾರ್ಯಕ್ರಮವನ್ನು ಖ್ಯಾತ ಪ್ರವಚನಕಾರ ಜನಾಬ. ಮಹಮ್ಮದ್ ಕುಂಞ ಜಜಟಜಜ ಅವರು ನಡೆಸಿಕೊಡಲಿದ್ದಾರೆ. ಪ್ರಥಮ ದಿನದ ಪ್ರವಚನವು ಅಮಲು ಮುಕ್ತ ಸಮಾಜ ಮತ್ತು ಯುವ ಜನತೆ ವಿಷಯದ ಮೇಲೆ ನಡೆಯಲಿದ್ದು ಕಾರ್ಯಕ್ರಮದ ಸಾನಿಧ್ಯವನ್ನು ಖಾಸ್ಗತೇಶ್ವರ ಮಠದ ಪೂಜ್ಯಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು,




ಕೊಡೆಕಲ್ಲದ ಶ್ರೀ ಶಿವಕುಮಾರ ಮಹಾಸ್ವಾಮಿಗಳು, ಶ್ರೀ ಶರಣಪ್ಪ ಮುತ್ಯಾ ಶರಣರು, ಜನಾಬ ಸೈಯದ್ ಶಕೀಲ ಅಹ್ಮದ್ ಖಾಜಿ, ಫಾದರ್ ರಾಬರ್ಟ್ ಕ್ರಿಸ್ಟಾ ವಹಿಸುವರು. ಸಕ್ಕರೆ ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲರು ಕಾರ್ಯಕ್ರಮ ಉದ್ಘಾಟಿಸುವರು, ಜಮಾಅತೆ ಇಸ್ಲಾಮಿ ಹಿಂದ್ ಬೆಳಗಾವಿ ವಲಯ ಸಂಚಾಲಕ ಎಂ.ಐ.ಬಡಗಣ ಅಧ್ಯಕ್ಷತೆ ವಹಿಸಲಿದ್ದಾರೆ. ತಹಶೀಲ್ದಾರ್ ಕೀರ್ತಿ ಚಾಲಕ್, ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ, ಆರ್ ಎಸ್ ಪಾಟೀಲ ಕೂಚಬಾಳ, ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಪತ್ರಕರ್ತ ಜಿ.ಟಿ. ಗೋರ್ಪಡೆ ಹಾಗೂ ಪಟ್ಟಣದ ಗಣ್ಯಮಾನ್ಯರು ಉಪಸ್ಥಿತರಿರುತ್ತಾರೆ.

> ಪವಿತ್ರ ಕುರ್ ಆನ್ ಗ್ರಂಥದ ಶಾಂತಿಯ ಸಂದೇಶವನ್ನು ಸರ್ವ ಸಮಾಜದ ಬಾಂಧವರಿಗೆ ತಲುಪಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ ಈ ಪ್ರವಚನ ಕಾರ್ಯಕ್ರಮದ ಯಶಸ್ವಿಗೆ ಎಲ್ಲರ ಸಹಕಾರ ಇರಲಿ. ಮುಜಾಹೀದ ನಮಾಜಕಟ್ಟಿ ನಗರ ಅಧ್ಯಕ್ಷ ತಾಳಿಕೋಟಿ.

ಗ್ರಾಮೀಣ ಭಾಗದಿಂದಲೂ ಎಲ್ಲ ಸಮಾಜದ ಬಾಂಧವರು ಈ ಕಾರ್ಯಕ್ರಮಕ್ಕೆ ಸ್ವಯಂ ಪ್ರೇರಿತರಾಗಿ ಆಗಮಿಸುತ್ತಿದ್ದಾರೆ ಅವರಿಗೆ ಸೂಕ್ತ ವ್ಯವಸ್ಥೆಯನ್ನು ಮಾಡಲಾಗುವುದು. ಪ್ರವಚನಕ್ಕೆ ಆಗಮಿಸುವ ಆಸಕ್ತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನೋಡಿಕೊಳ್ಳಲಾಗುವುದು ಮಾಧ್ಯಮದ ಮಿತ್ರರು ಈ ಪ್ರವಚನ ಕಾರ್ಯಕ್ರಮದ ಸಂದೇಶವನ್ನು ಇಡೀ ನಾಡಿಗೆ ತಲುಪಿಸುವ ಕಾರ್ಯವನ್ನು ಮಾಡಬೇಕು ಎಂದರು. ಸುದ್ದಿಗೋಷ್ಠಿಯಲ್ಲಿ ವಲಯ ಸಂಚಾಲಕ ಎಂ.ಐ.ಬಡಗಣ, ಸೈಯದ್ ಶಕೀಲ್ ಅಹ್ಮದ್ ಖಾಜಿ, ಅಲ್ಲಾಭಕ್ಷ ನಮಾಜಕಟ್ಟಿ, ಪ್ರವಚನ ಸಂಚಾಲಕ ಸೈಯದ್ ಇರ್ಫಾನ್ ಖಾಜಿ, ಸಹಸಂಚಾಲಕ ಹುಸೇನ್ ಪಟೇಲ, ಖಜಾಂಚಿ ಎಂ.ಎ.ಮೇತ್ರಿ, ಕಾಸೀಮ ಅಲಿ ಮನ್ಸೂರ ಇದ್ದರು.

## ಮುನಿರಾಬಾದ ಡ್ಯಾಂ ಸಮಗ್ರ ಅಭಿವೃದ್ಧಿಗೆ ಕೈ ಜೋಡಿಸಿ: ರಾಹುಲ್ ರತ್ನಂ ಪಾಂಡೇಯ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.20: ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯತ್ ಸಮಗ್ರ ಅಭಿವೃದ್ಧಿ ಕೈಗೊಳ್ಳುವ ಕುರಿತಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರು ಮಂಗಳವಾರ ಮುನಿರಾಬಾದ್‌ಗೆ ಭೇಟಿ ನೀಡಿ, ವಿವಿಧ ಸ್ಥಳಗಳನ್ನು ಪರಿಶೀಲಿಸಿ ಅಲ್ಲಿನ ಆಡಳಿತ ಮಂಡಳಿಯೊಂದಿಗೆ ಸಭೆ ನಡೆಸಿದರು. ಇದೇ ವೇಳೆ ಜಿ.ಪಂ ಸಿಇಓ ಅವರು ಮಾತನಾಡಿ, ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ ಸಂಪೂರ್ಣ ಅಭಿವೃದ್ಧಿಪಡಿಸಲು ಕೆಲವು ತಾಂತ್ರಿಕ ಅಡಚಣೆಗಳಿದ್ದು, ಅವುಗಳನ್ನು ಪರಿಹರಿಸಲು ಮೇಲಾಧಿಕಾರಿಗಳಿಗೆ ಸಂಪೂರ್ಣ ವರದಿ ಸಿದ್ಧಪಡಿಸಿ ಸಲ್ಲಿಸಬೇಕಿದೆ. ಇದಕ್ಕಾಗಿ ಅಗತ್ಯ ಮಾಹಿತಿ ನೀಡಲು ಕ್ರಮ ಕೈಗೊಳ್ಳಬೇಕು. ಒಟ್ಟಾರೆ, ಮುನಿರಾಬಾದ್ ಡ್ಯಾಂ ಸಮಗ್ರ ಅಭಿವೃದ್ಧಿಗೆ ಗ್ರಾಮ ಪಂಚಾಯತ್ ಆಡಳಿತ ಮಂಡಳಿಯವರು ಕೈಜೋಡಿಸಬೇಕು ಎಂದು ಹೇಳಿದರು. 1993ರಲ್ಲಿ ಮುನಿರಾಬಾದ ಡ್ಯಾಂ ಹೊಸ ಗ್ರಾಮ ಪಂಚಾಯತ ಆಗಿ ರಚನೆಯಾಗಿದ್ದು, ಕಂದಾಯ ದಾಖಲೆಗಳ ಪ್ರಕಾರ ಮುನಿರಬಾದ ಯೋಜನಾ ಪ್ರದೇಶ ವೆಂದು ನಮೂದಾಗಿರುತ್ತದೆಂದು ಆಡಳಿತ ಮಂಡಳಿ ವಿವರಿಸಿದರು. ಗ್ರಾಮ ಪಂಚಾಯತ ಮುಂದುಗಡೆ 280 ಫುಟ್ ಜಾಗ ಲಭ್ಯವಿದ್ದು, ವಾಣಿಜ್ಯ ಮಳಿಗೆಗಳನ್ನು ಜಿಲ್ಲಾ ಮತ್ತು ತಾಲೂಕ ಪಂಚಾಯತಿ ಅನುದಾನದಲ್ಲಿ ನಿರ್ಮಿಸಿಕೊಡುವಂತೆ ಸಿಇಓರವರಿಗೆ ಮನವಿ ಮಾಡಿದರು. ಇದರಿಂದ ಗ್ರಾಮ ಪಂಚಾಯತಿಗೆ ಆದಾಯ ಸೃಜನೆಯಾಗುತ್ತದೆ ಎಂದರು. ಗ್ರಾಮದಲ್ಲಿ ಮಹಿಳಾ ಸಂಜೀವಿನಿ ಸಂಘದ ಮಹಿಳೆಯರಿಂದ ಹೋಂ ಸ್ಟೇಗಳನ್ನು ನಿರ್ಮಿಸಲು ಜಾಗೆ ಇದ್ದವರು ಕೂಡಲೇ ಮಾಹಿತಿಯನ್ನು ನೀಡುವಂತೆ ಸಿಇಓ ಅವರು ಹೇಳಿದರು.

*ಗ್ರಾಮೀಣ ಸಂತೆಕಟ್ಟೆ ನಿರ್ಮಾಣ ಸ್ಥಳ ಪರಿಶೀಲನೆ:* ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಗ್ರಾಮೀಣ ಸಂತೆ ಕಟ್ಟೆ ನಿರ್ಮಿಸಲು ಈಗಾಗಲೇ ಹಳೆ ಪೋಲಿಸ್ ಠಾಣೆಯ ಜಾಗೆಯಲ್ಲಿ ಗ್ರಾಮೀಣ ಸಂತೆ ಕಟ್ಟೆ ನಿರ್ಮಿಸಲು ಸಿಇಓ ಅವರು ಸ್ಥಳ ವೀಕ್ಷಣೆ ಮಾಡಿದರು. ಇದಲ್ಲದೇ ವೀಕಪಂಪಾವನದಲ್ಲಿ ಅಣೆಕಟ್ಟು ನಿರ್ಮಿಸಿದ ಕುರಿತು ವಿಡಿಯೋ




ಪ್ರದರ್ಶನ ವ್ಯವಸ್ಥೆ, ವಿಜ್ಞಾನ ಉದ್ಯಾನವನ, ಬೋಟಿಂಗ್ ವ್ಯವಸ್ಥೆ ಕಲ್ಪಿಸಲು ಪರಿಶೀಲನೆ ನಡೆಸಿದರು. *ವಿದ್ಯಾರ್ಥಿಗಳಿಗಾಗಿ ತೋಟಗಾರಿಕೆ ತರಬೇತಿಯಲ್ಲಿ ಭಾಗಿ:* ಶಾಲಾ ವಿದ್ಯಾರ್ಥಿಗಳಿಗೆ ತೋಟಗಾರಿಕೆ ಇಲಾಖೆಯಿಂದ ಏರ್ಪಡಿಸಿದ್ದ, ತೋಟಗಾರಿ-ಕೆಯ ಕುರಿತ ತರಬೇತಿಯಲ್ಲಿ ಭಾಗವಹಿಸಿದ ಸಿಇಓ ಅವರು, ತೋಟಗಾರಿಕೆಯಲ್ಲಿ ಕೂಡಾ ನಮ್ಮ ಜೀವನ ರೂಪಿಸಿಕೊಳ್ಳುವಷ್ಟು ಭವಿಷ್ಯವಿದ್ದು, ಓದಿನ ಕಡೆಗೆ ಗಮನಹರಿಸುವದರ ಜೊತೆಗೆ ತೋಟಗಾರಿಕೆ ಮಾಡಿಕೊಳ್ಳುವ ಕುರಿತು ಆಸಕ್ತಿ ವಹಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಶಾಲಾ ವಿದ್ಯಾರ್ಥಿಗಳಿಗೆ ವೈಯಕ್ತಿಕ ಶೌಚಾಲಯ ಕಡ್ಡಾಯವಾಗಿ ಬಳಕೆ ಮಾಡುವದು ಮತ್ತು ಕುಟುಂಬದ ಸದಸ್ಯರಿಗೆ ಮನವೊಲಿಸಬೇಕೆಂದು ತಿಳಿಸಿದರು. *ಪಂಪಾವನಕ್ಕೆ ಭೇಟಿ:* ಸಿಇಓ ಅವರು ಪಂಪಾವನಕ್ಕೆ ಭೇಟಿ ನೀಡಿ, ಅಲ್ಲಿ ಅಗತ್ಯ ಇರುವ ಬೋಟಿಂಗ್ ಹಾಗೂ ವಿಜ್ಞಾನ ಉದ್ಯಾನವನ ನಿರ್ಮಿಸುವ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಮಿನು ಮರಿ ಕೊಳ ವೀಕ್ಷಣೆ: ಮೀನುಗಾರಿಕೆ ಇಲಾಖೆಯಿಂದ ನಿರ್ಮಿಸಲಾದ ಮಿನು ಮರಿ ಕೊಳಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರು ಭೇಟಿ ನೀಡಿ, ವೀಕ್ಷಣೆ ಮಾಡಿದರು. ಬಳಿಕ ಮೀನುಗಾರಿಕೆ ಇಲಾಖೆ ಅಧಿಕಾರಿಗಳೊಂದಿಗೆ ಮಾಹಿತಿ ಪಡೆಯುತ್ತಾ, ಇಲಾಖೆಯಿಂದ ಇನ್ನುಷ್ಟು ಅನುದಾನ ಬಿಡುಗಡೆಗಾಗಿ ಕೂಡಲೇ ಮೇಲಾಧಿಕಾರಿಗಳಿಗೆ ಪತ್ರ ವ್ಯವಹಾರ ಕೈಗೊಳ್ಳುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಾಲೂಕ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಬಾಲಚಂದ್ರನ್, ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯತ ಅಧ್ಯಕ್ಷ ಆಯೂಬ್ ಖಾನ್, ಉಪಾಧ್ಯಕ್ಷೆ ಸೌಭಾಗ್ಯ ನಾಗರಾಜ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಉಕ್ಕುಂದ, ತಾಲೂಕ ಯೋಜನಾಧಿಕಾರಿ ರಾಜೇಸಾಬ ನದಾಫ್, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಮಹೇಶ್ ಸಜ್ಜನ, ಗ್ರಾಮ ಪಂಚಾಯತಿ ಸರ್ವ ಸದಸ್ಯರು, ಕಾರ್ಯದರ್ಶಿ, ದ್ವಿತೀಯದರ್ಜೆ ಲೆಕ್ಕಸಹಾಯಕರು, ಸಂಜೀವಿನಿ ಯೋಜನೆ ಮತ್ತು ನರೇಗಾ ಯೋಜನೆಯ ಸಂಯೋಜಕರುಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಉಪಸ್ಥಿತರಿದ್ದರು

ಕರ್ನಾಟಕ ಸರ್ಕಾರ
ಪುರಸಭೆ ಕಾರ್ಯಾಲಯ ಚಿಟಗುಪ್ಪ
ಸಂ: ಪುಸಚಿ/ಕಾಮಗಾರಿ/ಸಿಆರ್- /2024-25/456 ದಿನಾಂಕ: 19.02.2025
:; ಟೆಂಡರ್ ಪ್ರಕಟಣೆ ::
1) ಕಾಮಗಾರಿ / ಸರಕು / ಸೇವೆಯ ವಿವರ: **(DMA/2024-25/EL/WORK_INDENT35493) Call-2,** 2) ಕಾಮಗಾರಿ / ಸರಕು / ಸೇವೆಯ ಅಂದಾಜು ಮೊತ್ತ: KPPPನಲ್ಲಿ ನಮೂದಿಸಿದಂತೆ, 3) ಗುತ್ತಿಗೆದಾರರ ಅರ್ಹತೆ ವಿವರ: KPPPನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ: KPPPನಲ್ಲಿ ನಮೂದಿಸಿದಂತೆ, 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು: 03.03.2025 4:30PM, 6) ಟೆಂಡರ ತೆರೆಯುವ ದಿನಾಂಕ: 04.03.2025 5:00PM, 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ: ಮುಖ್ಯಾಧಿಕಾರಿಗಳು, ಪುರಸಭೆ ಚಿಟಗುಪ್ಪ 08483-277536, Email : itstaff_ulb_chittguppa@yahoo.com, 8) ಅಂತರಜಾಲ ತಾಣದ ವಿಳಾಸ: www.kppp.karnataka.gov.in
ಸಹಿ/- ಮುಖ್ಯಾಧಿಕಾರಿ
ಪುರಸಭೆ ಚಿಟಗುಪ್ಪಾ
ವಾ.ಸಾ.ಸಂ.ಇ/ಬೀದರ/414/ಕೆ.ಎಸ್.ಎಂ.ಸಿ.&ಎ/2024-25

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.